ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 117

15–10–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 116

# ಲೋಕಾಯುಕ್ತ ಬಲೆಗೆ ಬಿದ್ದ 12 ಭ್ರಷ್ಟ ತಿಮಿಂಗಿಲಗಳು

## ರಾಜ್ಯಾದ್ಯಂತ ಹಲವು ಅಧಿಕಾರಿಗಳ ಮನೆ ಮೇಲೆ ದಾಳಿ

**ಬೆಂಗಳೂರು,ಅ.14–** ನಿಗದಿತ ಆದಾಯ ಮೂಲ ಮೀರಿ ಅಪಾರ ಪ್ರಮಾಣದ ಆಸ್ತಿ ಪಾಸ್ತಿ ಸಂಪಾದಿಸಿರುವ ಆರೋಪಕ್ಕೆ ಸಿಲುಕಿರುವ ಸರ್ಕಾರಿ ಅಧಿಕಾರಿಗಳಿಗೆ ಲೋಕಾಯುಕ್ತ ಪೊಲೀಸರು ಮೈಚಳಿ ಬಿಡಿಸಿದ್ದಾರೆ

ಬೆಂಗಳೂರು, ಹಾಸನ, ಕಲಬುರಗಿ, ಚಿತ್ರದುರ್ಗ, ಉಡುಪಿ, ದಾವಣಗೆರೆ, ಹಾವೇರಿ, ಬಾಗಲಕೋಟೆ ಸೇರಿ ಹಲವು ಜಿಲ್ಲೆಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿ 12 ಮಂದಿ ಬ್ರಹ್ಮಾಂಡ ಭ್ರಷ್ಟಾಚಾರವನ್ನು ಬಯಲಿಗೆ ಎಳೆದಿದ್ದಾರೆ ಲೋಕಾಯುಕ್ತರ ಬಲೆಗೆ ಬಿದ್ದ ಈ ಅಧಿಕಾರಿಗಳ ಅಪಾರ ಪ್ರಮಾಣದ ಆಸ್ತಿ ಪಾಸ್ತಿ ಮತ್ತು ಜಿಲ್ಲಾಭರಣವನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ನಿಗದಿತ ಆದಾಯ ಮೂಲ ಮೀರಿ ಕೋಟ್ಯಾಂತರ ಅಕ್ರಮ ಆಸ್ತಿ ಸಂಗ್ರಹಣೆ ಆರೋಪದಡಿ ರಾಜ್ಯಾದ್ಯಂತ 12 ಸರ್ಕಾರಿ ಅಧಿಕಾರಿಗಳಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ಮುಂದುವರೆಸಿದ್ದಾರೆ.

ಅಧಿಕಾರಿಗಳಿಗೆ ಸಂಬಂಧಿಸಿದ ಸ್ಥಳಗಳಲ್ಲಿ ದಾಳಿ ನಡೆಸಲಾಗಿದ್ದು ಶೋಧ ಕಾರ್ಯ ಮುಂದುವರೆಸಲಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

**ದಾವಣಗೆರೆಯಲ್ಲಿ ದಾಳಿ:**

ದಾವಣಗೆರೆ ಜಿಲ್ಲೆಯ ಇಬ್ಬರು ಅಧಿಕಾರಿಗಳ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಈ ಇಬ್ಬರು ಅಧಿಕಾರಿಗಳಿಗೆ ಸೇರಿದ ಹತ್ತು ಕಡೆ ಇರುವ ಆಸ್ತಿ–ಪಾಸ್ತಿಗಳ ಮೇಲೆ ಏಕಕಾಲಕ್ಕೆ ದಾಳಿ ನಡೆದಿದೆ.

ಕೆಆರ್ ಐಡಿಎಲ್ ಸಹಾಯಕ ಅಭಿಯಂತರ ಜಗದೀಶ್ ನಾಯ್ಕ್ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆಯ ಎಸ್ ಡಿಎ ನಡುವಿನಮನೆ ಎಂಬ ಇಬ್ಬರ ಮನೆಗಳ ಮೇಲೆ ಏಕಕಾಲಕ್ಕೆ ದಾಳಿ ನಡೆಸಿ ದಾಖಲೆ ಪರಿಶೀಲನೆಯನ್ನು ಲೋಕಾಯುಕ್ತ ಅಧಿಕಾರಿಗಳು ನಡೆಸುತ್ತಿದ್ದಾರೆ.ದಾವಣಗೆರೆ ಲೋಕಾಯುಕ್ತ ಎಸ್ಪಿ ಎಂಎಸ್ ಕೌಲಾಪುರೆ ನೇತೃತ್ವದ ತಂಡದಿಂದ ಈ ದಾಳಿ ನಡೆಸಲಾಗಿದೆ.

**ಎಸ್ ಡಿಎ ಮೇಲೆ ದಾಳಿ:**

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಎಸ್ ಡಿಎ ನಡುವಿನಮನೆ ಮೇಲೆ ದಾಳಿ ಮಾಡಿ ಇಲ್ಲಿನ ಸರಸ್ವತಿ ನಗರದಲ್ಲಿರುವ ಮನೆಯಲ್ಲಿ ತಪಾಸಣೆ ನಡೆಸಲಾಗುತ್ತಿದೆ. ಲೋಕಾಯುಕ್ತ ಇನ್ಸಪೆಕ್ಟರ್ ಸರಳ ಅವರು ಬೆಳಗ್ಗೆಯಿಂದಲೇ ನಡುವಿನಮನೆ ನಿವಾಸದಲ್ಲಿ ಪರಿಶೀಲನೆ ನಡೆಸುತ್ತಿದ್ದಾರೆ. ಸ್ಥಳಕ್ಕೆ ಲೋಕಾಯುಕ್ತ ಎಸ್ ಪಿ ಕೌಲಾಪುರೆ ಭೇಟಿ ಪರಿಶೀಲನೆ ನಡೆಸಿದ್ದಾರೆ.

ಇಲ್ಲಿನ ಕೆಆರ್ಐಡಿಎಲ್ ಸಹಾಯಕ ಇಂಜಿನಿಯರ್ ಜಗದೀಶ್ ನಾಯ್ಕ್ ಅವರ ಮನೆಯಲ್ಲೂ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ಶಿವಮೊಗ್ಗ ಜಿಲ್ಲೆಯ ಮೂರು ಕಡೆಗಳಲ್ಲಿ ಜಗದೀಶ್ ನಾಯ್ಕ್ ಗೆ ಸೇರಿದ ಮೂರು ಮನೆಗಳ ಮೇಲೆ ದಾಳಿ ನಡೆದಿದೆ. ದಾವಣಗೆರೆಯಲ್ಲಿ ಎಪಿಎಂಸಿ ಬಳಿ ಇರುವ ಕಚೇರಿ ಮೇಲೂ ದಾಳಿ ಮಾಡಲಾಗಿದೆ.




**ಕೃಷಿ ಅಧಿಕಾರಿಗೆ ಬಿಸಿ:**

ಅಕ್ರಮ ಆಸ್ತಿಗಳಿಕೆ ಹಿನ್ನಲೆಯಲ್ಲಿ ನಗರದಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಬಿಸಿ ಮುಟ್ಟಿಸಿದ್ದಾರೆ.

ಔರಾದ್ ತಾಲೂಕಿನ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ದೂಳಪ್ಪ ಅವರ ಕಚೇರಿ ನಿವಾಸ ಸೇರಿ ಏಕಕಾಲಕ್ಕೆ ಜಿಲ್ಲೆಯಾದ್ಯಂತ 4 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ಕೈಗೊಂಡಿದ್ದಾರೆ.

ನಗರದ ಗುರುನಾನಕ್ ಕಾಲೋನಿಯ ನಿವಾಸ, ಭಾಲ್ಕಿಯ ಕಡ್ಯಾಳ ಗ್ರಾಮದ ನಿವಾಸ, ಔರಾದ್‌ನ ಎಡಿ ಆಫೀಸ್ ಮತ್ತು ಔರಾದ್‌ನ ಮುದೋಳ ಕಚೇರಿ ಮೇಲೆ ದಾಳಿ ಮಾಡಲಾಗಿದೆ.

ಅಕ್ರಮ ಆಸ್ತಿಗಳಿಗೆ ದೂರು ಬಂದ ಹಿನ್ನೆಲೆಯಲ್ಲಿ ದಾಳಿ ಮಾಡಿ ಲೋಕಾಯುಕ್ತ ಅಧಿಕಾರಿಗಳು ನಿವಾಸದಲ್ಲಿ ದಾಖಲೆಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ಲೋಕಾಯುಕ್ತ ಎಸ್‌ಪಿ ಸಿದ್ದರಾಜು ಮಾರ್ಗದರ್ಶನದಲ್ಲಿ ಲೋಕಾಯುಕ್ತ ಡಿವೈಎಸ್ಪಿ ಹನುಮಂತ ರೆಡ್ಡಿ ನೇತೃತ್ವದಲ್ಲಿ 4 ಕಡೆ ಏಕಕಾಲಕ್ಕೆ ದಾಳಿ ಮಾಡಲಾಗಿದೆ.

**ಎಲ್ಲೆಲ್ಲಿ ದಾಳಿ**

ಹಾಸನ – ಜ್ಯೋತಿ ಮೇರಿ, ಪ್ರಥಮ ದರ್ಜೆ ಸಹಾಯಕಿ – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಕಲಬುರಗಿ – ಧೂಳಪ್ಪ, ಸಹಾಯಕ ನಿರ್ದೇಶಕ – ಕೃಷಿ ಇಲಾಖೆ

ಚಿತ್ರದುರ್ಗ – ಚಂದ್ರಕುಮಾರ್, ಸಹಾಯಕ ನಿರ್ದೇಶಕ – ಕೃಷಿ ಇಲಾಖೆ

ಉಡುಪಿ – ಲಕ್ಷ್ಮೀನಾರಾಯಣ್ ಪಿ ನಾಯಕ್, ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿ

ಬೆಂಗಳೂರು – ಮಂಜುನಾಥ್ ಜಿ, ವೈದ್ಯಾಧಿಕಾರಿ – ಮಲ್ಲಸಂದ್ರ ಹೆರಿಗೆ ಆಸ್ಪತ್ರೆ

ಬೆಂಗಳೂರು – ವಿ ಸುಮಂಗಲ, ನಿರ್ದೇಶಕಿ – ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ

ಬೆಂಗಳೂರು – ಎನ್.ಕೆ ಗಂಗಮರಿ ಗೌಡ, ಸರ್ವೇಯರ್ – ವಿಶೇಷ ಭೂ ಸ್ವಾಧೀನ ಅಧಿಕಾರಿ – ಬಿಎಂಆರ್‌ಸಿಎಲ್

ದಾವಣಗೆರೆ – ಜಗದೀಶ್ ನಾಯಕ್, ಅಸಿಸ್ಟೆಂಟ್ ಎಕ್ಸಿಕ್ಯುಟಿವ್ ಇಂಜಿನಿಯರ್ – ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ

ದಾವಣಗೆರೆ – ಬಿ.ಎಸ್ ನಡುವಿನಮನಿ, ಜ್ಯೂನಿಯರ್ ಇಂಜಿನಿಯರ್ – ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ

ಹಾವೇರಿ – ಅಶೋಕ್, ರೆವಿನ್ಯೂ ಇನ್ಸ್‌ಪೆಕ್ಟರ್ – ರಾಣೆಬೆನ್ನೂರು ತಾಲ್ಲೂಕು

ಹಾವೇರಿ – ಬಸವೇಶ್, ಇನ್‌ಚಾರ್ಜ್ ಎಕ್ಸಿಕ್ಯುಟಿವ್ ಆಫೀಸರ್ – ತಾಲ್ಲೂಕು ಪಂಚಾಯತ್ ಸವಣೂರು

ಬಾಗಲಕೋಟೆ – ಚೇತನ್, ಜ್ಯೂನಿಯರ್ ಇಂಜಿನಿಯರ್ – ಅಸಿಸ್ಟೆಂಟ್ ಇಂಜಿನಿಯರ್ (ಆಲಮಟ್ಟಿ ಬಲದಂಡೆ ಕಾಲುವೆ)

### ಸಿದ್ದು ಔತಣಕೂಟದ ಇನ್‌ಸೈಡ್:

## ಸಚಿವಸ್ಥಾನ ಕಳೆದುಕೊಂಡವರು ಪಕ್ಷದ ಜವಾಬ್ದಾರಿ ವಹಿಸಿಕೊಳ್ಳಿ : ಸಿಎಂ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ಅವರು ಸೋಮವಾರ ರಾತ್ರಿ ಕಾವೇರಿ ನಿವಾಸದಲ್ಲಿ ಸಚಿವರಿಗೆ ಔತಣಕೂಟ ಹಮ್ಮಿಕೊಂಡಿದ್ದರು. ಈ ಔತಣಕೂಟದಲ್ಲಿ ಕೆಲವು ಸಚಿವರು ಗೈರಾಗಿದ್ದಾರೆ. ಡಿನ್ನರ್ ಮೀಟಿಂಗ್‌ನಲ್ಲಿ ಮಹತ್ವದ ಕೆಲವೊಂದು ಚರ್ಚೆಗಳು ನಡೆದಿದ್ದು, ಸಚಿವರಿಗೆ ಸಿಎಂ ಸಿದ್ದರಾಮಯ್ಯ ಅವರು ಮಹತ್ವದ ಕಿವಿಮಾತನ್ನು ಹೇಳಿದ್ದಾರೆ.

ಸೋಮವಾರ ರಾತ್ರಿ ನಡೆದ ಸಭೆಯಲ್ಲಿ ಕೆಲವೊಂದು ಮಹತ್ವದ ವಿಚಾರಗಳ ಬಗ್ಗೆ ಚರ್ಚೆಗಳು ಆಗಿವೆ. ಮುಂಬರುವ ಪಂಚಾಯಿತಿ ಚುನಾವಣೆ, ಗ್ರೇಟರ್ ಬೆಂಗಳೂರು ಚುನಾವಣೆ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ, ಸರ್ಕಾರಿ ಸ್ಥಳಗಳಲ್ಲಿ ಆರ್ ಎಸ್ ಎಸ್ ಕಾರ್ಯಕ್ರಮಗಳ ನಿಷೇಧದ ಬಗ್ಗೆ ಗಂಭೀರ ಚರ್ಚೆಗಳು ನಡೆದಿವೆ. ಇವೆಲ್ಲವೂ ಅನೌಪಚಾರಿಕವಾಗಿ ನಡೆಸಲಾಗಿದೆ. ಸಚಿವರು ತಮ್ಮ ಅಭಿಪ್ರಾಯ ಹಾಗೂ ಸರ್ಕಾರದ ನಿರ್ಧಾರಗಳಿಂದಾಗುತ್ತಿರುವ ಪರಿಣಾಮಗಳ ಬಗ್ಗೆ ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಸಚಿವರ ಕಾರ್ಯವೈಖರಿ ಬಗ್ಗೆಯೂ ಚರ್ಚೆ

ಇನ್ನು ರಾಜ್ಯ ಸರ್ಕಾರಕ್ಕೆ ಎರಡುವರೆ ವರ್ಷ ಆಗುತ್ತಿರುವ ಹಿನ್ನೆಲೆಯಲ್ಲಿ ಸಚಿವರ ಕಾರ್ಯವೈಖರಿಯ ಬಗ್ಗೆಯೂ ಸಿಎಂ ಸಿದ್ದರಾಮಯ್ಯ ಕೆಲವು ಮಾತುಗಳನ್ನು ಸಭೆಯಲ್ಲಿ ಆಡಿದ್ದಾರೆ ಎನ್ನಲಾಗಿದೆ. ಪ್ರತಿಪಕ್ಷಗಳ ನಾಯಕರ ಟೀಕಾಸ್ತ್ರಗಳಿಗೆ ಪ್ರತಿಕ್ರಿಯೆ ನೀಡಬೇಕು ಎಂದು ಸೂಚಿಸಿದ್ದಾರೆ. ಕ್ಷೇತ್ರವಾರು ಬಿಡುಗಡೆ ಆಗಿರುವ ತಲಾ 50 ಕೋಟಿ ರೂ.ಗಳ ಅನುದಾನದ ಸಮರ್ಪಕ ಬಳಕೆ ಬಗ್ಗೆಯೂ ಚರ್ಚೆ ನಡೆದಿದೆ ಎಂದು ತಿಳಿದುಬಂದಿದೆ.



ಕೆಲ ಸಚಿವರ ಬಗ್ಗೆ ಶಾಸಕರು ಅಸಮಾಧಾನ ಹೊರ ಹಾಕಿರುವ ಬಗ್ಗೆಯೂ ಸಭೆಯಲ್ಲಿ ಪ್ರಸ್ತಾಪ ಮಾಡಲಾಗಿದೆ. ಇನ್ನು ಇದೇ ವೇಳೆ ಸಂಪುಟ ಪುನಾರಚನೆ ಬಗ್ಗೆ ಮಾಹಿತಿ ನೀಡಿರುವ ಸಿಎಂ ಸಿದ್ದರಾಮಯ್ಯ, ಹೈಕಮಾಂಡ್ ಈ ನಿಟ್ಟಿನಲ್ಲಿ ನಿರ್ಧಾರ ಕೈಗೊಂಡರೆ ಅದಕ್ಕೆ ಸಿದ್ದವಾಗಿರುವಂತೆ ಸೂಚಿಸಿದ್ದಾರೆ ಎಂಬ ಮಾಹಿತಿ ಇದೆ.

ಸಂಪುಟ ಪುನಾರಚನೆ ವಿಚಾರವನ್ನ ಖುದ್ದು ಪ್ರಸ್ತಾಪಿಸಿರುವ ಸಿಎಂ ಸಿದ್ದರಾಮಯ್ಯ, ಸಂಪುಟ ಪುನಾರಚನೆ ಆಗಲಿದೆ, ಸಿದ್ಧವಾಗಿರಿ. ಸಚಿವ ಸ್ಥಾನ ತ್ಯಾಗ ಮಾಡಬೇಕಾದ ಸಂದರ್ಭ ಬಂದಲ್ಲಿ ಪಕ್ಷದ ಜವಾಬ್ದಾರಿ ವಹಿಸುವ ಉದ್ದೇಶ ಇದೆ. ಈಗಾಗಲೇ ಸಚಿವರ ರಿಪೋರ್ಟ್ ಕಾರ್ಡ್ ಹೈಕಮಾಂಡ್ ಬಳಿ ಇದೆ. ಅಂತಿಮವಾಗಿ ಅವರೇ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಸಭೆಯಲ್ಲಿ ತಿಳಿಸಿದ್ದಾರೆ ಎನ್ನಲಾಗಿದೆ.

## ಜಿಲ್ಲಾಧ್ಯಕ್ಷರ ಬದಲಾವಣೆಯ ಪ್ರಶ್ನೆಯೇ ಇಲ್ಲ. ರೇಣುಕಾಚಾರ್ಯ ಉಚ್ಚಾಟನೆ ಎಂಬ ಹೇಳಿಕೆ ಹಾಸ್ಯಾಸ್ಪದ: ಮಾಜಿ ಸಚಿವ ಎಂ.ಪಿ.ಆರ್.

**ದಾವಣಗೆರೆ.ಅ.14:** ಸೂರ್ಯ ಚಂದ್ರ ಇರೋದು ಎಷ್ಟು ಸತ್ಯವೋ, ರಾಜಶೇಖರ್ ನಾಗಪ್ಪ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ಮುಂದುವರೆಯೋದು ಅಷ್ಟೇ ಸತ್ಯ, ಜಿಲ್ಲಾಧ್ಯಕ್ಷರ ಬದಲಾವಣೆಯ ಪ್ರಶ್ನೆಯೇ ಇಲ್ಲ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಹೇಳಿದರು.

ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾಧ್ಯಕ್ಷರು ಯಾವ ಬಣಕ್ಕೂ ಸೇರದೆ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪಕ್ಷ ಸಂಘಟನೆ ಮಾಡುತ್ತಿದ್ದಾರೆ, ಅಧ್ಯಕ್ಷರ ಬದಲಾವಣೆ ಎಂಬುದು ಊಹಾಪೋವಾ ಹೊರತು ಸತ್ಯ ಅಲ್ಲ ಎಂದರು.

ಜಿಲ್ಲಾಧ್ಯಕ್ಷರು ಪಕ್ಷ ಕೊಟ್ಟ ಎಲ್ಲಾ ಕೆಲಸವನ್ನು ಅಚ್ಚುಕಟ್ಟಾಗಿ ಮಾಡುತ್ತಿದ್ದು ಪಕ್ಷ ಮಜುಭೂತಾಗಿದೆ. ಮುಂಬರುವ ಸ್ಥಳಿಯ ಸಂಸ್ಥೆ ಚುನಾವಣೆಯಲ್ಲಿ ಕಾರ್ಯಕರ್ತರಿಗೆ ಅಧಿಕಾರ ಕೊಡ್ತೀವಿ ಅಷ್ಟೇ ಅಲ್ಲದೇ ಎಂಟು ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲುತ್ತೇ ಅದನ್ನು ಮಾಡಿ ತೋರಿಸುತ್ತೇವೆ ವಿಶ್ವಾಸ ವ್ಯಕ್ತಪಡಿಸಿದರು.

ರೇಣುಕಾಚಾರ್ಯ ಹುಚ್ಚಾಟನೆ ಎಂಬ ಪದ ಹಾಸ್ಯಾಸ್ಪದ. ನಾವು ಪಕ್ಷದ ಜೊತೆ ಇದ್ದೇವೆ, ವ್ಯಕ್ತಿಯ ಜೊತೆ ಅಲ್ಲ. ರಾಷ್ಟ್ರೀಯ ಅಧ್ಯಕ್ಷರು, ರಾಜ್ಯಾಧ್ಯಕ್ಷರು ಏನು ಹತ್ತು ಕೆಲಸ ಕೊಟ್ಟರೇ ನಾವು ಇಪ್ಪತ್ತು ಕೆಲಸ ಮಾಡುತ್ತಿದ್ದು ಒನ್ ಟು ಡಬ್ಬಲ್ ಮಾಡಿದ್ದೇವೆ ಎಂದರು.

ನಾವು ಆತ್ಮಸಾಕ್ಷಿಯಾಗಿ ಹೇಳುತ್ತೇವೆ ಲೋಕಸಭಾ ಚುನಾವಣೆಯಲ್ಲಿ ಒಟ್ಟಾಗಿ ಕೆಲಸ ಮಾಡಿದ್ದೇವೆ. ರೇಣುಕಾಚಾರ್ಯ ಉಚ್ಚಾಟನೆ, ಅಧ್ಯಕ್ಷರ ಬದಲಾವಣೆ ಅಂತ ಗಾಳಿಯಲ್ಲಿ ಗುಂಡು ಹೊರೆಯುತ್ತಾರಲ್ಲ ಅವರನ್ನು ಕೇಳಿ ಎಂದ ಅವರು, ಜಿಲ್ಲಾಧ್ಯಕ್ಷರ ಬದಲಾವಣೆಯ ಪಶ್ನೆಯೇ ಇಲ್ಲಾ ರೇಣುಕಾಚಾರ್ಯ ಒಳಗೊಂಡಂತೆ ನಾವು ಪಕ್ಷದ ಶಿಸ್ತಿನ ಸಿಪಾಯಿಗಳಾಗಿ ಕೆಲಸ ಮಾಡುತ್ತಿದ್ದೇವೆ ಎಂದರು.

## ಆರ್.ಎಸ್.ಎಸ್. ಬಗ್ಗೆ ಮಾತನಾಡಿದರೆ ಸರಿ ಇರುವುದಿಲ್ಲ ಪ್ರಿಯಾಂಕ್ ಖರ್ಗೆ ವಿರುದ್ಧ ರೇಣುಕಾಚಾರ್ಯ ವಾಗ್ದಾಳಿ

**ದಾವಣಗೆರೆ.ಅ.14:** ಪ್ರಿಯಾಂಕ ಖರ್ಗೆ ತಮ್ಮ ಇಲಾಖೆ ಹಾಗೂ ಜಿಲ್ಲೆಯ ಅಭಿವೃದ್ಧಿ ಕಡೆ ಗಮನ ಹರಿಸೋದನ್ನು ಬಿಟ್ಟು ಆರ್.ಎಸ್.ಎಸ್. ಬಗ್ಗೆ ಮಾತನಾಡಿದರೆ ಪರಿಣಾಮ ಸರಿ ಇರುವುದಿಲ್ಲ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಎಚ್ಚರಿಕೆ ನೀಡಿದರು.

ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಿಯಾಂಕ ಖರ್ಗೆ ಅವರು ಸೂಪರ್ ಸಿಎಂ ರೀತಿ ವರ್ತನೆ ಮಾಡುತ್ತಿದ್ದು, ಸಿದ್ದರಾಮಯ್ಯ ಅವರನ್ನು ಓವರ್ ಟೇಕ್ ಮಾಡಲು ಎಲ್ಲದರಲ್ಲೂ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದರು.

ಆರ್.ಎಸ್.ಎಸ್ ಬ್ಯಾನ್ ಮಾಡಿ ಎಂದು ಸಿಎಂಗೆ ಪತ್ರ ಬರೆದಿದ್ದು, ಆರ್.ಎಸ್.ಎಸ್ ಸಂಕಷ್ಟದ ಸಮಯದಲ್ಲಿ ಸೈನಿಕರ ರೀತಿ ಕೆಲಸ ಮಾಡುತ್ತಿದೆ. ಆರ್.ಎಸ್.ಎಸ್ ಬಗ್ಗೆ ಕಾಂಗ್ರೆಸ್ ನವರು ಮಾತನಾಡಿದರೆ ಸರಿ ಇರುವುದಿಲ್ಲ ಎಂದು ಕಿಡಿಕಾರಿದರು.

# ವೀರೇಂದ್ರ ಹೆಗ್ಗಡೆಯವರು ತಮ್ಮ ಸಂಸ್ಥೆ ಮೂಲಕ ಲಕ್ಷಾಂತರ ಜನ ಮದ್ಯ ವ್ಯಸನಿಗಳಿಗೆ ಕುಡಿತದ ಚಟ ಬಿಡಿಸಿರುವುದಕ್ಕೆ ಶ್ರಮ ನಿಜಕ್ಕೂ ಶ್ಲಾಘನಿಯ

## ಹೊನ್ನಾಳಿ ಹಿರೇಕಲ್ಮಠದಲ್ಲಿ ಗಾಂಧಿ ಸ್ಮೃತಿ ಕಾರ್ಯಕ್ರಮದಲ್ಲಿ ಡಿ.ಜಿ.ಶಾಂತನಗೌಡ

**ಹೊನ್ನಾಳಿ :** ಕ್ಯಾನ್ಸರ್ ಖಾಯಿಲೆಗೂ ಚಿಕಿತ್ಸೆ ಇದೆ, ಆದರೆ ಕುಡಿತ ಚಟ ಬಿಡಿಸಲಿಕ್ಕೆ ಚಿಕತ್ಸೆ ಇಲ್ಲದಂತಹ ಸಮಯದಲ್ಲಿ ವೀರೇಂದ್ರ ಹೆಗ್ಗಡೆಯವರು ತಮ್ಮ ಸಂಸ್ಥೆ ಮೂಲಕ ಲಕ್ಷಾಂತರ ಜನ ಮದ್ಯ ವ್ಯಸನಿಗಳಿಗೆ ಕುಡಿತದ ಚಟ ಬಿಡಿಸಿರುವುದಕ್ಕೆ ಶ್ರಮ ನಿಜಕ್ಕೂ ಶ್ಲಾಘನಿಯ,ಅದಕ್ಕಾಗಿಯೇ ವೀರೇಂದ್ರ ಹೆಗ್ಗಡೆವರು ಪೂಜನಿಯ ಸ್ಥಾನದಲ್ಲಿದ್ದಾರೆ ಎಂದು ಡಿ.ಜಿ.ಶಾಂತನಗೌಡ ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ,ಅಖಿಲ ಕರ್ನಾಟಕ ಜಾಗೃತಿ ವೇದಿಕೆಯಿಂದ ಮಂಗಳವಾರ ಪಟ್ಟಣದ ಹಿರೇಕಲ್ಮಠದಲ್ಲಿ ಹಮ್ಮಿಕೊಂಡಿದ್ದ ಗಾಂಧಿ ಸ್ಮೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಕಾರವಿಲ್ಲದ ಒಂದು ಕಲ್ಲನ್ನು ಕೆತ್ತನೆ ಮಾಡಿ ಅದಕ್ಕೆ ಮೂರ್ತಿರೂಪ ಕೊಡುವುದು ಸುಲಭ,ಆದರೆ ಕುಡಿತಕ್ಕೆ ದಾಸನಾಗಿ ಸಮಾಜದಿಂದ ತಿರಸ್ಕಾರಕ್ಕೆ ಒಳಗಾದ ಒಬ್ಬ ಮದ್ಯ ವ್ಯಸನಿಯನ್ನು ಕುಡಿತ ಬಿಡಿಸ ಮತ್ತೆ ಅವನನ್ನು ಸಮಾಜಮುಖಿಯನ್ನಾಗಿ ಮಾಡುವುದು ಬಹಳ ಕಷ್ಟದ ಕೆಲಸ,ಅಂತಹ ಕೆಲಸವನ್ನು ನಮ್ಮ ಪೂಜ್ಯರು ಮಾಡುತ್ತಿದ್ದಾರೆ ಅದು ನಮ್ಮೆಲ್ಲರ ಸೌಭಾಗ್ಯ ಎಂದರು.



ಈ ಶಿಭಿರದ ಮೂಲಕ ಲಕ್ಷಾಂತರ ಮದ್ಯಕ್ಕೆ ದಾಸರಾಗಿದ್ದವರು ಇಂದು ಕುಡಿತವನ್ನು ಬಿಟ್ಟು ಇಡೀ ಕುಟುಂಬದ ಜತೆ ಸಂತೋಷದಿಂದ ಕಾಲ ಕಳೆಯುತ್ತಿದ್ದಾರೆ,ಇದೊಂದು ಅದ್ಭುತ ಕಾರ್ಯ ಹಾಗೂ ಇದು ನಿಜಕ್ಕೂ ಈಶ್ವರನೇ ಸೇವೆ ಎಂದು ತಿಳಿಯಬೇಕು.33 ಇಲಾಖೆಗಳಲ್ಲಿ ಮಾಡಬೇಕಾದ ಸಾರ್ವಜನಿಕ ಕಾರ್ಯಕ್ರಮಗಳನ್ನು ಶ್ರೀ ಕ್ಷೇತ್ರ ತಮ್ಮ ಸಂಸ್ಥೆ ಮೂಲಕ ಸಾರ್ವಜನಿಕರಿಗೆ ತಲುಪಿಸುವಂತ ಕೆಲಸ ಮಾಡುತ್ತಿದ್ದಾರೆ ಹಾಗಾಗಿ ನಮ್ಮ ಸರ್ಕಾರದ ಪರವಾಗಿ ಅವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಕುಡಿತ ಒಂದು ಸಾಮಾಜಿಕ ಪಿಡುಗು,ಇದರಿಂದ ದೂರ ಇದ್ದು ಕುಟುಂಬದ ಜತೆ ಸಂತೋಷದಿಂದ ಕಾಲ ಕಳೆಯಿರಿ,ಹಾಗೂ ಕುಡಿತದಿಂದ ಮುಕ್ತರಾಗಿ ನವಜೀವನಕ್ಕೆ ಕಾಲಿಟ್ಟಿರುವ ನಿಮ್ಮೆಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಹಿರೇಕಲ್ಮಠದ ಡಾ.ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳು ಮಾತನಾಡಿ, ಮದ್ಯವನ್ನು ಸಾರ್ವಜನಿಕವಾಗಿ ಕುಡಿಯಬಾರದು ಎಂದು ಯಾರು ಇಲ್ಲದ ಸ್ಥಳಗಳಲ್ಲಿ ಹೋಗಿ ಕುಡಿಯುವುದಕ್ಕೆ ಗೊತ್ತಿರುತ್ತೆ,ಇದನ್ನು ಕುಡಿದರೆ ನಮ್ಮ ಕುಟುಂಬವೇ ಹಾಳಾಗುತ್ತೆ ಎಂಬ ಅರಿವು ಕೂಡ ನಿಮಗೆ ಬರಬೇಕಲ್ಲವೇ ಎಂದು ಪ್ರಶ್ನಿಸಿದರು.ವೀರೇಂದ್ರ ಹೆಗ್ಗಡೆಯವರು ಮದ್ಯಪಾನ ನಿಷೇಧ ಮಾಡಿ ಎಂದು ಇದುವರೆವಿಗೂ ಬಂದ ಎಲ್ಲಾ ಸರ್ಕಾರಗಳಿಗೂ ಮನವಿ ಮಾಡಿದ್ದರು, ಆದರೆ ಯಾವುದೇ ಸರ್ಕಾರಗಳು ಮದ್ಯಪಾನ ನಿಷೇಧ ಮಾಡದಿದ್ದಾಗ ತಾವೇ ತಮ್ಮ ಸಂಸ್ಥೆ ಮೂಲಕ ಮದ್ಯವರ್ಜನ ಶಿಭಿರಗಳನ್ನು ಏರ್ಪಡಿಸಿ ಕುಡಿತದಿಂದ ಮನೆಮಠ ಕಳೆದುಕೊಂಡಿದ್ದ ಲಕ್ಷಾಂತರ ಜನರಿಗೆ ಮದ್ಯವ್ಯಸನದಿಂದ ಮುಕ್ತಗೊಳಿಸಿ ಅವರಿಗೆ ದಾರಿದೀಪವಾಗಿದ್ದಾರೆ ಎಂದು ವಿವರಿಸಿದರು.

### ದೇವೀರಮ್ಮ ದೀಪೋತ್ಸವ

## ಮುನ್ನೆಚ್ಚರಿಕೆಯೊಂದಿಗೆ ಸಕಲ ಸಿದ್ದತೆ : ಡಾ. ವಿಕ್ರಮ ಅಮಟೆ

**ಚಿಕ್ಕಮಳೂರು:** ತಾಲ್ಲೂಕಿನ ಬಿಂಡಿಗ ಶ್ರೀ ದೇವೀರಮ್ಮನವರ ಜಾತ್ರಾ ಮಹೋತ್ಸವ ಕಾರ್ಯಕ್ರಮಗಳು ಅಕ್ಟೋಬರ್ 19 ರಿಂದ 23 ರವರೆಗೆ ನಡೆಯಲಿದ್ದು, ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಜೊತೆಗೆ ಸಂಪೂರ್ಣ ಸಿದ್ದತೆ ಕೈಗೊಂಡಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿಕ್ರಮ ಅಮಟೆ ತಿಳಿಸಿದರು.

ಅವರು ಇಂದು ತಮ್ಮ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಭಕ್ತರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ಎರಡು ದಿನಗಳ ಕಾಲ ಬೆಟ್ಟ ಹತ್ತಲು ಅವಕಾಶ ನೀಡಲಾಗಿದೆ ಎಂದು ಹೇಳಿದರು.

ದೀಪಾವಳಿಯ ಮೊದಲ ದಿನ ಅಕ್ಟೋಬರ್ 19 ರಂದು ನರಕ ಚತುರ್ದಶಿ ಅಂಗವಾಗಿ ಬೆಳಗ್ಗೆ 9 ಗಂಟೆಯಿಂದ ಸಂಜೆ 5 ರವರೆಗೆ ಭಕ್ತರು ಬೆಟ್ಟ ಹತ್ತಿ ದೇವಿಯ ದರ್ಶನ ಪಡೆಯಬಹುದು, ಮರುದಿನ ಅಕ್ಟೋಬರ್ 20 ರಂದು ಬೆಳಗ್ಗೆ 8 ರಿಂದ ಸಂಜೆ 3 ರವರೆಗೆ ಬೆಟ್ಟ ಹತ್ತಲು ಅವಕಾಶ ಕಲ್ಪಿಸಲಾಗಿದೆ ಎಂದು ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ನಿರ್ಧರಿಸಿದೆ ಎಂದು ತಿಳಿಸಿದರು.



ಅ.18 ಮತ್ತು 19 ರಂದು ಅತೀ ಹೆಚ್ಚು ಮಳೆಯಾಗುತ್ತದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿರುವುದರಿಂದ ಬೆಟ್ಟ ಹತ್ತುವ ಭಕ್ತಾಧಿಗಳಿಗೆ ದಾರಿಯಲ್ಲಿ ಯಾವುದೇ ಅಡಚಣೆಯಾಗದಂತೆ ಜೊತೆಗೆ ಭೂಮಿ ಜರುಗುವ ಭಾಗದಲ್ಲಿ ಮುಂಜಾಗ್ರತಾ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಜನದಟ್ಟಣೆ ನಿಯಂತ್ರಣ ಮಾಡುವ ಸಲುವಾಗಿ ದೇವಸ್ಥಾನ ಸಮಿತಿ ನೀಡಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಭಕ್ತಾಧಿಗಳಿಗೆ ಸೂಚನೆ ನೀಡುವ ಫಲಕಗಳನ್ನು ಬೆಟ್ಟದಲ್ಲಿ ಅಳವಡಿಸಲಾಗಿದ್ದು, ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಇದನ್ನು ಉಲ್ಲಂಘಿಸಿರುವುದು ಡ್ರೋನ್ ಸರ್ವೆ ಮತ್ತು ಸಿಸಿ ಕ್ಯಾಮೆರಾದಲ್ಲಿ ಪತ್ತೆಯಾದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ರಾತ್ರಿ ಬೆಟ್ಟ ಹತ್ತುವಂತಿಲ್ಲ

ಈ ಬಾರಿ ರಾತ್ರಿ ವೇಳೆ ಬೆಟ್ಟ ಹತ್ತಲು ಅವಕಾಶವಿರುವುದಿಲ್ಲ ಎಂದ ಅವರು, ಗಿರಿ ಪ್ರದೇಶದಲ್ಲಿ ತುಂಬಾ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಾರಿಕೆ ಇದೆ. ರಾತ್ರಿ ವೇಳೆ ಬೆಟ್ಟ ಹತ್ತುವುದು ಅಪಾಯಕಾರಿಯಾಗಿದೆ. ಅದರಲ್ಲೂ ಮಹಿಳೆಯರಿಗೆ ಹೆಚ್ಚು ತೊಂದರೆ ಆಗುತ್ತದೆ ಎನ್ನುವ ಕಾರಣಕ್ಕೆ ರಾತ್ರಿ ಬೆಟ್ಟ ಹತ್ತಲು ಅವಕಾಶ ಇರುವುದಿಲ್ಲ ಎಂದರು.

15 ವರ್ಷದ ಒಳಗಿನ ಮಕ್ಕಳು, 60 ವರ್ಷ ಮೇಲ್ಪಟ್ಟವರು ಮತ್ತು ಆರೋಗ್ಯದ ಸಮಸ್ಯೆ ಇರುವವರು ಬೆಟ್ಟ ಹತ್ತುವುದನ್ನು ನಿಷೇಧಿಸಲಾಗಿದೆ. ಈ ಬಗ್ಗೆ ಜಿಲ್ಲಾಡಳಿತದೊಂದಿಗೆ ಸಮಾಲೋಚಿಸಿ ತೀರ್ಮಾನಕ್ಕೆ ಬರಲಾಗಿದೆ ಇದೆಲ್ಲಾ ಕ್ರಮಗಳು ಭಕ್ತರ ಹಿತದೃಷ್ಠಿಯಿಂದ ಜಾರಿಗೆ ತರಲಾಗುತ್ತಿದೆ.

ಭಕ್ತರ ನೂಕು ನುಗ್ಗಲು ತಪ್ಪಿಸಿ ಎಲ್ಲರಿಗೂ ದೇವಿ ದರ್ಶನ ಸುಗಮವಾಗಲಿ ಎನ್ನುವ ಕಾರಣಕ್ಕೆ ಎರಡು ದಿನಗಳ ಕಾಲ ಬೆಟ್ಟ ಹತ್ತಲು ಅವಕಾಶ ನೀಡಲಾಗತ್ತಿದೆ. ಈ ಕಾರಣಕ್ಕೆ ಭಕ್ತರು ರಾತ್ರಿ ವೇಳೆ ಬೆಟ್ಟ ಹತ್ತದೆ ದೇವಸ್ಥಾನ ಸಮತಿ ಮತ್ತು ಜಿಲ್ಲಾಡಳಿತಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು.

## ಮಾಯಕೊಂಡ; ಮಹರ್ಷಿ ವಾಲ್ಮೀಕಿ ಜಯಂತಿ


ಮಾಯಕೊಂಡ: ಇಲ್ಲಿನ ಹಿರೇ ಮದಕರಿ ನಾಯಕ ಸಮಾಧಿ ಬಳಿ ಮದಕರಿ ನಾಯಕ ಸಮಾಧಿ ಜೀರ್ಣೋದ್ಧಾರ ಸಮಿತಿ ವತಿಹಿಂದ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ನಡೆಯಿತು.

ಉಪನ್ಯಾಸಕ ಬಿ.ಆರ್. ಮಹಂತೇಶ್ ಮಾತನಾಡಿ, ವಾಲ್ಮೀಕಿ ಅವರ ರಾಮಾಯಣ ಕೌಟುಂಬಿಕ ಸಂಬಂಧ ಕಟ್ಟಿ ಕೊಡುತ್ತದೆ. ರಾಜ್ಯಭಾರ ಧಿಕ್ಕರಿಸಿ, ಅಣ್ಣ ಶ್ರೀರಾಮ ಬರುವವರೆಗೆ ಸಿಂಹಾಸನವೇರದ ಭರತನ ಭರತನಂಥ ಪಾತ್ರವೂಯಿದೆ. ಪಿತೃವಾಕ್ಯ ಪಾಲಿಸಿದ ರಾಮನನಡೆ ನಮೆಲ್ಲಾ ಆದರ್ಶವಾಗಬೇಕು. ಬ್ರಹ್ಮಜ್ಞಾನ ಹೊಂದಿದ ರಾವಣ, ಹೆಣ್ಣಿಗಾಗಿ ಕೆಟ್ಟ ಪರಿಯನ್ನೂ ರಾಮಾಯಣದಲ್ಲಿ ಚಿತ್ರಿಸಲಾಗಿದೆ. ಎಂದರು.

ಹಿರೇ ಮದಕರಿ ಸಮಾಧಿ ಅಭಿವೃದ್ಧಿಗೆ ಸರ್ಕಾರ ಅನುದಾನ ನೀಡಬೇಕು. ಎಲ್ಲಾ ಮಹನೀಯರ ಜಯಂತಿ ಜಾತ್ಯತೀತವಾಗಿ ಆಚರಿಸಬೇಕು, ಎಂದರು.

ಐಗೂರು ಹನುಮಂತಪ್ಪ, ಲೋಕೋಪಯೋಗಿ ಇಲಾಖೆಗೆ ಶಾಸಕರಿಂದ, ಪುರಾತತ್ತ್ವ ಇಲಾಖೆಯಿಂದ ಅನುದಾನ ಕೋರಿ ಎಸ್ಟಿಮೇಟ್ ಡಿಪಿಆರ್ ಸಲ್ಲಿಕೆಯಾಗಿದೆ. ಸಮಾಧಿ ಸ್ಥಳ ಪುರಾತತ್ವ ಇಲಾಖೆಯಡಿ ಇದ್ದು, ಅದನ್ನು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ವರ್ಗಾಯಿಸಿದರೆ ಅನುದಾನ ತರುವುದು ಸುಲಭವಾಗುತ್ತದೆ, ಎಂದರು.

ಮದಕರಿ ನಾಯಕರ ಸಮಾಧಿ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಸುನಿಲ್ ಮಾತನಾಡಿ, ವಾಲ್ಮೀಕಿ ಅವರ ಸಂದೇಶ ಎಂದೆಂದಿಗೂ ಪ್ರಸ್ತುತ. ಎಲ್ಲಾ ಸಮಾಜದ ಆಸಕ್ತರನ್ನು ಸೇರಿಸಿ ಜಯಂತಿ ಆಚರಿಸಲಾಗುತ್ತಿದೆ. ಸಮಾಧಿ ಜೀರ್ಣೋದ್ಧಾರ ಕೆಲಸಕ್ಕೆ ಗ್ರಾಮಸ್ಥರು ಕೈಜೋಡಿಸಬೇಕು, ಎಂದು ಮನವಿ ಮಾಡಿದರು.



ಕನ್ನಡ ಯುವ ಶಕ್ತಿ ಕೇಂದ್ರದ ಮಾಜಿ ಅಧ್ಯಕ್ಷರಾದ ಗರುನಾಥ್, ಶರಣಪ್ಪ, ರಾಜಶೇಖರ ಸಂಡೂರು, ಉಮಾಶಂಕರ್, ಕಾರ್ತಿಕ್ ಪಾಳೆಗಾರ್ ಪತ್ರಕರ್ತರಾದ ಜಗದೀಶ್, ಲಕ್ಷ್ಮಣ್, ಮುಖಂಡರಾದ ಕೊಡಗನೂರು ಲಕ್ಷ್ಮಣ್, ಗಿರಿಯಾಪುರ ರಮೇಶ್, ಹುಚ್ಚವಹಳ್ಳಿ ಕಂಬರಾಜ್ ಮಾತನಾಡಿದರು.

ಗ್ರಾ. ಪಂ ಸದಸ್ಯ ಬಸವರಾಜ್, ಮುಖಂಡರಾದ ಉಮಾಪತಿ, ಜಯಣ್ಣ, ರಂಗನಾಥ, ಶಿವಕುಮಾರ್, ಮತ್ತಿತರರು ಇದ್ದರು.

ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಮಾದಾರ ಚನ್ನಯ್ಯ. ಸಂಗೊಳ್ಳಿ ರಾಯಣ್ಣ, ಬಸವಣ್ಣ, ಭಗೀರಥ, ಅಂಬೇಡ್ಕರ್ ಸೇರಿ ಹಲವು ಮಹಾತ್ಮರ ಭಾವಚಿತ್ರಗಳು ಗಮನ ಸೆಳೆದವು.

## ರಾಶಿ ಭವಿಷ್ಯ

### ಮೇಷ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ಪೋಷಕರ ಆರೋಗ್ಯ ಸುಧಾರಿಸುತ್ತದೆ ಮತ್ತು ಅವರು ನಿಮ್ಮ ಮೇಲೆ ಪ್ರೀತಿಯ ಮಳೆಗೈಯುತ್ತಾರೆ. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ವೃಷಭ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ.

### ಮಿಥುನ ರಾಶಿ

ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ಇಂದು, ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ, ಆದರೆ ಕೆಲವು ಅಮೂಲ್ಯ ವಸ್ತುವಿನ ಕಳ್ಳತನದಿಂದಾಗಿ, ನಿಮ್ಮ ಮನಸ್ಥಿತಿಗೆ ತೊಂದರೆಯಾಗಬಹುದು. ನೀವು ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ವಿವಾದಾತ್ಮಕ ವಿಷಯಗಳನ್ನು ತಪ್ಪಿಸಬೇಕು. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ. ಕಬ್ಬಿಣ ಬಿಸಿಯಿದ್ದಾಗಲೇ ನಾವು ಬಡಿಯಬೇಕೆಂದು ನೆನಪಿಡಿ. ನಿಮ್ಮ ಪ್ರೀತಿಪಾತ್ರರ ನಿಷ್ಠೆಯನ್ನು ಅನುಮಾನಿಸಬೇಡಿ. ಕಲೆ ಮತ್ತು ರಂಗಭೂಮಿಯ ಜೊತೆ ಸಂಪರ್ಕ ಹೊಂದಿರುವವರು ಸೃಜನಶೀಲವಾಗಿ ಅತ್ಯುತ್ತಮವಾದದ್ದನ್ನು ನೀಡಲು ಹೊಸ ಅವಕಾಶಗಳನ್ನು ಪಡೆಯುತ್ತಾರೆ.

### ಸಿಂಹ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಇಂದು ನೀವು ಎಂತಹ ಒಳ್ಳೆಯ ಕೆಲಸ ಮಾಡಿದ್ದೀರೆಂದು ತೋರಿಸಲು ನಿಮ್ಮ ಪ್ರೀತಿ ಅರಳುತ್ತದೆ. ಕೆಲಸದ ಸ್ಥಳದಲ್ಲಿ ನೀವು ಉತ್ತಮವಾಗಿ ಮಾಡಲು ಬಯಸಿದರೆ, ನಿಮ್ಮ ಕೆಲಸದಲ್ಲಿ ಆಧುನಿಕತೆಯನ್ನು ತರಲು ಪ್ರಯತ್ನಿಸಿ

### ಕನ್ಯಾ ರಾಶಿ

ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ನಿಮ್ಮ ಮಗುವಿನಂಥ ಮತ್ತು ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ ವಹಿಸುತ್ತದೆ. ಸಂತೋಷಕ್ಕಾಗಿ ಹೊಸ ಸಂಬಂಧವನ್ನು ಎದುರುನೋಡಬಹುದು ನಿಮ್ಮ ಗುರಿಗಳೆಡೆಗೆ ಸದ್ದಿಲ್ಲದೆ ಕೆಲಸ ಮಾಡಿ ಮತ್ತು ನೀವು ಯಶಸ್ಸನ್ನು ಸಾಧಿಸುವ ಮುನ್ನ ನಿಮ್ಮ ಉದ್ದೇಶಗಳನ್ನು ಬಯಲು ಮಾಡಬೇಡಿ.

### ತುಲಾ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು.

### ವೃಶ್ಚಿಕ ರಾಶಿ

ನಿಮ್ಮ ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ ಮತ್ತು ಒಂಟಿತನದ ಭಾವನೆಯನ್ನು ತೊಡೆದುಹಾಕಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ. ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ. ಇಂದು ಮಾಡಿದ ಜಂಟಿ ಯೋಜನೆಗಳು ಕೊನೆಗೂ ಪ್ರಯೋಜನಕಾರಿಯಾದರೂ, ನೀವು ಪಾಲುದಾರರಿಂದ ಕೆಲವು ಪ್ರಮುಖ ವಿರೋಧವನ್ನು ಎದುರಿಸಬೇಕಾಗುತ್ತದೆ.

### ಧನು ರಾಶಿ

ಖಿನ್ನತೆಯನ್ನು ಹೊಡೆದೋಡಿಸಿ ಇದ ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮಕರ ರಾಶಿ

ನೀವು ನಿಮ್ಮ ಭಾವನೆಗಳನ್ನು ನಿಯಂತ್ರಿಸಬೇಕು ಮತ್ತು ನಿಮ್ಮ ಭಯವನ್ನು ಸಾಧ್ಯವಾದಷ್ಟೂ ಬೇಗ ತೊಡೆದುಹಾಕಬೇಕು ಏಕೆಂದರೆ ಇವು ತಕ್ಷಣವೇ ನಿಮ್ಮ ಆರೋಗ್ಯವನ್ನು ಬಾಧಿಸಬಹುದು ಮತ್ತು ಒಳ್ಳೆಯ ಆರೋಗ್ಯವನ್ನು ಅನುಭವಿಸುವ ನಿಮ್ಮ ಹಾದಿಯಲ್ಲಿ ಅಡ್ಡ ಬರಬಹುದು. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ.

### ಕುಂಭ ರಾಶಿ

ನಿಮ್ಮ ಒತ್ತಡವನ್ನು ನೀವು ತೊಡೆದುಹಾಕಬಹುದು. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಸ್ನೇಹಿತರು ಹಾಗೂ ಕುಟುಂಬದ ಸದಸ್ಯರೊಡನೆ ಒಂದು ಸಂಜೆಯನ್ನು ಆಯೋಜಿಸಿ. ಪ್ರೀತಿಯಲ್ಲಿ ನಿರಾಶೆ ನಿಮ್ಮನ್ನು ಕಂಗೆಡಿಸುವುದಿಲ್ಲ. ಕೆಲವರಿಗೆ ಅರೆಕಾಲಿಕ ಉದ್ಯೋಗಗಳು.

### ಮೀನ ರಾಶಿ

ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷ ಕೂಟವನ್ನುಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

## ಚೈತನ್ಯ ಕಾಲೇಜಲ್ಲಿ ಪದವಿ ಪ್ರದಾನ ಹಾಗೂ ಫ್ರೆಶರ್ಸ್ ಪಾರ್ಟಿ

**ದಾವಣಗೆರೆ:** ಚೈತನ್ಯ ಹೈ-ಟೆಕ್ ಇನ್‌ಸ್ಟಿಟ್ಯೂಟ್ ಆಫ್ ಕಾಮರ್ಸ್ ಮ್ಯಾನೇಜ್‌ಮೆಂಟ್ ಅಂಡ್ ಸೈನ್ಸ್ ಕಾಲೇಜಿನಲ್ಲಿ ಈಚೆಗೆ ಅದ್ದೂರಿಯಾಗಿ ಪದವಿ ಪ್ರದಾನ ಹಾಗೂ ಫ್ರೆಶರ್ಸ್ ಪಾರ್ಟಿ ಕಾರ್ಯಕ್ರಮ ಜರುಗಿತು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಎ.ವಿ.ಕೆ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಪ್ರೊ. ಶಿವಪ್ರಕಾಶ್ ಮಾತನಾಡಿ, ಶಿಕ್ಷಣವು ಜೀವನದ ಬೆಳಕು. ಶ್ರಮ, ಶಿಸ್ತು ಮತ್ತು ಆತ್ಮವಿಶ್ವಾಸವೇ ಯಶಸ್ಸಿನ ಮೂಲ. ವಿದ್ಯಾರ್ಥಿಗಳು ತಮ್ಮ ಕನಸುಗಳನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ ನೃತ್ಯ, ಸಂಗೀತ, ಹಾಗೂ ಫ್ಯಾಷನ್ ಶೋ ಮೂಲಕ ಮನರಂಜನೆ ನೀಡಿದರು. ಪದವಿ ಪ್ರದಾನ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ನೀಡಿ ಗೌರವಿಸಲಾಯಿತು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚೈತನ್ಯ ಹೈ-ಟೆಕ್ ಇನ್‌ಸ್ಟಿಟ್ಯೂಟ್‌ನ ಪ್ರಾಂಶುಪಾಲರಾದ ಪ್ರೊ. ಕೆ. ಈಶ್ವರ ಪ್ರಸಾದ್ ಅವರು ವಹಿಸಿಕೊಂಡಿದ್ದರು, ಕಾಲೇಜಿನ ಅಧ್ಯಕ್ಷ ಅಭಿಷೇಕ್ ಬೇತೂರು, ಕಾರ್ಯದರ್ಶಿ ಶ್ವೇತಾ ಅಭಿಷೇಕ್, ಖಜಾಂಚಿ ಹೆಚ್. ತಿರುಕ್ಕಪ್ಪ ಹಾಗೂ ಟ್ರಸ್ಟಿ ಎಚ್.ಟಿ ಶಿವಪ್ರಸಾದ್ ಉಪಸ್ಥಿತರಿದ್ದರು.

## ಅ.15 ರಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ ಬಳ್ಳಾರಿಗೆ

**ಬಳ್ಳಾರಿ:** ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ ಅವರು ಅ.15 ರಂದು ಬಳ್ಳಾರಿಗೆ ಆಗಮಿಸಲಿದ್ದಾರೆ.

ಅಂದು ಬೆಳಿಗ್ಗೆ 10.30 ಗಂಟೆಗೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವತಿಯಿಂದ ಚೇಂಬರ್ ಆಫ್ ಕಾಮರ್ಸ್ ನ ಆವರಣದಲ್ಲಿ ಏರ್ಪಡಿಸಿರುವ ಇಂಕ್ಯುಬೇಶನ್ ಕೇಂದ್ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಬೆಳಿಗ್ಗೆ 11.30 ಕ್ಕೆ ನಗರದ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವರು.

ನಂತರ ಸಂಜೆ 04 ಗಂಟೆಗೆ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

## ಶ್ರೀ ದೇವೀರಮ್ಮ ಜಾತ್ರಾ ಮಹೋತ್ಸವ: ಜಿಲ್ಲಾಧಿಕಾರಿ ಸೂಚನೆ

**ಚಿಕ್ಕಮಗಳೂರು:** ಬಿಂಡಿಗಾ ಶ್ರೀ ದೇವೀರಮ್ಮ ದೇವಾಲಯದ ವಾರ್ಷಿಕ ಜಾತ್ರಾ ಮಹೋತ್ಸವವು ಅಕ್ಟೋಬರ್ 19 ರಿಂದ 23 ರವರೆಗೆ ನಡೆಯಲಿದ್ದು ಈ ಕಾರ್ಯಕ್ರಮಕ್ಕೆ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತಾದಿಗಳು ವಾಹನಗಳ ಮುಖಾಂತರ ಆಗಮಿಸುವುದರಿಂದ ಜಿಲ್ಲಾಧಿಕಾರಿಗಳು ಕೆಲವು ನಿರ್ದಿಷ್ಟ ಸೂಚನೆಗಳನ್ನು ನೀಡಿದ್ದಾರೆ.

ಜಾತ್ರೆಯ ದಿನಗಳಾದ ಅಕ್ಟೋಬರ್ 19 ರಿಂದ 23ರವರೆಗೆ ಜಿಲ್ಲೆಯಲ್ಲಿ ಮಳೆ ಬರುವ ಕುರಿತು ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದ್ದು, ದೇವಾಲಯಕ್ಕೆ ತೆರಳುವ ರಸ್ತೆಯು ಕಿರಿದಾಗಿರುವುದರಿಂದ ವಾಹನ ದಟ್ಟಣೆ ಹಾಗೂ ಹೆಚ್ಚಿನ ಜನಸಂದಣಿಯಾಗಿ ಅನಾನುಕೂಲವಾಗುವ ಸಂಭವವಿದೆ ಎಂದು ಅವರು ತಿಳಿಸಿದ್ದಾರೆ.

ಬಿಂಡಿಗಾ ಮಲ್ಲೇನಹಳ್ಳಿ ಶ್ರೀ ದೇವಿರಮ್ಮ ದರ್ಶನಕ್ಕೆ ಅಕ್ಟೋಬರ್ 19 ಮತ್ತು 20 ರಂದು ಬೆಟ್ಟ ಏರುವವರು 15 ವರ್ಷ ಮೇಲ್ಪಟ್ಟಿರಬೇಕು ಮತ್ತು 60 ವರ್ಷದ ಒಳಗಿರಬೇಕು. ಈ ಎರಡೂ ದಿನಗಳಲ್ಲಿ ಜಾತ್ರಾ ಮಹೋತ್ಸವಕ್ಕೆ ತರೀಕೆರೆಯಿಂದ ವಾಹನಗಳಲ್ಲಿ ಆಗಮಿಸುವ ಭಕ್ತರು ಸ್ಥಳೀಯರು ಮಾತ್ರ ಲಿಂಗದಹಳ್ಳಿ ಮಾರ್ಗವಾಗಿ ಬಿಂಡಿಗಾ ಗ್ರಾಮಕ್ಕೆ ಬರುವಂತೆ ಹಾಗೂ ತರೀಕೆರೆಯಿಂದ ಅನ್ಯಕಾರ್ಯ ನಿಮಿತ್ತ ಚಿಕ್ಕಮಗಳೂರಿಗೆ ಬರುವ ಇತರೆ ಎಲ್ಲಾ ವಾಹನಗಳು ಅಕ್ಟೋಬರ್ 19 ರ ಬೆಳಿಗ್ಗೆ 6 ಗಂಟೆಯಿಂದ ಅಕ್ಟೋಬರ್ 20ರ ಮಧ್ಯಾಹ್ನ 2 ಗಂಟೆಯವರೆಗೆ ಕಡ್ಡಾಯವಾಗಿ ಕಡೂರು ಮಾರ್ಗವಾಗಿ ಬರುವಂತೆ ಸೂಚಿಸಿದ್ದಾರೆ.



ತರೀಕೆರೆ-ಲಿಂಗದಳ್ಳಿ-ಸಂತವೇರಿ ಮಾರ್ಗವಾಗಿ ಬರುವವರು ತಮ್ಮ ವಾಹನಗಳನ್ನು ಕುಮಾರಗಿರಿಯಲ್ಲಿ ಪಾರ್ಕಿಂಗ್ ಮಾಡಬೇಕು. ಚಿಕ್ಕಮಗಳೂರು-ಕೈಮರ ಮಾರ್ಗವಾಗಿ ಬಿಂಡಿಗ ಮಲ್ಲೇನಹಳ್ಳಿಗೆ ಬರುವ ಸಾರ್ವಜನಿಕರು ಕಡ್ಡಾಯವಾಗಿ ತಮ್ಮ ವಾಹನಗಳನ್ನು ನಿಗದಿಪಡಿಸಿರುವ ಮಲ್ಲೇನಹಳ್ಳಿ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜು ಆವರಣದಲ್ಲಿ ಪಾರ್ಕಿಂಗ್ ಮಾಡಬೇಕು. ಯಾವುದೇ ಕಾರಣಕ್ಕೂ ರಸ್ತೆಯ ಬದಿಗಳಲ್ಲಿ ವಾಹನಗಳನ್ನು ಪಾರ್ಕಿಂಗ್ ಮಾಡಕೂಡದು. ಅಲ್ಲದೆ, ಜಾತ್ರೆಯ ದಿನಗಳಾದ ಅ.19ರಿಂದ 23 ರವರೆಗೆ ಮಲ್ಲೇನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಗೇಟ್‌ನಿಂದ ಕುಮಾರಗಿರಿಯ ಕಮಾನುವರೆಗೆ ರಸ್ತೆಯ ಎರಡೂ ಬದಿಯಲ್ಲಿ ಯಾವುದೇ ರೀತಿಯ ವಾಹನಗಳನ್ನು ನಿಲುಗಡೆ ಮಾಡಬಾರದು ಎಂದು ಅವರು ನಿರ್ದೇಶನ ನೀಡಿದ್ದಾರೆ.

ಚಿಕ್ಕಮಗಳೂರಿನಿಂದ ಬಿಂಡಿಗಾ ಶ್ರೀ ದೇವಿರಮ್ಮ ದೇವಸ್ಥಾನಕ್ಕೆ ತೆರಳುವ ಭಕ್ತಾದಿಗಳು ನಗರದ ಐ.ಜಿ.ರಸ್ತೆ, ಎಂ.ಜಿ.ರಸ್ತೆ, ಡಿ.ಎ.ಸಿ.ಜಿ. ಪಾಲಿಟೆಕ್ನಿಕ್ ಮೈದಾನಗಳಲ್ಲಿ ವ್ಯವಸ್ಥಿತ ರೀತಿಯಲ್ಲಿ ತಮ್ಮ ವಾಹನಗಳನ್ನು ನಿಲುಗಡೆ ಮಾಡಿ ಸಾರ್ವಜನಿಕ ಸಾರಿಗೆಯ ಬಸ್ಸುಗಳಲ್ಲಿ ಬಿಂಡಿಗಾ ಗ್ರಾಮಕ್ಕೆ ಪ್ರಯಾಣಿಸಿ ಸಹಕರಿಸುವಂತೆ ಅವರು ಸಲಹೆ ನೀಡಿದ್ದಾರೆ.

ಗಿರಿ ಪ್ರದೇಶಕ್ಕೆ ಪ್ರವಾಸಿಗರು ತೆರಳದಂತೆ ಸೂಚನೆ: ಮುಳ್ಳಯ್ಯನಗಿರಿ, ಶ್ರೀ ಗುರು ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ ಸಂಸ್ಥೆ, ಗಾಳಿಕೆರೆ, ಹಾಗೂ ಮಾಣಿಕ್ಯಧಾರಾ ಸ್ಥಳಗಳಲ್ಲಿ ಸತತವಾಗಿ ಮಳೆಯಾಗುತ್ತಿರುವುದರಿಂದ ಹಾಗೂ ಜಾತ್ರೆಯಿಂದ ಉಂಟಾಗುವ ಜನಸಂದಣಿ ಹಿನ್ನಲೆಯಲ್ಲಿ ಅ.19ರ ಬೆಳಿಗ್ಗೆ 6 ಗಂಟೆಯಿಂದ ಅ.20ರ ಸಂಜೆ 6 ಗಂಟೆಯವರೆಗೆ ಸೀತಾಳಯ್ಯನಗಿರಿ, ಮುಳ್ಳಯ್ಯನಗಿರಿ, ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಸಂಸ್ಥೆ, ಗಾಳಿಕೆರೆ ಹಾಗೂ ಮಾಣಿಕ್ಯಾಧಾರಾಕ್ಕೆ ಪ್ರವಾಸಿಗರು ತೆರಳದಂತೆ ಜಿಲ್ಲಾಡಳಿತ ವತಿಯಿಂದ ಕೋರಲಾಗಿದೆ. ಹೋಮ್ ಸ್ಟೇಗಳು, ರೆಸಾರ್ಟ್‌ಗಳು ಮತ್ತು ವಸತಿ ಗೃಹಗಳಲ್ಲಿ ಈಗಾಗಲೇ ಮುಂಗಡವಾಗಿ ಕೊಠಡಿಗಳನ್ನು ಕಾಯ್ದಿರಿಸಿರುವ ಪ್ರವಾಸಿಗರಿಗೆ ಯಾವುದೇ ನಿರ್ಬಂಧವಿರುವುದಿಲ್ಲ. ಜಿಲ್ಲಾಡಳಿತದ ಸಲಹೆಗಳನ್ನು ಅನುಸರಿಸುವ ಮೂಲಕ ಭಕ್ತರು, ಸಾರ್ವಜನಿಕರು, ಪ್ರವಾಸಿಗರು ಸಹಕರಿಸುವಂತೆ ಕೋರಲಾಗಿದೆ.

### 70 ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ ಪೂರ್ವಭಾವಿ ಸಭೆ

## ನಾಡಿನ ಕಲೆ, ಸಂಸ್ಕೃತಿ ಬಿಂಬಿಸುವ ನಾಡ ಉತ್ಸವ ಅದ್ದೂರಿ ಆಚರಣೆ, ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ

**ದಾವಣಗೆರೆ:** 70 ನೇ ಕರ್ನಾಟಕ ರಾಜ್ಯೋತ್ಸವವನ್ನು ನವೆಂಬರ್ 1 ರಂದು ರಾಜ್ಯಾದ್ಯಂತ ಆಚರಣೆ ಮಾಡಲಾಗುತ್ತಿದ್ದು ಜಿಲ್ಲಾಡಳಿತದಿಂದ ನವೆಂಬರ್ 1 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಿರುವ ಕಾರ್ಯಕ್ರಮದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ರಾಷ್ಟ್ರಧ್ವಜಾರೋಹಣ ನೆರವೇರಿಸುವರು ಎಂದು ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ತಿಳಿಸಿದರು.

ಅವರು ಸೋಮವಾರ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಏರ್ಪಡಿಸಲಾದ ರಾಜ್ಯೋತ್ಸವ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನವಂಬರ್ 1 ರಂದು ಬೆಳಗ್ಗೆ 8 ಗಂಟೆಗೆ ಹೈಸ್ಕೂಲ್ ಮೈದಾನದ ಬಳಿಯಿಂದ ಕನ್ನಡಾಂಬೆ ಭುವನೇಶ್ವರಿ ಭಾವಚಿತ್ರದೊಂದಿಗೆ ಜಾನಪದ ಕಲಾತಂಡಗಳು ಸೇರಿದಂತೆ ವಿವಿಧ ಕಲಾ ಪ್ರಕಾರಗಳೊಂದಿಗೆ ಮೆರವಣಿಗೆಯು ಜಿಲ್ಲಾ ಕ್ರೀಡಾಂಗಣದ ವರೆಗೆ ಸಾಗಲಿದೆ.

ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಗ್ಗೆ 10 ಗಂಟೆಗೆ ರಾಷ್ಟ್ರಧ್ವಜರೋಹಣ ನಡೆಯಲಿದೆ. ವಿವಿಧ ತುಕಡಿಗಳಿಂದ ಆಕರ್ಷಕ ಪಥಸಂಚಲನ ನಡೆಯಲಿದ್ದು ನಂತರ ಶಾಲಾ ವಿದ್ಯಾರ್ಥಿಗಳಿಂದ ನಾಡಿನ ಕಲೆ, ಸಂಸ್ಕೃತಿಯನ್ನು ಬಿಂಬಿಸುವ ನೃತ್ಯರೂಪಕಗಳು ಪ್ರದರ್ಶನಗೊಳ್ಳಲಿದೆ. ಜಿಲ್ಲಾ ಆಡಳಿತದಿಂದ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ರಾಜ್ಯೋತ್ಸವ ಸನ್ಮಾನ ಮಾಡಲಾಗುತ್ತದೆ. ಇದಕ್ಕೆ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿ ಅತ್ಯಂತ ಪಾರದರ್ಶಕವಾಗಿ ಸಾಧಕರನ್ನು ಗುರುತಿಸಿ ಗೌರವಯುತವಾಗಿ ಸನ್ಮಾನಿಸುವ ಕೆಲಸವಾಗಬೇಕೆಂದರು. ಸಂಜೆಯ ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳ ಪೋಷಕರು ಮಾತ್ರ ಆಗಮಿಸಲಿದ್ದು ಸಾರ್ವಜನಿಕರೂ ಬರುವಂತಾಗಬೇಕು. ಮತ್ತು ಮೆರವಣಿಗೆ ಸೇರಿದಂತೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನೆರವೇರಿಸಲು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಈಗಿನಿಂದಲೇ ಸಿದ್ದತೆ ಮಾಡಿಕೊಳ್ಳುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಭಾಗವಹಿಸಿದ ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿ ತಮ್ಮ ಅನಿಸಿಕೆ, ಸಲಹೆಗಳನ್ನು ನೀಡಿದರು.

ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರು ಹಾಗೂ ನಿ.ಪ್ರೊ; ಎ.ವಿ.ರಾಮಚಂದ್ರಪ್ಪ, ಪಾಲಿಕೆ ಆಯುಕ್ತೆ ರೇಣುಕಾ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಗಿರೀಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ರವಿಚಂದ್ರ, ಕ.ಸಾ.ಪ ಅಧ್ಯಕ್ಷ ವಾಮದೇವಪ್ಪ, ವಿವಿಧ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


## ಧರ್ಮ ದರ್ಶನದ ಸರತಿ ಸಾಲಿನಲ್ಲಿ ಸಾಗಿ ದೇವಿ ದರ್ಶನ ಪಡೆದ ಜಿಲ್ಲಾಧಿಕಾರಿ

**ಹಾಸನ :** ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಇಂದು ಧರ್ಮ ದರ್ಶನದ ಸರತಿ ಸಾಲಿನಲ್ಲಿ ಸಾಗಿ ಶ್ರೀ ಹಾಸನಾಂಬ ದೇವಿ ದರ್ಶನ ಪಡೆದರು.

ಸರತಿ ಸಾಲಿನಲ್ಲಿ ಸಾಗುತ್ತಿದ್ದ ಜಿಲ್ಲಾಧಿಕಾರಿಗಳು ಕೆಲವು ಕಡೆಗಳಲ್ಲಿ ಕಬ್ಬಿಣದ ರಾಡುಗಳುಕಾಲಿಗೆ ತಗಲುತ್ತಿದುದನ್ನುಗಮನಿಸಿ ಅವುಗಳಿಗೆಬಟ್ಟೆ ಕಟ್ಟಿ ಸರಿಪಡಿಸಲು ಸೂಚಿಸಿರಲ್ಲದೆ, ಸ್ಥಳದಲ್ಲಿಯೇ ಸರಿಪಡಿಸಿದರು.ಸಾರ್ವಜನಿಕರು ತಿಂಡಿ ತಿನಿಸುಗಳನ್ನುತಿಂದು ಅಲ್ಲಲ್ಲಿಯೇ ಹಾಕಿದ್ದ ಖಾಲಿ ಪ್ಲಾಸ್ಟಿಕ್ ಕವರ್‌ಗಳು, ಕುಡಿಯುವ ನೀರಿನ ಬಾಟಲ್ ಮತ್ತು ಹಣ್ಣಿನ ಸಿಪ್ಪೆಯನ್ನು ಸ್ವಚ್ಛಗೊಳಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸರತಿ ಸಾಲಿನಲ್ಲಿ ಸಾಗುತ್ತಿದ್ದ ಭಕ್ತಾದಿಗಳು ಈ ಬಾರಿ ದೇವಿ ದರ್ಶನಕ್ಕೆ ವ್ಯವಸ್ಥೆ ತುಂಬಾ ಅಚ್ಚುಕಟ್ಟಾಗಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಯವರಿಗೆ ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ, ಸೆಲ್ಫಿ ತೆಗೆದುಕೊಳ್ಳಲು ಮುಗಿಬೀಳುತ್ತಿದ್ದುದು ಕಂಡು ಬಂದಿತು.

ದೇವಿ ದರ್ಶನ ಪಡೆದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಬೆ.10.30 ಗಂಟೆಗೆ ಕುಟುಂಬ ಸಮೇತರಾಗಿ, ವಿವಿಧ ಹಿರಿಯ ಅಧಿಕಾರಿಗಳ ಜೊತೆಗೆ ಧರ್ಮ ದರ್ಶನವನ್ನು ಆರಂಭಿಸಿದೆವು. ಆ ಸಂದರ್ಭದಲ್ಲಿ ಮುಖ್ಯವಾಗಿ ಕಂಡು



ಬಂದಂತಹ ನ್ಯೂನ್ಯತೆಗಳೆಂದರೆ ಬ್ಯಾರಿಕೇಡ್ ಕಂಬಿಗಳು ಕಾಲಿಗೆ ತಾಗುತ್ತಿತ್ತು, ಈ ಹಿಂದೆ ಅದನ್ನು ಸರಿಪಡಿಸಲು ಪ್ರಯತ್ನ ಮಾಡಲಾಗಿತ್ತು ಆದರೂ ಕೆಲವು ಕಡೆ ಕಬ್ಬಿಣದ ರಾಡಿಗೆ ಸುತ್ತಿದ್ದಬಟ್ಟೆ ಕಳಚಿಹೋಗಿ ಕಾಲಿಗೆ ತಾಕುತ್ತಿರುವುದನ್ನು ಗಮನಿಸಿ ಸರಿಪಡಿಸಲಾಯಿತು ಎಂದು ತಿಳಿಸಿದರು.

ಮಹಿಳಾ ಭಕ್ತಾದಿಗಳು ಅದರಲ್ಲೂ 65 ವರ್ಷ 72 ವರ್ಷದವರು ಮಂಡಿ ನೋವು ಇನ್ನಿತರ ಸಮಸ್ಯೆಗಳಿವೆ ಕಂಬಿಯನ್ನು ಸುತ್ತು ಹಾಕಿಕೊಂಡು ಹೋಗಲು ಸಾಧ್ಯವಿಲ್ಲ ಹಾಗಾಗಿನಮಗಾಗಿ ಪ್ರತ್ಯೇಕ ಸರತಿಸಾಲನ್ನು ಮಾಡಿ ಎಂದು ಕೇಳಿಕೊಂಡರು. ನಿಜವಾಗಲೂ ಧರ್ಮದರ್ಶನದ ಸಾಲಿನಲ್ಲಿ ನಾವು ಬಂದಿದ್ದು ಸಾರ್ಥಕವಾಯಿತು ಎಂದೆನಿಸಿತು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ದೇವಿ ದರ್ಶನದ ಸಂದರ್ಭದಲ್ಲಿ ತಾವು ಜಿಲ್ಲಾಧಿಕಾರಿ ಎನ್ನುವುದನ್ನು ತಿಳಿಯದೆ ನಮ್ಮನ್ನು ಸಹ ಮುಂದೆ ತಳ್ಳಿದರು ನಮಗೂ ಒಂದು ಸೆಕೆಂಡ್ ದರ್ಶನ ದೊರೆಯಿತು. 2-3 ಗಂಟೆಗಳ ಕಾಲ ಸರತಿ ಸಾಲಿನಲ್ಲಿ ಬಂದು ದರ್ಶನ ಪಡೆಯುವವರಿಗೆ ಇದರಿಂದ ಸ್ವಲ್ಪ ಅಸಮಾಧಾನ ಉಂಟಾಗುತ್ತದೆ ಎಂಬುದು ಅರಿವಾಯಿತು. ಈಗಾಗಲೇ ಸಚಿವರು ಕೂಡಾ ಕನಿಷ್ಠ 5 ಸೆಕೆಂಡಾದರೂ ದರ್ಶನಕ್ಕೆ ಸಮಯವನ್ನು ನೀಡಬೇಕು ಎಂದುನಿರ್ದೇಶನ ನೀಡಿದ್ದಾರೆ ಎಂದು ತಿಳಿಸಿದರು.

ಮಹಿಳೆಯರಿಗೆ ಅದರಲ್ಲೂ ಹಿರಿಯ ನಾಗರಿಕರಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಬೇಕು. ಈ ನಿಟ್ಟಿನಲ್ಲಿ ಪ್ರಯತ್ನಿಸುವುದಾಗಿ ತಿಳಿಸಿದರು. ನಾವು ದೇವಿ ದರ್ಶನಕ್ಕೆ ಸರತಿ ಸಾಲಿನಲ್ಲಿ ಬರುತ್ತಿರು ಸಂದರ್ಭದಲ್ಲಿ ಬಾಗಿಲನ್ನು ಮುಚ್ಚುವ ಸಾಧ್ಯತೆಗಳು ಹೆಚ್ಚಿದ್ದವು ಎಂದು ಮಾಹಿತಿ ದೊರೆಯಿತು, ಅಧಿಕಾರಿಗಳು ಸರತಿ ಸಾಲು ಮೊಟಕುಗೊಳಿಸಿ ಬಂದು ದರ್ಶನ ಪಡೆಯಿರಿ ಎಂದು ಸಲಹೆ ನೀಡಿದರು. ಆದರೆ ನಾನು ದರ್ಶನ ದೊರೆತರು, ದೊರೆಯದಿದ್ದರೂ ಇದೇ ಸಾಲಿನಲ್ಲಿ ಮುಂದುವರೆದು ದರ್ಶನ ಮಾಡಿಯೇ ಹೊರಡುತ್ತೇನೆ ಎಂದು ನಿರ್ಧಾರ ಮಾಡಿದ್ದೆ ಹೇಗೋ ಎರಡು ಗಂಟೆಯೊಳಗೆ ದರ್ಶನವಾಯಿತು ಎಂದು ತಿಳಿಸಿದರು.

ಸಾಮಾನ್ಯ ಭಕ್ತರ ಕಷ್ಟಗಳು ಅವರ ಅವಶ್ಯಕತೆಗಳು ಏನು ಎಂದು ತಿಳಿಯಬೇಕೆಂದರೆ ಅವರ ಜೊತೆಯಲ್ಲಿ ನಿಂತಾಗ ಮಾತ್ರ ಸಾಧ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

## ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್, ಸಂಭಾವನೆ, ಕಮೀಷನ್ ಪಡೆದಿರುವ ದಾಖಲೆ) ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟ್‌ಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.ಆನ್‌ಲೈನ್‌ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್‌ಪಾಸ್ ಮಂಜೂರು ಮಾಡಲಾಗುತ್ತದೆ. ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ಹಾಸನ :** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿನ ಖಾಲಿಯಿರುವ ಸೀಟುಗಳಿಗೆ ಹಾಗೂ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ವಿದ್ಯಾರ್ಥಿಗಳಿಗೆ (ಪದವಿ, ಸ್ನಾತಕೋತ್ತರ ಪದವಿ, ವೃತ್ತಿಪರ ಕೋರ್ಸ್‌ಹಾಗೂ ಇತರೆ ಕೋರ್ಸ್‌ಗಳಿಗೆ) 2025-26ನೇ ಶೈಕ್ಷಣಿಕ ಸಾಲಿಗೆ ಪ್ರವೇಶಾತಿಗಾಗಿ ಮುಸ್ಲಿಂ,ಕ್ರಿಶ್ಚಿಯನ್,ಜೈನ್, ಬೌದ್ಧ, ಸಿಖ್, ಮತ್ತು ಪಾರ್ಸಿ 75% ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಠ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದವರಿಗೆ (ಓಬಿಸಿ) 25%) ಅರ್ಜಿಗಳನ್ನು ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ SHP (State Hostel Portal) , https://shp.karnataka.gov.in/ ಮೂಲಕ ನ.07ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿ,ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಹಾಸನ, ದೂರವಾಣಿ ಸಂಖ್ಯೆ : 08172-268373/08172-267373 ಅಥವಾ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ವಿದೇಶಿ ಡ್ರಗ್ ಪೆಡ್ಲರ್‌ಗಳ ಬಂಧನ, 2.15 ಕೋಟಿ ರೂ.ಮೌಲ್ಯದ ಡ್ರಗ್ಸ್ ವಶ

**ಬೆಂಗಳೂರು:** ಮೆಡಿಕಲ್ ವೀಸಾದಲ್ಲಿ ಭಾರತಕ್ಕೆ ಬಂದು ಡ್ರಗ್ ಪೆಡ್ಲಿಂಗ್‌ನಲ್ಲಿ ತೊಡಗಿದ್ದ ನೈಜೀರಿಯಾ ದೇಶದ ಮಹಿಳೆ ಸೇರಿ ಇಬ್ಬರನ್ನು ಎಲೆಕ್ಟ್ರಾನಿಕ್ ಸಿಟಿ ಠಾಣೆ ಪೊಲೀಸರು ಬಂಧಿಸಿ 2.15 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಎಲೆಕ್ಟ್ರಾನಿಕ್ ಸಿಟಿ 1ನೇ ಹಂತದ ಮಹಾಲಕ್ಷ್ಮಿ ಲೇಔಟ್‌ನ ಖಾಲಿ ಜಾಗದಲ್ಲಿ ವಿದೇಶಿ ಪ್ರಜೆಯೊಬ್ಬ ಬೈಕ್‌ನಲ್ಲಿ ಬಂದು ಮಾದಕ ವಸ್ತು ಮಾರಾಟ ಮಾಡುತ್ತಿದ್ದಾನೆಂಬ ಮಾಹಿತಿ ಮೇರೆಗೆ ಪೊಲೀಸರು ದಾಳಿ ಮಾಡಿ ನೈಜೀರಿಯಾ ಪ್ರಜೆಯನ್ನು ಬಂಧಿಸಿದ್ದಾರೆ. ಆತನನ್ನು ವಿಚಾರಣೆಗೆ ಒಳಪಡಿಸಿದಾಗ ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ 2011ರಲ್ಲಿ ಮೆಡಿಕಲ್ ವೀಸಾದಲ್ಲಿ ನೈಜೀರಿಯಾದಿಂದ ಬೆಂಗಳೂರಿಗೆ ಬಂದು ಡ್ರಗ್ ಪೆಡ್ಲಿಂಗ್‌ನಲ್ಲಿ ತೊಡಗಿದ್ದಾಗಿ ಹೇಳಿದ್ದಾನೆ.

ಈ ಕೃತ್ಯದಲ್ಲಿ ಮತ್ತೊಬ್ಬ ವಿದೇಶಿ ವ್ಯಕ್ತಿ ಸೇರಿದಂತೆ ಮಹಿಳೆಯೂ ಸಹಕರಿಸುವುದಾಗಿ ಆರೋಪಿ ತಿಳಿಸಿದ್ದು, ಆತನಿಂದ 2.15 ಕೋಟಿ ರೂ. ಮೌಲ್ಯದ



490ಗ್ರಾಂ ಎಂಡಿಎಂಎ ಕ್ರಿಸ್ಟಲ್, 43 ಗ್ರಾಂ ಕೊಕೇನ್,1 ತೂಕದ ಯಂತ್ರ, ಮೊಬೈಲ್ ಫೋನ್ ಹಾಗೂ ದ್ವಿಚಕ್ರ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿಯನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಿದಾಗ ಐಟಿ ಉದ್ಯೋಗಿಗಳು ಹಾಗೂ ಸ್ಥಳೀಯ ನಿವಾಸಿಗಳನ್ನು ಟಾರ್ಗೆಟ್ ಮಾಡಿ ಮಾದಕ ವಸ್ತು ಮಾರಾಟ ಮಾಡುತ್ತಿದ್ದುದ್ದಾಗಿ ಹೇಳಿದ್ದಾನೆ. ಆರೋಪಿ ನೀಡಿದ ಮಾಹಿತಿಯಂತೆ ತನಿಖೆ ಮುಂದುವರೆಸಿದ ಪೊಲೀಸರು ಈತನಿಗೆ ಸಹಕರಿಸಿದ ವಿದೇಶಿ ಮಹಿಳೆಯನ್ನು ಎಲೆಕ್ಟ್ರಾನಿಕ್ ಸಿಟಿ 1ನೇ ಹಂತದ ಟೆಕ್ ಸಿಟಿ ಲೇಔಟ್‌ನಲ್ಲಿ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಆಕೆ ತಪ್ಪೊಪ್ಪಿಕೊಂಡಿದ್ದಾಳೆ. ತನಿಖೆ ಮುಂದುವರೆಸಿದ ಪೊಲೀಸರು ತಲೆ ಮರೆಸಿಕೊಂಡಿರುವ ಮತ್ತೊಬ್ಬ ವಿದೇಶಿ ಪ್ರಜೆಗಾಗಿ ಪತ್ತೆ ಕಾರ್ಯ ಮುಂದುವರೆದಿದ್ದು, ತನಿಖೆ ಪ್ರಗತಿಯಲ್ಲಿದೆ.ಈ ಕಾರ್ಯಾಚರಣೆಯನ್ನು ಎಲೆಕ್ಟ್ರಾನಿಕ್ ಸಿಟಿ ಠಾಣೆ ಇನ್‌ಪೆಕ್ಟರ್ ನವೀನ್ ಹಾಗೂ ಇತರೆ ಸಿಬ್ಬಂದಿ ತಂಡ ಕೈಗೊಂಡಿತ್ತು.ಆರೋಪಿಗಳು ನಕಲಿ ಪಾಸ್‌ಪೋರ್ಟ್ ಹೊಂದಿರುವುದು ಪೊಲೀಸರ ತನಿಖೆಯಿಂದ ತಿಳಿದು ಬಂದಿದೆ.

# ಸಾರ್ವಜನಿಕ ಶಿಕ್ಷಣ ಉಳಿವು, ಹಾಸ್ಟೆಲ್‌ಗಳ ಬಲವರ್ಧನೆಗೆ ಶೈಕ್ಷಣಿಕ ಜಾಥಾ

**ದಾವಣಗೆರೆ:** ಸಾರ್ವಜನಿಕ ಶಿಕ್ಷಣ ಉಳಿವಿಗಾಗಿ, ಹಾಸ್ಟೆಲ್ ಬಲವರ್ಧನೆಗಾಗಿ ಭಾರತ ವಿದ್ಯಾರ್ಥಿ ಫೆಡರೇಷನ್ ಕರ್ನಾಟಕ ರಾಜ್ಯ ಸಮಿತಿ ನೇತೃತ್ವದಲ್ಲಿ ರಾಜ್ಯವ್ಯಾಪ್ತಿ ಶೈಕ್ಷಣಿಕ ಜಾಥಾವು ದಾವಣಗೆರೆಯಲ್ಲಿ ಉದ್ಘಾಟನೆಗೊಂಡಿತು. ಶೈಕ್ಷಣಿಕ ಜಾಥಾವನ್ನು ನಗರದ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಹಿರಂಗ ಸಭೆ ನಡೆಸಲಾಯಿತು.

ಜಾಥಾಕ್ಕೆ ಚಾಲನೆ ನೀಡಿದ ಮಾನವ ಬಂಧುತ್ವ ವೇದಿಕೆಯ ರಾಜ್ಯ ಸಂಚಾಲಕ ಪ್ರೊ.ಎ.ಬಿ.ರಾಮಚಂದ್ರಪ್ಪ ಮಾತನಾಡಿ, ಸಾರ್ವಜನಿಕ ಶಿಕ್ಷಣ ಉಳಿಸಿ, ಹಾಸ್ಟೆಲ್ ಬಲಪಡಿಸಿ ಎಂಬ ಘೋಷವಾಕ್ಯದಡಿಯಲ್ಲಿ ಅಕ್ಟೋಬರ್ 13ರಿಂದ ದಾವಣಗೆರೆಯಲ್ಲಿ ಉದ್ಘಾಟನೆಗೊಂಡು 2ರವರೆಗೆ ರಾಜ್ಯಾದಾದ್ಯಂತ ಸಂಚಾರಿಸಿ ವಿದ್ಯಾರ್ಥಿಗಳ ಜಲ್ವಂತ ಸಮಸ್ಯೆಗಳ ಪರಿಹಾರಕ್ಕಾಗಿ ಪ್ರಚಾರಾಂದೋಲನ ನಡೆಸಿ ಶಾಲಾ ಕಾಲೇಜು, ಹಾಸ್ಟೆಲ್ ಸಮೀಕ್ಷೆ ನಡೆಸಿ 29 ಮತ್ತು 30ರಂದು ಎರಡು ದಿನಗಳಕಾಲ ಹಾಸ್ಟೆಲ್ ವಿದ್ಯಾರ್ಥಿಗಳ ರಾಜ್ಯಮಟ್ಟದ ಸಮಾವೇಶವನ್ನು ಹಾವೇರಿಯ ಗುರುಭವನದಲ್ಲಿ ಜರುಗಲಿದೆ. ಈ ಹಿನ್ನೆಲೆಯಲ್ಲಿ ಇಡೀ ರಾಜ್ಯಾದ್ಯಂತ ಸಂಚಾರಿಸುವ ಜಾಥಾವು ವಿದ್ಯಾರ್ಥಿಗಳನ್ನು ಬೃಹತ್ ಮಟ್ಟದ ವಿದ್ಯಾರ್ಥಿಗಳ ಚಳುವಳಿಯನ್ನು ರೂಪಿಸಲಾಗುವುದು ಎಂದರು.

ಸಿಐಟಿಯು ಜಿಲ್ಲಾ ಸಂಚಾಲಕ ಕೆ.ಹೆಚ್.ಆನಂದ ರಾಜು ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಸಮಸ್ಯೆ ಬಗೆಹರಿಸಿಕೊಳ್ಳಲು ವಿದ್ಯಾರ್ಥಿ ಸಂಘಟನೆ ಜೊತೆ ಕೈ ಜೋಡಿಸಿ ಎಲ್ಲರೂ ಸಂಗಟಿತರಾಗಬೇಕು. ವಿದ್ಯಾರ್ಥಿ ವೇತನ, ಶುಲ್ಕ, ಹಾಸ್ಟೆಲ್ ಸೌಲಭ್ಯ ಸಿಗದಂತ ಪರಿಸ್ಥಿತಿಗೆ ಬಂದು ನಿಂತಿದೆ. ವಿದ್ಯಾರ್ಥಿಗಳನ್ನು ಜಾತಿ ಧರ್ಮ ಆದರದ ಮೇಲೆ ಒಡೆಯುವ ಹುನ್ನಾರಗಳು ನಡೆಯುತ್ತಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಜಾಥಾವು ಸಾರ್ವಜನಿಕ ಶಿಕ್ಷಣ ಉಳಿವಿಗಾಗಿ ಹಾಸ್ಟೆಲ್‌ಗಳ ಬಲವರ್ಧನೆ ಶ್ರಮಿಸಲಿ ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿಯಿಂದಾಗಿ ಸರಿಯಾದ ಶಿಕ್ಷಣ ಸಿಗುತ್ತಿಲ್ಲ ಕಳೆದ 11ವರ್ಷಗಳಲ್ಲಿ 12 ಸಾವಿರ ಶಾಲೆ ಮುಚ್ಚಿದ್ದಾರೆ. ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರಿಗೆ ಸರಿಯಾದ ರಕ್ಷಣೆ ಇಲ್ಲ ಜೊತೇಲಿ ಲೈಂಗಿಕ ದೌರ್ಜನ್ಯ ಆಗುತ್ತಿವೆ. ದಿನ ದಿಂದ ದಿನಕ್ಕೆ ದೌರ್ಜನ್ಯ ಹೆಚ್ಚಾಗುತ್ತಿವೆ ಆದರೆ ಸರ್ಕಾರಗಳು ರಕ್ಷಣೆ ಕೊಡುವಲ್ಲಿ ವಿಫಲ ಆಗಿದೆ. ರಾಜ್ಯದಲ್ಲಿ ಶಿಕ್ಷಣ ಖಾಸಗಿಕಾರಣ ಆಗುತ್ತಿದೆ ಶೇ.70ರಷ್ಟು ಖಾಸಗಿ ಸಂಸ್ಥೆ ಇದೆ. ಹಾಸ್ಟೆಲ್ ಸಮಸ್ಯೆಗಳು ತಾಂಡವ ಆಡುತ್ತಿವೆ. ಇದೆಲ್ಲದರ ವರದಿ ತಯಾರಿಸಿ ರಾಜ್ಯ ಸರ್ಕಾರಕ್ಕೆ ಕಳುಹಿಸಲಾಗುವುದು ಎಂದರು.

ಪ್ರತಿಭಟನೆಯಲ್ಲಿ ಎಸ್‌ಎಫ್‌ಐ ಅಖಿಲ ಭಾರತ ಅಧ್ಯಕ್ಷ ಆದರ್ಶ ಸಾಜಿ, ರಾಜ್ಯಾಧ್ಯಕ್ಷ ಶಿವಪ್ಪ ಅಬ್ಲಿಕಲ್, ಕಾರ್ಯದರ್ಶಿ ಟಿ.ಎಸ್.ವಿಜಯಕುಮಾರ್, ಉಪಾಧ್ಯಕ್ಷ ಗಣೇಶ ರಾಠೋಡ್, ಗ್ಯಾನೇಶ್

# ದೇಶಪಾಂಡೆ ಸರ್ಕಾರದ ವಾಸ್ತವಾಂಶವನ್ನು ತೆರೆದಿಟ್ಟಿದ್ದಾರೆ

**ಬೆಂಗಳೂರು:** ರಾಜ್ಯದಲ್ಲಿ ಗ್ಯಾರಂಟಿಯಿಂದ ಅಭಿವೃದ್ಧಿ ಕುಂಠಿತವಾಗಿದೆ ಎಂಬ ವಾಸ್ತವಾಂಶವನ್ನು ಕಾಂಗ್ರೆಸ್ ಹಿರಿಯ ಶಾಸಕರಾದ ಆರ್.ವಿ. ದೇಶಪಾಂಡೆ ತೆರೆದಿಟ್ಟಿರುವುದರಲ್ಲಿ ತಪ್ಪೇನಿಲ್ಲ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶಪಾಂಡೆ ಅವರು ಗ್ಯಾರಂಟಿಗಳ ಬಗ್ಗೆ ಅಪಸ್ವರ ಎತ್ತಿದ್ದಾರೆ. ಸರ್ಕಾರದ ವಾಸ್ತವ ಅಂಶವನ್ನು ತೆರೆದಿಟ್ಟಿದ್ದಾರೆ ಎಂದು ಹೇಳಿದರು.

ರಾಜ್ಯದ ಮುಖ್ಯಮಂತ್ರಿ ದೊಡ್ಡ ಗಾತ್ರದ ಬಜೆಟ್ ಕೊಟ್ಟಿದ್ದು, ಗ್ಯಾರಂಟಿಗಳಿಗೆ 60 ಸಾವಿರ ಕೋಟಿ ಮಿಸಲಿಟ್ಟಿರುವುದಾಗಿ



ಹೇಳಿದರೂ ಇಲ್ಲಿವರೆಗೂ ಪ್ರತಿ ತಿಂಗಳು ಸಮರ್ಪಕವಾಗಿ ಗ್ಯಾರಂಟಿಗಳನ್ನು ಕೊಟ್ಟಿಲ್ಲ. ಅಭಿವೃದ್ಧಿ ಸಂಪೂರ್ಣವಾಗಿ ಕುಂಟಿತಗೊಂಡಿದೆ ಎಂದು ರಾಜ್ಯ ಸರ್ಕಾರ ವಿರುದ್ಧ ಅವರು ವಾಗ್ದಾಳಿ ನಡೆಸಿದರು.

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮೇಲೆ ಮಾಟ ಮಂತ್ರ ಮಾಡಿಸಲಾಗಿದೆ ಎಂಬ ಶಾಸಕ ಮುನಿರತ್ನ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ನಾನು ಇದ್ಯಾವುದರಲ್ಲೂ ನಂಬಿಕೆ ಇಟ್ಟುಕೊಂಡಿಲ್ಲ. ನಮಗೆ ಗೊತ್ತಿರುವುದು ಕಾಯಕವೇ ಕೈಲಾಸ ಎಂಬುದು. ನಾವು ಶಿವನ ಆರಾಧಕರು, ಭಕ್ತಿ ಪೂರಕವಾಗಿ ಪೂಜೆ ಮಾಡುತ್ತೇವೆ. ಅವರು ಹೇಳಿರುವುದರ ಬಗ್ಗೆ ನನಗೆ ಗೊತ್ತಿಲ್ಲ. ಕರ್ಮ ಯಾರನ್ನೂ ಬಿಡುವುದಿಲ್ಲ. ನಾವು ಏನು ಮಾಡುತ್ತೇವೋ ಅದು ನಮಗೆ ವಾಪಸ್ ಕೊಡುತ್ತದೆ. ನನಗೆ ಮಾಟ ಮಂತ್ರದ ಖಿಲ್ ಅವರು ತಿಳಿಸಿದರು.

ಆರ್‌ಎಸ್‌ಎಸ್ ನಮ ಭಾರತ ದೇಶದಲ್ಲಿ ಸಮಾಜವನ್ನು ಒಳ್ಳೆ ದಿಕ್ಕಿಗೆ ತೆಗೆದುಕೊಂಡು ಹೋಗುತ್ತಿದೆ. ಸಾಕಷ್ಟು ಒಳ್ಳೆಯ ಕೆಲಸ ಮಾಡಿದೆ. ಈಗಾಗಲೇ ನೂರು ವರ್ಷವನ್ನು ಪೂರೈಸಿದೆ. ಇದನ್ನು ರಾಜಕೀಯ ಹೇಳಿಕೆಗೆ ಬಳಸಬಾರದು ಎಂದು ಹೇಳಿದರು.

## ದೇವೇಗೌಡರಿಗೆ ದೈವದ ಅನುಗ್ರಹವಿದೆ

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ದೈವದ ಅನುಗ್ರಹವಿದೆ. ಎಂಥ ಸಮಸ್ಯೆ ಬಂದರೂ ಅವರಿಗೆ ಗೆದ್ದು ಬರುತ್ತೇನೆಂಬ ಆತ ವಿಶ್ವಾಸ ಇದೆ. ಬಹಳ ಬೇಗ ಗುಣಮುಖರಾಗಿ ಮನೆಗೆ ಬಂದಿದ್ದಾರೆ. ಮಣಿಪಾಲ್ ಆಸ್ಪತ್ರೆಯಲ್ಲಿರುವ ವೈದ್ಯರಿಗೂ ಧನ್ಯವಾದಗಳು. ಅವರ ಶ್ರಮವು ಅಷ್ಟೆ ಇದೆ. ರಾಜ್ಯದ ಹೇಳುವರೆ ಕೋಟಿ ಕನ್ನಡಿಗರ ಆಶೀರ್ವಾದ, ಹಾರೈಕೆ, ಪ್ರೀತಿ, ವಾತ್ಸಲ್ಯ ದೇವೇಗೌಡರ ಮೇಲಿದೆ. ಆರೋಗ್ಯದಲ್ಲಿನ ಸಣ್ಣಪುಟ್ಟ ಸಮಸ್ಯೆಗಳು ಬಗೆಹರಿದಿವೆ. ಅಭಿಮಾನಿಗಳು ಆತಂಕ ಪಡುವ ಅಗತ್ಯವಿಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಅವರು ಇದೇ ವೇಳೆ ತಿಳಿಸಿದರು.

# ದೀಪಾವಳಿ ಹಬ್ಬಕ್ಕೆ ಕೆ.ಎಸ್.ಆರ್.ಟಿ.ಸಿ ಯಿಂದ 2500 ವಿಶೇಷ ಬಸ್ ಸೇವೆ

**ಬೆಂಗಳೂರು:** ದೀಪಾವಳಿ ಹಬ್ಬದ ಪ್ರಯುಕ್ತ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಬೆಂಗಳೂರಿನಿಂದ ರಾಜ್ಯ ಹಾಗೂ ಅಂತರರಾಜ್ಯಕ್ಕೆ 2500 ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಕಲ್ಪಿಸಿದೆ.ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿ ನಗರ ನಿಲ್ದಾಣದಿಂದ ಅ.17 ರಿಂದ 20 ರ ವರೆಗೆ ಬಸ್‌ಗಳು ಹೊರಡಲಿವೆ.

ಹಾಗೂ ರಾಜ್ಯ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಅ.22 ರಿಂದ 26 ರ ವರೆಗೆ ಬೆಂಗಳೂರಿಗೆ ವಿಶೇಷ ಬಸ್‌ಗಳು ಬರಲಿವೆ.ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ,

ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲ್ಬುರ್ಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬದ್ ಮುಂತಾದ ರಸ್ತೆಗಳಿಗೆ ವಿಶೇಷಕ ಕಾರ್ಯಾಚರಣೆ ಮಾಡಲಿವೆ.

ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ಬಸ್‌ಗಳು ತೆರಳಲಿವೆ.

ತಮಿಳುನಾಡು, ಕೇರಳ, ಮಧುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರು, ತಿರುಚಿ, ಪಾಲಕ್ಕಾಡ್, ತ್ರಿಶೂರ್, ಏರ್ನಾಕುಲಂ, ಕೋಯಿಕೋಡ್,ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ತೆರಳುವ ಪ್ರತಿಷ್ಠಿತ ಸಾರಿಗೆ ಬಸ್‌ಗಳು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಿವೆ.

ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಹಾಸನಗಳನ್ನು



ಕಾಯ್ದಿರಿಸುವ ಸೌಲಭ್ಯ ಕಲ್ಪಿಸಲಾಗಿದೆ. www.ksrtc karnataka.gov.in ವೆಬ್‌ಸೈಟ್ ಮುಖಾಂತರ ಈ ಟಿಕೆಟ್ ಬುಕ್ಕಿಂಗ್ ಮಾಡಬಹುದಾಗಿದೆ. ಪ್ರಯಾಣಿಕರು ಕರ್ನಾಟಕ ಹಾಗೂ ಅಂತರರಾಜ್ಯದಲ್ಲಿರುವ ಬುಕ್ಕಿಂಗ್ ಕೌಂಟರ್‌ಗಳ ಮೂಲಕವು ಕೂಡ ಮುಂಗಡವಾಗಿ ಹಾಸನಗಳನ್ನು ಕಾಯ್ದಿರಿಸಬಹುದಾಗಿದೆ.

ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್ ಕಾಯ್ದಿರಿಸಿದ್ದಲ್ಲಿ ಶೇ. 5 ರಷ್ಟು ರಿಯಾಯಿತಿ ನೀಡಲಾಗುವುದು. ಹೋಗುವ ಮತ್ತು ಬರುವ ಪ್ರಯಾಣದ ಟಿಕೆಟ್‌ಗಳನ್ನು ಒಟ್ಟಿಗೆ ಕಾಯ್ದಿರಿಸಿದರೆ ವಾಪಸ್ ಪ್ರಯಾಣ ದರದಲ್ಲಿ ಶೇ. 10 ರಷ್ಟು ರಿಯಾಯಿತಿ ನೀಡಲಾಗುವುದು.

ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ , ಮಹಾರಾಷ್ಟ್ರ ಹಾಗೂ ಪುದುಚೆರಿಯಲ್ಲಿರುವ ಪ್ರಮುಖ ನಗರಗಳಲ್ಲಿ ನಿಗಮದ ಕಚೇರಿಯಲ್ಲಿ ಮುಂಗಡ ಹಾಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳಿದ್ದು ಇವುಗಳ ಮೂಲಕವು ಸಹ ಮುಂಗಡವಾಗಿ ಹಾಸನಗಳನ್ನು ಕಾಯ್ದಿರಿಸಬಹುದಾಗಿದೆ.ವಿಶೇಷ ಬಸ್‌ಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ವೆಬ್‌ಸೈಟ್‌ಗಳಲ್ಲಿ ಒದಗಿಸಲಾಗಿದೆ ಎಂದು ನಿಗಮವು ತಿಳಿಸಿದೆ.

# ನಕ್ಸಲರು ಅಡಗಿಸಿಟ್ಟಿದ್ದ ಭಾರೀ ಶಸ್ತ್ರಾಸ್ತ್ರ ವಶ



**ರಾಯ್‌ಪುರ:** ನಕ್ಸಲರು ಅರಣ್ಯದಲ್ಲಿ ಅಡಗಿಸಿಟ್ಟಿದ್ದ ಭಾರಿ ಪ್ರಮಾಣದ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಳ್ಳುವಲ್ಲಿ ಜಾರ್ಖಂಡ್ ಪೊಲೀಸರು ಯಶಸ್ವಿಯಾಗಿದ್ದಾರೆ. ಭದ್ರತಾ ಪಡೆ ಹಾಗೂ ಬಿಜಾಪುರ ಪೊಲೀಸರು ನಡೆಸಿದ ಜಂಟಿ ಕಾರ್ಯಚರಣೆಯಲ್ಲಿ ನಕ್ಸಲರು ಅಡಗಿಸಿಟ್ಟಿದ್ದ ಅಪಾರ ಪ್ರಮಾಣದ ಸ್ಫೋಟಕ ವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.


ನಿನ್ನೆ ಮಧ್ಯಾಹ್ನ 3 ಗಂಟೆ ಸುಮಾರಿಗೆ ತಡ್ಪಲ ಬೇಸ್ ಕ್ಯಾಂಪ್‌ನ ಕೋಬ್ರಾ 206, ಸಿಆರ್‌ಪಿಎಫ್ 229, 153 ಮತ್ತು 196 ಮತ್ತು ಬಿಜಾಪುರ ಪೊಲೀಸರು ಕೆಜಿಹೆಚ್ ತಪ್ಪಲಿನ ಪ್ರದೇಶದಲ್ಲಿ ಜಂಟಿ ಕಾರ್ಯಚರಣೆ ನಡೆಸಿದ್ದಾರೆ.ಈ ವೇಳೆ ನಕ್ಸಲರು ಅಡಗಿಸಿಟ್ಟಿದ್ದ ಅಪಾರ ಪ್ರಮಾಣದ ಸ್ಫೋಟಕ ವಸ್ತುಗಳು ಪತ್ತೆಯಾಗಿದ್ದು, 51 ಜೀವಂತ ಬಿಜಿಎಲ್‌ಗಳು, 100 ಬಂಡಲ್‌ಗಳ ಹೆಚ್‌ಟಿ ಅಲ್ಯೂಮಿನಿಯಂ ತಂತಿ, 50 ಸ್ಟಿಲ್ ಪೈಪ್‌ಗಳು, ಬಿಜಿಎಲ್ ನಿರ್ಮಾಣಕ್ಕಾಗಿ ದೊಡ್ಡ ಪ್ರಮಾಣದ ವಿದ್ಯುತ್ ತಂತಿ, 20 ಕಬ್ಬಿಣದ ಹಾಳೆಗಳು ಮತ್ತು 40 ಕಬ್ಬಿಣದ ತಟ್ಟೆಗಳನ್ನು ವಶಪಡಿಸಿಕೊಂಡಿದ್ದಾರೆ. ಅದಲ್ಲದೇ ನಕ್ಸಲರು ಇಟ್ಟಿದ್ದ ಐದು ಐಇಡಿಗಳು ಕೂಡ ಶೋಧ ಕಾರ್ಯಾಚರಣೆ ವೇಳೆ ಪತ್ತೆಯಾಗಿದೆ. ಸದ್ಯ ಸ್ಫೋಟಕ ವಸ್ತುಗಳು ಪತ್ತೆಯಾದ ಪ್ರದೇಶದಲ್ಲಿ ನಿರಂತರ ಗಸ್ತು ನಡೆಸಲಾಗುತ್ತಿದೆ.

## ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ "ಬಸವರಾಜ.ಕೆ" ಆಯ್ಕೆಯಾಗಿದ್ದಕ್ಕೆ ಅಭಿನಂದನೆಗಳು

**ಹೊಸಪೇಟೆ :** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಬೆಂಗಳೂರಿನ ರಾಜ್ಯಾಧ್ಯಕ್ಷರಾದ ಶ್ರೀ ಎಸ್.ಷಡಾಕ್ಷರಿಯವರು ರಾಜ್ಯ ಸಂಘದ ಬೈಲಾದಲ್ಲಿರುವ ಪ್ರದತ್ತವಾದ ಅಧಿಕಾರದನ್ವಯ "ಬಸವರಾಜ.ಕೆ". ಹಿರಿಯ ಉಪಾಧ್ಯಕ್ಷರು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ವಿಜಯನಗರ ಜಿಲ್ಲೆ, ಹೊಸಪೇಟೆ ಇವರನ್ನು ರಾಜ್ಯ ಸಂಘದ "ರಾಜ್ಯ ಸಂಘಟನಾ ಕಾರ್ಯದರ್ಶಿ" ನಾಮನಿರ್ದೇಶನ ಮಾಡಿ ರಾಜ್ಯ ಶಾಖೆಯ ನೌಕರರ ಭವನದ ಕಛೇರಿಯಲ್ಲಿ ಅಭಿನಂಧಿಸಿ, ಸಂಘಟನೆಯನ್ನು ಬಲಿಷ್ಠಗೊಳಿಸಲು ಹಾಗೂ ನೌಕರರ ಏಳಿಗೆಗಾಗಿ ಕ್ರಿಯಾಶೀಲವಾಗಿ ಸ್ಪಂದಿಸಲು ಸೂಚಿಸಿ ಆದೇಶ ಪತ್ರವನ್ನು ನೀಡಲಾಯಿತು. ಇದೇ ಸಂದರ್ಭದಲ್ಲಿ ರಾಜ್ಯದ ಸಮಸ್ತ ನೌಕರರಿಗೆ ಆರೋಗ್ಯ ಸಂಜೀವಿನಿ ಜಾರಿಗೆ ತರಲು ಶ್ರಮಿಸಿದ ರಾಜ್ಯಾಧ್ಯಕ್ಷರಾದ ಶ್ರೀ ಸಿ.ಎಸ್.ಷಡಕ್ಷರಿಯವರನ್ನು ವಿಜಯನಗರ ಜಿಲ್ಲಾ ಶಾಖೆ ವತಿಯಿಂದ ಜಿಲ್ಲಾಧ್ಯಕ್ಷರಾದ ಶ್ರೀ ಜಿ.ಮಲ್ಲಿಕಾರ್ಜುನಗೌಡ ಹಾಗೂ ಪದಾಧಿಕಾರಿಗಳು ಅಭಿನಂಧಿಸಿ ನೂತನ ವಿಜಯನಗರ ಜಿಲ್ಲೆಯಲ್ಲಿ ಜಿಲ್ಲಾ ಕೆ.ಜಿ.ಐ.ಡಿ. ಕಛೇರಿ, ಜಿಲ್ಲಾ ತರಬೇತಿ ಸಂಸ್ಥೆ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕಛೇರಿ ಆರಂಭಿಸಲು ಸರ್ಕಾರಕ್ಕೆ ಒತ್ತಾಯಿಸಬೇಕೆಂದು ರಾಜ್ಯಾಧ್ಯಕ್ಷರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಗಿರಿಗೌಡ, ರಾಜ್ಯ ಉಪಾಧ್ಯಕ್ಷ ಡಾ.ಸದಾನಂದ ನೆಲಕುದುರಿ, ವಿಜಯನಗರ ಜಿಲ್ಲಾಧ್ಯಕ್ಷರಾದ ಮಲ್ಲಿಕಾರ್ಜುನಗೌಡ, ಉಪಸ್ಥಿತರಿದ್ದರು.

ರಾಜ್ಯ ಶಾಖೆಗೆ ವಿಜಯನಗರ ಜಿಲ್ಲೆ ವತಿಯಿಂದ ಸಂಘಟನ ಕಾರ್ಯದರ್ಶಿಯಾಗಿ



ಬಸವರಾಜ.ಕೆ. (ಹೊಸಪೇಟೆ) ಇವರೊಟ್ಟಿಗೆ ಡಾ.ಪಿ.ಮುನಿವಾಸುದೇವರೆಡ್ಡಿ (ಹೊಸಪೇಟೆ) – ರಾಜ್ಯ ಸಾಂಸ್ಕೃತಿಕ ಕಾರ್ಯದರ್ಶಿ, ಕೊಟ್ರಗೌಡ್ರು (ಹಡಗಲಿ) – ರಾಜ್ಯ ಕಾರ್ಯದರ್ಶಿ, ಎಂ.ಪಿ.ಎಂ. ಮಂಜುನಾಥ

(ಹಗರಿಬೊಮ್ಮನಹಳ್ಳಿ) – ವಿಭಾಗಿಯ ಉಪಾಧ್ಯಕ್ಷರು, ಜಗದೀಶ್.ಕೆ. (ಕೊಟ್ಟೂರು) – ರಾಜ್ಯ ಪರಿಷತ್ ಸದಸ್ಯರು, ಎಂ.ಪಿ.ಎಂ. ಅಶೋಕ್ (ಹಡಗಲಿ) – ರಾಜ್ಯ ಜಂಟಿ ಕಾರ್ಯದರ್ಶಿಯಾಗಿ ನಾಮ ನಿರ್ದೇಶನ ಮಾಡಲಾಯಿತು.

ಜಿಲ್ಲೆಯ ಪದಾಧಿಕಾರಿಗಳನ್ನು ರಾಜ್ಯ ಶಾಖೆಗೆ ನಾಮ ನಿರ್ದೇಶನ ಮಾಡಿದ್ದಕ್ಕಾಗಿ ವಿಜಯನಗರ ಜಿಲ್ಲಾಧ್ಯಕ್ಷರಾದ ಜಿ.ಮಲ್ಲಿಕಾರ್ಜುನಗೌಡ, ಜಿಲ್ಲಾ ಖಜಾಂಚಿ ಕೆ.ಮಲ್ಲೇಶಪ್ಪ, ರಾಜ್ಯ ಪರಿಷತ್ ಸದಸ್ಯ ರಾಘವೇಂದ್ರ ಹೆಗಡಿಯಾಳ್, ಜಿಲ್ಲಾ ಕಾರ್ಯದರ್ಶಿ ಟಿ.ಪಂಪಣ್ಣ ಸೇರಿದಂತೆ ನೌಕರರ ಸಂಘದ ಜಿಲ್ಲಾ ಹಾಗೂ ತಾಲೂಕುಗಳ ಪದಾಧಿಕಾರಿಗಳು, ಜಿಲ್ಲೆಯ ಸರ್ಕಾರಿ ನೌಕರರು ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಕರು ಅಭಿನಂಧಿಸಿ ಶುಭಕೋರಿದ್ದಾರೆ.

# ಸಿಎಂ ಸಿದ್ದರಾಮಯ್ಯ ಹಿಂದುಳಿದವರ ಚಾಂಪಿಯನ್ ಅಲ್ಲ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ದಲಿತರು, ಹಿಂದುಳಿದವರ ಚಾಂಪಿಯನ್ ಅಲ್ಲ. ಬದಲಿಗೆ ಅವರು ದಲಿತರು, ಹಿಂದುಳಿದವರಿಗೆ ಮೋಸ ಮಾಡಿದವರು ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣ ಎಕ್‌ನಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಸರ್ಕಾರದ ವಿರುದ್ಧ ಸಾಲು ಸಾಲು ಪೋಸ್‌ಮಾಡಿರುವ ಅವರು, ಗುಲ್ಬರ್ಗದಿಂದ ದಸರಾ ವೇಳೆ ಬಲೂನ್ ವ್ಯಾಪಾರಕ್ಕಾಗಿ ಮೈಸೂರಿಗೆ ಬಂದಿದ್ದ ಹಕ್ಕಿಪಿಕ್ಕಿ ಜನಾಂಗದ 10 ವರ್ಷದ ಬಾಲಕಿಯನ್ನು ಅಪಹರಿಸಿ ಆತ್ಯಾಚಾರ ಮಾಡಿ ಕೊನೆಗೆ ಕೊಲೆ ಮಾಡಿದ್ದ ಹೃದಯವಿದ್ರಾವಕ ಘಟನೆ ಇಡೀ ರಾಜ್ಯವನ್ನೆ ಬೆಚ್ಚಿ ಬೀಳಿಸಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಘಟನೆ ನಡೆದು 5 ದಿನಗಳಾದರೂ, ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಅಪ್ರಾಪ್ತ ಬಾಲಕಿಗೆ ಆದ ಈ ಅನ್ಯಾಯಕ್ಕೆ ಸಿಎಂ ಸಿದ್ದರಾಮಯ್ಯನವರ ಸರ್ಕಾರ ಈವರೆಗೂ ಪರಿಹಾರವನ್ನೂ ನೀಡಿಲ್ಲ, ಕನಿಷ್ಠ ಪಕ್ಷ ಸೌಜನ್ಯಕ್ಕೂ ಅವರ ಆ ಹೆತ್ತ ತಂದೆತಾಯಿಯರನ್ನು ಭೇಟಿಯಾಗಿ ಸಾಂತ್ವನವನ್ನೂ ಹೇಳಿಲ್ಲ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಸ್ವಾಮಿ ಸಿಎಂ ಸಿದ್ದರಾಮಯ್ಯನವರೇ, ನಾವು ದಲಿತರು, ಹಿಂದುಳಿದವರ



ಪರವಾಗಿದ್ದೇವೆ ಎಂದು ಬೊಗಳೆ ಭಾಷಣ ಮಾಡುತ್ತೀರಲ್ಲ,

ನಿಮ್ಮ ತವರು ಜಿಲ್ಲೆಯಲ್ಲಿ ಮೈಸೂರಿನ ಹೃದಯ ಭಾಗದಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಬಾಲಕಿಗೆ ಆದ ಘೋರ ಅನ್ಯಾಯ ನಿಮ್ಮ ಕಣ್ಣಿಗೆ ಕಾಣುತ್ತಿಲ್ಲವೇ? ಎಂದು ಪ್ರಶ್ನೆ ಮಾಡಿದ್ದಾರೆ.

ಒಂದು ಕಡೆ ಮೈಸೂರು ಜಿಲ್ಲೆಯನ್ನು ಸಂಪೂರ್ಣವಾಗಿ ನಿಮ್ಮ ಪುತ್ರನಿಗೆ ಬಿಟ್ಟುಕೊಟ್ಟು ವರ್ಗಾವಣೆ, ಕಮಿಷನ್ ದಂಧೆಯಲ್ಲಿ ತೊಡಗಿಸಿದ್ದೀರಿ. ಇನ್ನೊಂದು ಕಡೆ ತಾವು ಬೆಂಗಳೂರಿನಲ್ಲಿ ಡಿನ್ನರ್ ಮೀಟಿಂಗ್, ಕಲೆಕ್ಷನ್ ಟಾರ್ಗೆಟ್ ಮೀಟಿಂಗ್ ಎಂದು ಬಿಹಾರ ಚುನಾವಣೆಗೆ ಂಡಿಂಗ್ ಕಳುಹಿಸಲು ಪೈಪೋಟಿಗೆ ಬಿದ್ದಂತೆ ಸಚಿವರಿಗೆ ವಸೂಲಿ ಟಾರ್ಗೆಟ್ ನೀಡಿ ಅಕ್ಟೋಬರ್ ಕ್ರಾಂತಿಯ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಳ್ಳುವಲ್ಲಿ ಬ್ಯುಸಿ ಆಗಿದ್ದೀರಿ.ಒಂದು ಕಡೆ ಮೈಸೂರು ಜಿಲ್ಲೆಯನ್ನು ಸಂಪೂರ್ಣವಾಗಿ ನಿಮ್ಮ ಪುತ್ರನಿಗೆ

ಬಿಟ್ಟುಕೊಟ್ಟು ವರ್ಗಾವಣೆ, ಕಮಿಷನ್ ದಂಧೆಯಲ್ಲಿ ತೊಡಗಿಸಿದ್ದೀರಿ. ಇನ್ನೊಂದು ಕಡೆ ತಾವು ಬೆಂಗಳೂರಿನಲ್ಲಿ ಡಿನ್ನರ್ ಮೀಟಿಂಗ್, ಕಲೆಕ್ಷನ್ ಟಾರ್ಗೆಟ್ ಮೀಟಿಂಗ್ ಎಂದು ಬಿಹಾರ ಚುನಾವಣೆಗೆ ಂಡಿಂಗ್ ಕಳುಹಿಸಲು ಪೈಪೋಟಿಗೆ ಬಿದ್ದಂತೆ ಸಚಿವರಿಗೆ ವಸೂಲಿ ಟಾರ್ಗೆಟ್ ನೀಡಿ ಅಕ್ಟೋಬರ್ ಕ್ರಾಂತಿಯ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಳ್ಳುವಲ್ಲಿ ಬ್ಯುಸಿ ಆಗಿದ್ದೀರಿ.

ಹೀಗಾದರೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿಯದೇ ಇನ್ನೇನಾಗುತ್ತದೆ ಸ್ವಾಮಿ? ಒಬ್ಬ ದಲಿತ ಬಾಲಕಿಯ ಕೊಲೆಯ ರಕ್ತ ನಿಮ್ಮ ಕೈಗಂಟಿದೆ. ಈ ಪಾಪದ ಶಾಪ ನಿಮ್ಮನ್ನು ತಟ್ಟದೇ ಇರದು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವೇತನ ಸಿಗದೆ ಕಲಬುರಗಿಯ ಗ್ರಂಥಪಾಲಕಿ ಆತ್ಮಹತ್ಯೆ, ಬಿಲ್ ಪಾವತಿ ಆಗದಿದ್ದಕ್ಕೆ ಕಂಟ್ರಾಕ್ಟರ್‌ಗಳ ಆತ್ಮಹತ್ಯೆ, ವರ್ಗಾವಣೆ, ಕಮಿಷನ್ ದಂಧೆಗೆ ಪೊಲೀಸರು, ಸರ್ಕಾರಿ ಅಧಿಕಾರಿಗಳ ಆತ್ಮಹತ್ಯೆ, ಸಕಾಲಕ್ಕೆ ನೆರೆ, ಬರ ಪರಿಹಾರ ಸಿಗದೆ ರೈತರ ಆತ್ಮಹತ್ಯೆ, ನಿಗಮ ಮಂಡಳಿಗಳಿಂದ ಸಾಲ ಸಿಗದೆ ಮೈಕ್ರೊ ಫೈನಾನ್ಸ್ ಕಿರುಕುಳಕ್ಕೆ ಸಿಲುಕಿ ಬಡವರ ಆತ್ಮಹತ್ಯೆಗಳಾಗಿವೆ.

ಈ ಮನೆಹಾಳು ಸಿದ್ದರಾಮಯ್ಯ ಸರ್ಕಾರ ರಾಜ್ಯವನ್ನು ದಿವಾಳಿ ಮಾಡಿ ಜನಸಾಮಾನ್ಯರಿಗೆ ಆತ್ಮಹತ್ಯೆ ಭಾಗ್ಯ, ಸಾವು ಗ್ಯಾರೆಂಟಿ ನೀಡುತ್ತಿದೆ. ಈ ಕೊಲೆಗಡುಕ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ! ಎಂದು ಗುಡುಗಿದ್ದಾರೆ. ಕಾಂಗ್ರೆಸ್ ಕ್ರಾಂತಿ ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪುತ್ತಿದೆ. 135 ಸೀಟು ಕೊಟ್ಟರೂ ರಾಜ್ಯಕ್ಕೆ ಒಂದು ಸುಭದ್ರ ಸರ್ಕಾರ ಕೊಡಲಾಗದ ಕಾಂಗ್ರೆಸ್ ಪಕ್ಷಕ್ಕೆ ಕನ್ನಡಿಗರು ಇನ್ನೆಂದಿಗೂ ಮತ ಹಾಕುವುದಿಲ್ಲ ಎಂದು ಎಚ್ಚರಿಸಿದ್ದಾರೆ.

# ರಾಜ್ಯ ಮಟ್ಟಕ್ಕೆ ಆಯ್ಕೆ : ಅಭಿನಂದನೆ



**ಹಾಸನ** : 2025–26 ನೇ ಸಾಲಿನ ಹಾಸನ ಜಿಲ್ಲಾಮಟ್ಟದ ಪದವಿ ಪೂರ್ವ ಕಾಲೇಜು ಕ್ರೀಡಾಕೂಟದಲ್ಲಿ ಶಾಂತಿಗ್ರಾಮ ಕಾಲೇಜಿನ ಬಾಲಕಿಯರು ಕಬಡ್ಡಿಯಲ್ಲಿ ಹಾಗೂ ಬಾಲಕರು ಬಾಲ್ ಬ್ಯಾಟ್ಮಿಟನ್‌ನಲ್ಲಿ ಗೆದ್ದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ.
ಈ ಕ್ರೀಡಾಪಟುಗಳಿಗೆ ಕಾಲೇಜಿನ ಪ್ರಾಂಶುಪಾಲರಾದ ಕೃಷ್ಣಪ್ರಸಾದ್ ಅಭಿನಂದಿಸಿದ್ದಾರೆ.

# ಉದ್ಯಮಗಳ ಬೆಳವಣಿಗೆ, ಸರ್ಕಾರ ಮತ್ತು ಉದ್ದಿಮೆದಾರರ ಸಹಕಾರ ಅಗತ್ಯ; ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ

**ದಾವಣಗೆರೆ** : ಉದ್ಯಮ ಉಳಿಸಿ ಬೆಳೆಸುವ ಆಶಯವನ್ನು ಕರ್ನಾಟಕ ಕೈಗಾರಿಕೆಗಳ ಸಂಘ ಹೊಂದಿದ್ದು ಇದಕ್ಕೆ ಸರ್ಕಾರ ಮತ್ತು ಉದ್ದಿಮೆದಾರರ ಸಹಕಾರ ಅಗತ್ಯ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು.

ಸೋಮವಾರ (ಅ.13) ರಂದು ನಗರದ ಓಷಿಯನ್ ಪಾರ್ಕ್‌ನಲ್ಲಿ ಕೈಗಾರಿಕೆಗಳ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಝಡ್.ಇ.ಡಿ, ಲೀನ್ ಯೋಜನೆ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಭಾರತ ಅತಿ ಹೆಚ್ಚು ಮಾನವ ಸಂಪನ್ಮೂಲ ಹೊಂದಿದ ದೇಶ ಮತ್ತು ಆರ್ಥಿಕತೆಯಲ್ಲಿಯು ಹೆಚ್ಚು ಬಲಿಷ್ಠವಾವಾಗಿದೆ. ನಮ್ಮಲ್ಲಿ ಬ್ಯಾಂಕಿಂಗ್, ಕೃಷಿ, ಸೇವೆ ಸೇರಿದಂತೆ ಯಾವುದೇ ಕ್ಷೇತ್ರದಲ್ಲೂ ಕೂಡ ಮಾನವ ಸಂಪನ್ಮೂಲ ಬಹಳ ಕಡಿಮೆ ಇದೆ.



ಜನಸಂಖ್ಯೆಯ ಮಟ್ಟ ಅತಿ ಹೆಚ್ಚಾಗಿದ್ದರೂ ಕೂಡ ಕಾರ್ಮಿಕರ ಕೊರತೆ ಬಹಳ ಇದೆ, ಏಕೆ ಎಂಬುವುದು ತಮಗೆ ಗೊತ್ತಿದೆ. ಬಹುದೊಡ್ಡ ನಗರಗಳಾದ ಬೆಂಗಳೂರು, ಕೊಲ್ಕತ್ತಾ, ದೆಹಲಿ, ಚನ್ನೈ ನಲ್ಲಿ ಜನಸಂಖ್ಯೆ ಮಟ್ಟ ಹೆಚ್ಚಾಗುತ್ತಾ ಇದೆ.

ಇದರಿಂದ ಜನಸಾಂದ್ರತೆ ಹೆಚ್ಚಳವಾಗಿ ಮೂಲಭೂತ ಸೌಕರ್ಯಗಳ ಕೊರತೆಯಿಂದ ಕೊಳಚೆ ಪ್ರದೇಶಗಳು ಜಾಸ್ತಿಯಾಗಿರುತ್ತದೆ. ಇದನ್ನು ತಪ್ಪಿಸಲೂ 2 ಮತ್ತು 3ನೇ ಹಂತದ ನಗರಗಳನ್ನು ಬೆಳೆಸುವ ಅಗತ್ಯವಿದೆ ಎಂದರು.

ದಾವಣಗೆರೆ ಜಿಲ್ಲೆಯಲ್ಲಿ ಹೆಚ್ಚಾಗಿ ಅಡಿಕೆ, ತೆಂಗು ಜೊತೆಗೆ, ಭತ್ತ, ಮೆಕ್ಕೆಜೋಳ ಬೆಳೆಯುತ್ತಿದ್ದು ಇಲ್ಲಿಯೂ ಕೂಡ ಕಾರ್ಮಿಕ ಕೊರತೆಯನ್ನು ಕಾಣಲಾಗುತ್ತಿದೆ. ಕಾರ್ಮಿಕರ ಕೊರತೆ ನೀಗಿಸಲು ನಮ್ಮಲ್ಲಿರುವ ತಾಂತ್ರಿಕತೆಯನ್ನು ಇನ್ನೂ ಬಹಳಷ್ಟು ಮುಂದುವರೆಯಬೇಕಾಗಿದೆ. ಕಾರ್ಮಿಕರ ಮಕ್ಕಳಿಗೆ ಉನ್ನತ ಶಿಕ್ಷಣ ಸಿಗಬೇಕು,

ಕೃಷಿಯಲ್ಲಿ ಅತಿ ವೇಗವಾಗಿ ಕೆಲಸ ಮಾಡಲು ತಾಂತ್ರಿಕತೆಯನ್ನು ಅಳವಡಿಕೆ ಹೆಚ್ಚಬೇಕಾಗಿದೆ. ಬೇರೆ ದೇಶಗಳಲ್ಲಿ ಕೃಷಿ ತಾಂತ್ರಿಕತೆ ತುಂಬಾ ಮುಂದುವರೆದಿರುವುದರಿಂದ ಆ ದೇಶಗಳು ಬಹಳ ವೇಗವಾಗಿ ಬೆಳೆಯುತ್ತಿದೆ. ಹಳೇಯ ಕೈಗಾರಿಕೆಗಳಲ್ಲಿ ಇನ್ನೂ ಹಳೇಯ ಸಾಮಾಗ್ರಿಗಳನ್ನು ಉಪಯೋಗಿಸುತ್ತಿದ್ದು, ಈಗಲೂ ಕೂಡ ಬದಲಾವಣೆಯಾಗಿರುವುದಿಲ್ಲ. ಜಿಲ್ಲಾ ಸಣ್ಣ ಕೈಗಾರಿಕೋದ್ಯಮಗಳ ಸಂಘದ ಅಧ್ಯಕ್ಷರಾದ

ಶಂಭುಲಿಂಗಪ್ಪ ಬಸವನಾಳ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಗಣೇಶ್.ಆರ್, ಉಪಾಧ್ಯಕ್ಷರಾದ ನಿಂಗಣ್ಣ ಎಸ್ ಬಿರಾದರ, ಗ್ರಾಮೀಣ ಜಂಟಿ ಕಾರ್ಯದರ್ಶಿ ದಿನೇಶ್ ಕುಮಾರ್.ವಿ, ಕಾಸಿಯಾ ಪ್ಯಾನಾಲ್ ಅಧ್ಯಕ್ಷರಾದ ಶ್ರೀನಿವಾಸ.ಡಿ.ಸಿ ಉಪಸ್ಥಿತರಿದ್ದರು.

# ಮೋಟಾರು ಸಾರಿಗೆ ಕಾರ್ಮಿಕರ ಸಮಸ್ಯೆಗಳ ಈಡೇರಿಕೆಗೆ ಪ್ರತಿಭಟನೆ

**ದಾವಣಗೆರೆ:** ಮೋಟಾರು ಸಾರಿಗೆ ಸಂಬಂಧಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸುವಂತೆ, ಕಾರ್ಮಿಕರ ಸಮಸ್ಯೆ ಪರಿಹರಿಸುವಂತೆ ಒತ್ತಾಯಿಸಿ ಕರ್ನಾಟಕ ಶ್ರಮಿಕ ಶಕ್ತಿ ಜಿಲ್ಲಾ ಘಟಕದಿಂದ ನಗರದಲ್ಲಿ ಪ್ರತಿಭಟಿಸಲಾಯಿತು.

ನಗರದ ಕಾರ್ಮಿಕ ಇಲಾಖೆ ಕಚೇರಿ ಎದುರು ಸಂಘಟನೆ ನೇತೃತ್ವದಲ್ಲಿ ಸಾಂಕೇತಿಕವಾಗಿ ಪ್ರತಿಭಟನೆ ನಡೆಸಿದ ಸಾರಿಗೆ ಸಂಬಂಧಿಸಿದ ಕಾರ್ಮಿಕರು ನಂತರ ಕಾರ್ಮಿಕ ಇಲಾಖೆ ಮುಖಾಂತರ ಕಾರ್ಮಿಕ ಸಚಿವ ಸಂತೋಷ ಎಸ್.ಲಾಡ್‌ಗೆ ಮನವಿ ಅರ್ಪಿಸಿದರು.

ಇದೇ ವೇಳೆ ಮಾತನಾಡಿದ ಸಂಘಟನೆ ಮುಖಂಡ ಆದಿಲ್ ಖಾನ್, ಕರ್ನಾಟಕ ಮೋಟಾರು ಸಾರಿಗೆ ಸಂಬಂಧಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆ ಜಾರಿಗೆ ತಂದ ಕಾರ್ಮಿಕ ಸಚಿವರಿಗೆ ಶ್ರಮಿಕ ವರ್ಗದ ಪರವಾಗಿ ಅಭಿನಂದಿಸುತ್ತೇವೆ. ಈ ಯೋಜನೆಗಳನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಜಾರಿಗೊಳಿಸಲು ಸಚಿವರು ಕ್ರಮ ಕೈಗೊಳ್ಳಬೇಕು ಎಂದರು.

ಯೋಜನೆಗಳಲ್ಲಿ ಹಲವಾರು ಸಮಸ್ಯೆಗಳಿದ್ದು, 2 ತಿಂಗಳಿಂದ ಹೊಸದಾಗಿ ನೋಂದಣಿ ಮಾಡಿಸಲು ವೆಬ್‌ಸೈಟ್ ಅಪ್‌ಡೇಟ್ ಅಂತಾ ಬರುತ್ತಿದ್ದು, ವೆಬ್ ಸೈಟ್ ಸಹ ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಮಕ್ಕಳ ಶೈಕ್ಷಣಿಕ ಸಹಾಯಧನವನ್ನು ಮಂಡಳಿಯ ವೆಬ್‌ಸೈಟ್ ನಲ್ಲಿ ಅರ್ಜಿ ಹಾಕುವಂತೆ ಮಾರ್ಪಾಟು ಮಾಡಬೇಕು. ಮೋಟಾರು ಸಾರಿಗೆ ಸಂಬಂಧಿತ ಕಾರ್ಮಿಕರ ಮಕ್ಕಳಿಗೆ 1ನೇ ತರಗತಿಯಿಂದ ಶೈಕ್ಷಣಿಕ ಸಹಾಯಧನ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.ಮೋಟಾರು ಸಾರಿಗೆ ಸಂಬಂಧಿತ ಕಾರ್ಮಿಕರಿಗೆ ಅಪಘಾತ ಪ್ರಕರಣಗಳಲ್ಲಿ ಮಾತ್ರ ಸಹಾಯಧನ ಇದೆ. ಇತರೆ ಅನಾರೋಗ್ಯ ಮತ್ತು ಶಸ್ತ್ರಚಿಕಿತ್ಸೆ ಅಂತಾ ಮಾಡಿ, ಅಂತಹ ಪರಿಸ್ಥಿತಿಯಲ್ಲೂ ವೈದ್ಯಕೀಯ ವೆಚ್ಚ ಸಹಾಯ ಧನ ನೀಡಬೇಕು. ಈಗಿರುವ ಸಹಜ ಮರಣದ ಸಹಾಯಧನ 1 ಲಕ್ಷ ರು.ಗೆ ಹೆಚ್ಚಿಸಬೇಕು. ಅಲ್ಲದೇ, 60 ವರ್ಷ ತುಂಬಿದ ಮೋಟಾರು ಸಾರಿಗೆ ಸಂಬಂಧಿತ ಕಾರ್ಮಿಕರಿಗೆ ಮಾಸಿಕ 2 ಸಾವಿರ ರು. ಪಿಂಚಣಿ ನೀಡಬೇಕು ಎಂದು ಅವರು ಒತ್ತಾಯಿಸಿದರು.ಸಂಘದ ಅಧ್ಯಕ್ಷ ಆದಿಲ್ ಖಾನ್, ಖಜಾಂಚಿ ಪವಿತ್ರಾ, ಸೈಯದ್ ಅಷ್ಫಾಕ್, ರವೀಂದ್ರ, ಚಂದ್ರಶೇಖರ, ಜಾಫರ್ ಷರೀಫ್, ಶಿಡ್ಲಪ್ಪ, ಅಫ್ರೋಜ್, ಬಾಷಾ, ಸಮೀರ್, ರೋಷನ್, ಫಾರೂಕ್, ಹನುಮಂತ, ನಾಗರಾಜ, ಮಹಾಂತೇಶ ಇತರರು ಇದ್ದರು.

# ಕಾಡಸಿದ್ದೇಶ್ವರ ಶ್ರೀಗಳ ಹೇಳಿಕೆ ವಿರೋಧಿಸಿ ಬಸವ ಪರ ಸಂಘಟನೆಗಳ ಪ್ರತಿಭಟನೆ

**ದಾವಣಗೆರೆ:** ಲಿಂಗಾಯತ ಮಠಾಧೀಶರ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿರುವ ಮಹಾರಾಷ್ಟ್ರದ ಕೊಲ್ಲಾಪುರದ ಕನ್ನೇರಿ ಮಠದ ಜಗದ್ಗುರು ಶ್ರೀಅದೃಶ ಕಾಡಸಿದ್ದೇಶ್ವರ ಸ್ವಾಮಿಗಳನ್ನು ಕೂಡಲೇ ಗಡಿಪಾರು ಮಾಡುವಂತೆ ಒತ್ತಾಯಿಸಿ ನಗರದ ಜಯದೇವ ವೃತ್ತದಲ್ಲಿ ಬಸವಪರ ಸಂಘಟನೆಗಳ ಒಕ್ಕೂಟದ ಮುಖಂಡರು ಪ್ರತಿಭಟನೆ ನಡೆಸಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಮೈಸೂರು, ಶರಣ ಸಾಹಿತ್ಯ ಪರಿಷತ್ತು, ತಾಲ್ಲೂಕು ಘಟಕ ದಾವಣಗೆರೆ ವತಿಯಿಂದ ನಗರದ ಜಯದೇವ ವೃತ್ತದಲ್ಲಿ ಪ್ರತಿಭಟಿಸಿ ನಂತರ ಉಪ ವಿಭಾಗಾಧಿಕಾರಿಗಳಿಗೆ ತೆರಳಿ ಮನವಿ ಸಲ್ಲಿಸಿದರು.

ಇದಕ್ಕೂ ಮುನ್ನ ನಡೆಸಿದ ಬಹಿರಂಗ ಸಭೆಯಲ್ಲಿ ಮಾತನಾಡಿದ ಪ್ರತಿಭಟನಾಕಾರರು, ಮಹಾರಾಷ್ಟ್ರದ ಕೊಲ್ಲಾಪುರದ ಕನ್ನೇರಿ ಮಠದ ಶ್ರೀಗಳಾದ ಅದೃಶ ಕಾಡಸಿದ್ದೇಶ್ವರ ಸ್ವಾಮಿಗಳು ಇತ್ತೀಚಿಗೆ ಕರ್ನಾಟಕದಲ್ಲಿ ನಡೆದ ಬಸವ ಸಂಸ್ಕೃತಿ ಅಭಿಯಾನದ ಕುರಿತು ಹಾಗೂ ಲಿಂಗಾಯತ ಮಠಾಧೀಶರ ಕುರಿತು ಬಹಳ ಹಗುರವಾಗಿ ಹಾಗೂ ಅವಮಾನಕರವಾಗಿ ಮಾತನಾಡಿದ್ದಾರೆ. ಇದನ್ನು ಬಸವ ಪರ ಸಂಘಟನೆಗಳು ಖಂಡಿಸುತ್ತವೆ ಎಂದು ಹೇಳಿದರು.

ರಾಜ್ಯದಲ್ಲಿ ಲಕ್ಷಾಂತರ ಬಸವಣ್ಣವರ ಅನುಯಾಯಿಗಳು ಲಿಂಗಾಯತ ಮಠಾಧೀಶರನ್ನು ಗುರುಗಳೆಂದು, ಬಸವಣ್ಣನವರನ್ನು ಲಿಂಗಾಯತ ಧರ್ಮಗುರುವೆಂದು ಆರಾಧಿಸುತ್ತಿದ್ದಾರೆ. ಆದರೆ ಕನ್ನೇರಿ ಮಠದ ಸ್ವಾಮಿಗಳು ಬಸವ ಸಂಸ್ಕೃತಿ ಅಭಿಯಾನದಲ್ಲಿ ಭಾಗವಹಿಸಿದ ಮಠಾಧೀಶರನ್ನು ಕಲಾವಿದರೆಂದು ಬಸವ ಸಂಸ್ಕೃತಿ ಅಭಿಯಾನವನ್ನು ನಾಟಕ ಕಂಪನಿ ಎಂದು ಟೀಕಿಸಿ ಅವಮಾನಿಸಿದ್ದಾರೆ. ಶ್ರೀಗಳು ತಮ್ಮ ಹೇಳಿಕೆ ಕುರಿತು ತಕ್ಷಣೆ ಬಸವ ಅನುಯಾಯಿಗಳ ಕ್ಷಮೆ ಯಾಚಿಸಬೇಕು. ಇಲ್ಲವಾದರೆ ಅವರ ನಿವಾಸದ ಬಳಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಪ್ರತಿಭಟನೆಯಲ್ಲಿ ಬಸವ ಪರ ಸಂಘಟನೆಗಳ ಪದಾಧಿಕಾರಿಗಳು ಇದ್ದರು.

# ವೈದ್ಯರ ಪ್ರೀತಿಯ ಮಾತಿಗೆ ರೋಗಿಯ ಅರ್ಧ ಕಾಯಿಲೆ ಗುಣಮುಖ

**ಚಿಕ್ಕಮಗಳೂರು:** ವೈದ್ಯರ ಪ್ರೀತಿಯ ಮಾತಿಗೆರೋಗಿಯಅರ್ಧ ಕಾಯಿಲೆ ಗುಣಮುಖವಾಗವ ಶಕ್ತಿಯಿದೆ. ಈ ನಿಟ್ಟಿನಲ್ಲಿ ನಮ್ಮಕ್ಲಿನಿಕ್ ನಲ್ಲಿ ವೈದ್ಯ ಸಿಬ್ಬಂದಿಯಿಮದ ಸೇವೆ ದೊರೆಯುವಂತಾಗಬೇಕುಎಂದು ಶಾಸಕ ಎಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಉಪ್ಪಳ್ಳಿ ಬಡಾವಣೆಯಲ್ಲಿ ಮೂರನೇ ನಮ್ಮಕ್ಲಿನಿಕ್‌ನ್ನು ಸೋಮವಾರ ಉದ್ಘಾಟಿಸಿ ಅವರು ಮಾತನಾಡಿದರು.ನಮ್ಮ ಸರಕಾರ ಬಂದ ನಂತರಜನರ ಬದುಕು ಮತ್ತು ಕಷ್ಟ ನಿವಾರಿಸಲು ಮೊದಲ ಆದ್ಯತೆ ನೀಡಿ ನಂತರಅಭಿವೃದ್ಧಿಗೆಒತ್ತು ನೀಡುತ್ತಿದೆ. ವೈದ್ಯೋ ನಾರಾಯಣ ಹರಿ ಎಂಬ ಮಾತಿನಂತೆ ವೈದ್ಯರುತಮ್ಮಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಯಾರಾದರೂರೋಗಿಚಿಕಿತ್ಸೆ ಬಯಲಿ ಬಂದರೆ ನಗುನಗುತ ಮಾತನಾಡಿಸಿ ಸೂಕ್ತ ಚಿಕಿತ್ಸೆಕೊಡಬೇಕು. ವೈದ್ಯರ ಪ್ರೀತಿಯ ಮಾತಿಗೆರೋಗಿಯ ಕಾಯಿಲೆ ಅರ್ಧಗುಣಮುಖವಾಗುವ ಶಕ್ತಿಯಿದೆ. ಜನರ ಆಶೋತ್ತರಗಳಿಗೆ ತಕ್ಕಂತೆ ನಡೆದುಕೊಂಡುಇಲ್ಲಿಂದ ವರ್ಗಾವಣೆಯಾಗಿ ಹೋದರೂಜನ ಮತ್ತೆ ಮತ್ತೆ ವೈದ್ಯರನ್ನು ನೆನಪಿಸಿಕೊಳ್ಳುವಂತೆ ಕಾರ್ಯನಿರ್ವಹಿಸಿ ಎಂದು ವೈದ್ಯರಿಗೆ ಸಲಹೆ ನೀಡಿದರು.

ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಕಾರಿಡಾ.ಅಶ್ವತ್‌ಬಾಬು ಮಾತನಾಡಿ, ಜಿಲ್ಲೆಯಲ್ಲಿಒಟ್ಟು 12 ನಮ್ಮ ಕ್ಲಿನಿಕ್‌ಗಳಿವೆ. ಅದರಲ್ಲಿ 4 ನಮ್ಮ ಚಿಕ್ಕಮಗಳೂರಿ ನಗರದಲ್ಲೇ




ಮಂಜೂರಾಗಿವೆ. ಒಂದು ನರಿಗುಡ್ಡನಹಳ್ಳಿ ವೃತ್ತ, ಕೆಂಪನಹಳ್ಳಿ, ಮೂರನೆಯದು ಉಪ್ಪಳ್ಳಿಯಲ್ಲಿಪ ್ರಾರಂಭವಾಗುತ್ತಿದೆ. ಇನ್ನೊಂದು ಕೆಎಸ್ಸಾರ್ಟಿಸಿ ಬಸ್ ನಿಲ್ದಾಣದ ಸಮೀಪ ಮಾಡಬೇಕು ಎಂಬ ಉದ್ದೇಶಇಟ್ಟುಕೊಂಡಿದ್ದೇವೆ. ಈ ಬಗ್ಗೆ ಶಾಸಕರೊಂದಿಗೆ ಚರ್ಚಿಸಿ 4 ನೇ ನಮ್ಮಕ್ಲಿನಿಕ್ ನ್ನುತೆರೆಯಲಿದ್ದೇವೆಎಂದು ಹೇಳಿದರು.

ನಗರದಲ್ಲಿ 2 ನಗರಆರೋಗ್ಯಕೇಂದ್ರ ಮತ್ತು 4 ನಮ್ಮ ಕ್ಲಿನಿಕ್‌ಗಳಿವೆ.ಸಾರ್ವಜನಿಕರಿಗೆ ತಮ್ಮ ಮನೆಯ ಬಳಿಯಲ್ಲೇ ಚಿಕಿತ್ಸೆ ಸಿಗಬೇಕು. ಶೀತ ,ಕೆಮ್ಮು, ಜ್ವರ ಮತ್ತಿತರೆ ಸಣ್ಣ ಪುಟ್ಟ ಸಮಸ್ಯೆಗಳಿಗೆ ದೊಡ್ಡಾಸ್ಪತ್ರೆಗೆ ಹೋಗುವುದನ್ನುತಪ್ಪಿಸಲು ನಮ್ಮ ಸರಕಾರ ಈ ಯೋಜನೆ ರೂಪಿಸಿದೆ. ಬೆಳಗ್ಗೆ 9.30ರಿಂದ 4.30 ವರೆಗೆ ನಮ್ಮ ಕ್ಲಿನಿಕ್‌ಗಳು ಕಾರ್ಯನಿರ್ವಹಿಸುತ್ತವೆ. ವೈದ್ಯ ಸಿಬ್ಬಂದಿ ಇರುತ್ತಾರೆ. ಪ್ರತಿದಿನವೂ ಕ್ಲಿನಿಕ್‌ತೆರೆದಿರುತ್ತದೆ. ಇಲ್ಲಿಎಲ್ಲತರಹದ ಬೇಸಿಕ್ ಪ್ರಯೋಗಗಳು ಉಚಿತವಾಗಿದೊರೆಯುತ್ತದೆ. ಬಿಪಿ, ಶುಗರ್, ರಕ್ತ ಪರೀಕ್ಷೆಉಚಿತವಾಗಿ ಮಾಡಲಾಗುವುದು. ಅಗತ್ಯ ವಿದ್ದಲ್ಲಿಉನ್ನತ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡಲಾಗುವುದು. ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ನಗರಸಭೆಅಧ್ಯಕ್ಷರಾದ ಶೀಲಾದಿನೇಶ್ ಮಾತನಾಡಿ, ನಮ್ಮಕ್ಲಿನಿಕ್‌ಉದ್ಘಾಟನೆಂ ಮಾಗಿರುವುದು ಸಂತೋಷದ ವಿಚಾರ, ಈ ಭಾಗದಲ್ಲಿಅತಿ ಹೆಚ್ಚಿನ ಸಂಖ್ಯೆಯಲ್ಲಿ ಬಡವರೇಇದ್ದುಆಸ್ಪತ್ರೆಯ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಸಿಡಿಎ ಅಧ್ಯಕ್ಷ ನಯಾಜ್‌ಅಹಮದ್, ಸ್ಥಳೀಯ ನಗರಸಭೆ ಸದಸ್ಯರು, ವೈದ್ಯ, ಸಿಬ್ಬಂದಿ ಉಪಸ್ಥಿತರಿದ್ದರು.

# ಪ್ರೆಸ್‌ಕ್ಲಬ್ ನೂತನ ಅಧ್ಯಕ್ಷರಾಗಿ ಪತ್ರಕರ್ತ ಸಿ.ಡಿ ಚಂದ್ರೇಗೌಡ ಆಯ್ಕೆ



**ಚಿಕ್ಕಮಗಳೂರು:** ಚಿಕ್ಕಮಗಳೂರು ಪ್ರೆಸ್‌ಕ್ಲಬ್‌ನ ನೂತನಅಧ್ಯಕ್ಷರಾಗಿ ಹಿರಿಯ ಪತ್ರಕರ್ತ ಹಾಗೂ ಮಲೆನಾಡು ಐಸಿರಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯಜಿಲ್ಲಾ ಪ್ರಧಾನ ವರಿದಿಗಾರ ಸಿ.ಡಿ ಚಂದ್ರೇಗೌಡಆಯ್ಕೆಯಾದರು.
ನಗರದಜಿಲ್ಲಾಆಟದ ಮೈದಾನದಲ್ಲಿರುವ ಪ್ರೆಸ್‌ಕ್ಲಬ್‌ನಲ್ಲಿ ಅ.12 ರಂದು ಭಾನುವಾರ ನಡೆದಚುನಾವಣೆಯಲ್ಲಿ ನಿರ್ದೇಶಕರ ಸ್ಥಾನಕ್ಕೆ 25 ಸದಸ್ಯರು ಸ್ಪರ್ಧಿಸಿದ್ದು, ಇದರಲ್ಲಿ 13 ಜನರು ನಿರ್ದೇಶಕರಾಗಿಆಯ್ಕೆಯಾದರು.
ಬಳಿಕ ನಡೆದಅಧ್ಯಕ್ಷ ಸ್ಥಾನದಚುನಾವಣೆಯಗೆ ಸಿ.ಡಿ ಚಂದ್ರೇಗೌಡ, ಎಂ.ಎಸ್‌ಉಮೇಶ್‌ಕುಮಾರ್, ಮಹಾರುದ್ರಕಣದಲ್ಲಿದ್ದು, ಅಂತಿಮವಾಗಿ 8 ಮತಗಳನ್ನು ಪಡೆಯುವ ಮೂಲಕ ಸಿ.ಡಿ ಚಂ ದ್ರೇಗೌಡಅವರುಆಯ್ಕೆಯಾದರು.
ಛಾಯಾಗ್ರಾಹಕಎ.ಎನ್ ಮೂರ್ತಿ, ಎನ್.ಪ್ರವೀಣ್ (ಉಪಾಧ್ಯಕ್ಷರಾಗಿ), ಎನ್.ಕೆ ಗೋಪಿ (ಪ್ರಧಾನ ಕಾರ್ಯದರ್ಶಿಯಾಗಿ), ಪುನೀತ್ (ಖಜಾಂಚಿ), ಕೆ.ಎಸ್‌ಕಿಶೋರ್‌ಕುಮಾರ್, ಪವನ್‌ಕುಮಾರ್ (ಸಹಕಾರ್ಯದರ್ಶಿಯಾಗಿ) , ನಿರ್ದೇಶಕರುಗಳಾಗಿ ಕೆ.ಹೆಚ್‌ರುದ್ರಯ್ಯ, ಸಿ. ಸುರೇಶ್, ಹೆಚ್.ಡಿ. ಶ್ರೀಕಾಂತ್, ಕೆ.ಜಯಕುಮಾರ್, ಎಂ.ಎಸ್‌ಉಮೇಶ್‌ಕುಮಾರ್, ಮಹಾರುದ್ರಆಯ್ಕೆಯಾದರು.
ಚುನಾವಣಾಧಿಕಾರಿಯಾಗಿ ವಕೀಲ ನೋಟರಿ ವಿ.ಕೆ ರಘು, ಸಹಾಯಕಚುನಾವಣಾಧಿಕಾರಿಯಾಗಿ ನಿವೃತ್ತ ಪೊಲೀಸ್‌ಅಧಿಕಾರಿಜಯರಾಂಚುನಾವಣಾ ಪ್ರಕ್ರಿಯೆಗಳನ್ನು ನಿಯಮ ಬದ್ಧವಾಗಿ ಬೈಲಾ ಪ್ರಕಾರ ನಡೆಸಿಕೊಟ್ಟರು.
ಈ ಸಂದರ್ಭದಲ್ಲಿ ಪ್ರೆಸ್‌ಕ್ಲಬ್‌ನಅಧ್ಯಕ್ಷ ಪಿ.ರಾಜೇಶ್, ಪ್ರಧಾನ ಕಾರ್ಯದರ್ಶಿ ತಾರಾನಾಥ್.ಆರ್ ಉಪಸ್ಥಿತರಿದ್ದರು.

# ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ** : ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು http://shp.karnataka.gov.in ನಲ್ಲಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ನವಂಬರ್ 7 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿ ದೂ.ಸಂ:08192–250022 ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿ ದೂ.ಸಂ: 08192–250066 ಸಂಪರ್ಕಿಸಬಹುದು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಪೂರ್ವಭಾವಿ ಸಭೆ

**ದಾವಣಗೆರೆ** : ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡ 50 ವರ್ಷಗಳಾದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 14 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಪರಿಸರ ಅಧಿಕಾರಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ದಾವಣಗೆರೆ** : ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು http://shp.karnataka.gov.in ನಲ್ಲಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ನವಂಬರ್ 7 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿ ದೂ.ಸಂ:08192–250022 ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳ ಕಚೇರಿ ದೂ.ಸಂ: 08192–250066 ಸಂಪರ್ಕಿಸಬಹುದು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಆಕಾಶವಾಣಿ ಭದ್ರಾವತಿಯಿಂದ ಕಾರ್ಡಿನಲ್ಲಿ ಕಥೆ ; ವಿನೂತನ ಕಾರ್ಯಕ್ರಮ

**ಶಿವಮೊಗ್ಗ:** ನವೆಂಬರ್ 01 ಕನ್ನಡ ರಾಜ್ಯೋತ್ಸವದ ದಿನದ ಅಂಗವಾಗಿ ಆಕಾಶವಾಣಿ ಭದ್ರಾವತಿ "ಕಾರ್ಡಿನಲ್ಲಿ ಕಥೆ" ಎಂಬ ವಿನೂತನ ಕಾರ್ಯಕ್ರಮವನ್ನು ನವೆಂಬರ್ ತಿಂಗಳಲ್ಲಿ ಹಮ್ಮಿಕೊಂಡಿದೆ. ಆಕಾಶವಾಣಿ ಕೇಳುಗರು ಅ.31ರೊಳಗಾಗಿ ಅಂಚೆಕಾರ್ಡಿನಲ್ಲಿ ಮುದ್ದಾದ ಅಕ್ಷರಗಳೊಂದಿಗೆ ಇತರರು ಓದುವಂತೆ ಕಳುಹಿಸಲು ಕಾರ್ಯಕ್ರಮದ ಮುಖ್ಯಸ್ಥ ಎಸ್.ಆರ್. ಭಟ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಆಯ್ದ ಕಥೆಗಳನ್ನು ನವೆಂಬರ್ ತಿಂಗಳಲ್ಲಿ ಪ್ರಸಾರಮಾಡಲಾಗುವುದು.ಆಸಕ್ತರು ಕಾರ್ಡಿನಲ್ಲಿ ಕಥೆ ಬರೆದು ನಿಲಯದ ನಿರ್ದೇಶಕರು, ಆಕಾಶವಾಣಿ, ಜೆ.ಪಿ.ಎಸ್. ಕಾಲೋನಿ, ಭದ್ರಾವತಿ 577302 ವಿಳಾಸಕ್ಕೆ ಕಳುಹಿಸುವುದು.

# ಮನರೇಗಾ ಜಾಬ್ ಕಾರ್ಡ್‌ಗೆ ಇ–ಕೆವೈಸಿ ಮಾಡಲು ಶ್ರಮ ವಹಿಸಿ

**ರೋಣ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಅಡಿಯಲ್ಲಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್‌ಗಳ ಇ–ಕೆವೈಸಿ ವ್ಯಾಲಿಡೇಶನ್ ಅನ್ನು ತುರ್ತಾಗಿ ಪೂರ್ಣಗೊಳಿಸಲು ರೋಣ ಮತ್ತು ಗಜೇಂದ್ರಗಡ ತಾಲೂಕ ಪಂಚಾಯಿತಿಗಳ ಸಿಬ್ಬಂದಿಗಳಿಗೆ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ಬಿ. ಕಂದಕೂರ ಸೂಚಿಸಿದ್ದಾರೆ. ಈ ಕಾರ್ಯಕ್ಕೆ ಎಲ್ಲಾ ನರೇಗಾ ಕೂಲಿಕಾರರು ಸಕ್ರಿಯವಾಗಿ ಭಾಗವಹಿಸಿ, ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಅವರು ಕರೆ ನೀಡಿದರು.

ರೋಣ ತಾಲೂಕ ಪಂಚಾಯತ ಸಭಾಂಗಣದಲ್ಲಿ ರೋಣ ಮತ್ತು ಗಜೇಂದ್ರಗಡ ತಾಲೂಕುಗಳ ಮನರೇಗಾ ಸಿಬ್ಬಂದಿಗಳಾದ ಜಿಕೆಎಂ, ಬಿಎಫ್‌ಟಿ, ಇಂಜಿನಿಯರ್‌ಗಳು ಮತ್ತು ಇತರ ಸಿಬ್ಬಂದಿಗಳ ಸಭೆಯನ್ನುದ್ದೇಶಿಸಿ ಮಾತನಾಡಿದ ಚಂದ್ರಶೇಖರ್ ಬಿ ಕಂದಕೂರ "ಮನರೇಗಾ ಯೋಜನೆಯ ಸಕ್ರಿಯ ಕೂಲಿಕಾರರ ಜಾಬ್ ಕಾರ್ಡ್‌ಗಳನ್ನು ಇ–ಕೆವೈಸಿ ಮೂಲಕ ಪರಿಶೀಲಿಸುವ ಕಾರ್ಯವು ತುರ್ತಾಗಿ ನಡೆಯುತ್ತಿದೆ. ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ



ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ವ್ಯಾಲಿಡೇಶನ್ ಅನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು," ಎಂದು ಒತ್ತಿ ಹೇಳಿದರು.

ಮನರೇಗಾ ಯೋಜನೆಯಡಿ ನೋಂದಾಯಿತ ಕೂಲಿಕಾರರ ಮಾಹಿತಿಯನ್ನು ಎನ್‌ಎಂಎಂಎಸ್ (ನರೇಗಾ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ತಂತ್ರಾಂಶದಲ್ಲಿ ಇ–ಕೆವೈಸಿ ಮೂಲಕ ಅಪ್‌ಡೇಟ್ ಮಾಡಲಾಗುತ್ತಿದೆ. ಈಗಾಗಲೇ ಗ್ರಾಮ ಮಟ್ಟದಲ್ಲಿ ಜನರಿಗೆ ಈ ಕುರಿತು ಜಾಗೃತಿ ಮೂಡಿಸಲಾಗಿದ್ದು, ರೋಣ ಮತ್ತು ಗಜೇಂದ್ರಗಡ ತಾಲೂಕುಗಳ ನರೇಗಾ ಶಾಖೆಯ ಐಇಸಿ ವಿಭಾಗವು ತಯಾರಿಸಿದ ಧ್ವನಿ ಮುದ್ರಿಕೆಯನ್ನು ಕಸ ಸಂಗ್ರಹ ವಾಹನಗಳ ಮೂಲಕ ಪ್ರಸಾರ ಮಾಡಲು ಸೂಚಿಸಲಾಗಿದೆ.

ಇನ್ನು ಗ್ರಾಮ ಪಂಚಾಯಿತಿ ಮಟ್ಟದ ಸಿಬ್ಬಂದಿಗಳಿಗೆ ಇ–ಕೆವೈಸಿ ಅಪ್‌ಡೇಟ್ ಕಾರ್ಯಕ್ಕೆ ತರಬೇತಿ ನೀಡಲಾಗಿದ್ದು, ಈ ಮೂಲಕ ಪ್ರಗತಿ ಸಾಧಿಸಲು ಸೂಚನೆ ನೀಡಲಾಗಿದೆ. ಆದರೆ, ಕೆಲವು ಗ್ರಾಮಗಳಲ್ಲಿ ಕೂಲಿಕಾರರು ವೈಯಕ್ತಿಕ ಕೆಲಸಕ್ಕಾಗಿ ಮನೆಯಿಂದ ಹೊರಗಡೆ ಇರುವುದರಿಂದ, ಮನೆ–ಮನೆ ಭೇಟಿಯ ಸಂದರ್ಭದಲ್ಲಿ ಮೇಟ್‌ಗಳು ಅಥವಾ ನರೇಗಾ ಸಿಬ್ಬಂದಿಗೆ ಅವರು ಲಭ್ಯವಾಗದಿರುವುದು ಇ–ಕೆವೈಸಿ ಪ್ರಕ್ರಿಯೆಯನ್ನು ನಿಧಾನಗೊಳಿಸಿದೆ. ಇದರಿಂದ ಭವಿಷ್ಯದಲ್ಲಿ ಕೂಲಿಕಾರರಿಗೆ ಕೆಲಸ ನೀಡುವಾಗ ಸಮಸ್ಯೆ ಉಂಟಾಗುವ ಸಾಧ್ಯತೆ ಇದೆ ಎಂದು ಚಂದ್ರಶೇಖರ್ ಎಚ್ಚರಿಕೆ ನೀಡಿದರು.

ಗ್ರಾಮ ಪಂಚಾಯಿತಿಗಳಲ್ಲಿ ಇ–ಕೆವೈಸಿ ಪ್ರಕ್ರಿಯೆಯನ್ನು ಉಚಿತವಾಗಿ ನಡೆಸಲಾಗುತ್ತಿದ್ದು, ಮೇಟ್‌ಗಳ ಮೂಲಕವೂ ಈ ಸೌಲಭ್ಯವನ್ನು ಪಡೆಯಬಹುದು. "ಇ–ಕೆವೈಸಿ ಯೋಜನೆಯು ಮನರೇಗಾ ಕಾರ್ಯಕ್ರಮದ ಪಾರದರ್ಶಕ ಅನುಷ್ಠಾನಕ್ಕೆ ಮಹತ್ವದ ಹೆಜ್ಜೆಯಾಗಿದೆ. ಆದ್ದರಿಂದ, ಎಲ್ಲಾ ಕೂಲಿಕಾರರು ಮತ್ತು ಕಾಯಕ ಬಂಧುಗಳು ಕಡ್ಡಾಯವಾಗಿ ಇ–ಕೆವೈಸಿ ಅಪ್‌ಡೇಟ್ ಮಾಡಿಸಿಕೊಳ್ಳಬೇಕು," ಎಂದು ಚಂದ್ರಶೇಖರ್ ಒತ್ತಾಯಿಸಿದರು.ಹೆಚ್ಚಿನ ಮಾಹಿತಿಗಾಗಿ ಗ್ರಾಮ ಪಂಚಾಯಿತಿಯ ಪಿಡಿಒ, ಕಾರ್ಯದರ್ಶಿ, ಡಿಇಒ, ಬಿಎಫ್‌ಟಿ, ಜಿಕೆಎಂ ಅವರನ್ನು ಸಂಪರ್ಕಿಸಲು ಸಿಬ್ಬಂದಿಗಳಿಗೆ ಸೂಚಿಸಲಾಗಿದೆ. ಈ ಅಭಿಯಾನವನ್ನು ಯಶಸ್ವಿಗೊಳಿಸಲು ಎಲ್ಲರೂ ಸಹಕರಿಸಬೇಕೆಂದು ಸಭೆಯಲ್ಲಿ ಕರೆ ನೀಡಲಾಯಿತು.

## ಇನ್‌ಕ್ಯೂಬೇಶನ್ ಒನ್ ಡೇ ಅವೇರ್‌ನೆಸ್ ಪ್ರೋಗ್ರಾಮ್ಸ್

**ಚಿಕ್ಕಮಗಳೂರು:** ಜಿಲ್ಲಾ ಕೈಗಾರಿಕಾ ಕೇಂದ್ರ, ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಹಾಗೂ ಡಿಎಸಿಜಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಇನ್‌ಕ್ಯೂಬೇಶನ್ ಒನ್ ಡೇ ಅವೇರ್‌ನೆಸ್ ಪ್ರೋಗ್ರಾಮ್ಸ್ ಅಂಡರ್ ಆರ್.ಎ.ಎಂ.ಪಿ. ಕಾರ್ಯಾಗಾರವನ್ನು ಅಕ್ಟೋಬರ್ 15 ರಂದು ಬೆಳಿಗ್ಗೆ 10 ಗಂಟೆಗೆ ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನಲ್ಲಿ ಹಾಗೂ ಅಕ್ಟೋಬರ್ 16 ರಂದು ಬೆಳಿಗ್ಗೆ 10 ಗಂಟೆಗೆ ಡಿಎಸಿಜಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆಯೋಜಿಸಲಾಗಿದೆ. ಜಿಲ್ಲೆಯ ಭಾವಿ ಉದ್ದಿಮೆದಾರರು ಭಾಗವಹಿಸಿ ಈ ಕಾರ್ಯಾಗಾರಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಈ ಮೂಲಕ ಕೋರಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕೈಗಾರಿಕಾ ಕೇಂದ್ರದ ಕಚೇರಿ(08262-295821)ಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ.

## ಅ.18 ನಗರೋತ್ಥಾನ ಕಾಮಗಾರಿಗೆ ಗುದ್ದಲಿಪೂಜೆ

**ಚಿಕ್ಕಮಗಳೂರು:** ನಗರೀತ್ಥಾನ ಹಂತ 4 ರ ಕಾಮಗಾರಿಗಳ ಗುದ್ದಲಿಪೂಜೆ ಹಾಗೂ 15ನೇ ಹಣಕಾಸು, ಸ್ವಚ್ಛ ಭಾರತ ಮಿಷನ್ 2.0 ಮತ್ತು ಉದ್ದಿಮೆ ನಿಧಿಯಡಿ ನಿರ್ಮಿಸಿರುವ ಶೌಚಾಲಯಗಳು ಹಾಗೂ ಪೌರಕಾರ್ಮಿಕರ ವಿಶ್ರಾಂತಿ ಗೃಹಗಳ ಉದ್ಘಾಟನಾ ಕಾರ್ಯಕ್ರಮಗಳು ಅಕ್ಟೋಬರ್ 18 ರಂದು ನಡೆಯಲಿದ್ದು, ಶಾಸಕ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸುವರು.ಅಂದು ಬೆಳಿಗ್ಗೆ 8.45ಕ್ಕೆ ಬೀಕನಹಳ್ಳಿ ಸರ್ಕಲ್‌ನಲ್ಲಿರುವ ಐಡಿಎಸ್‌ಜಿ ಕಾಲೇಜಿನ ಆವರಣದಲ್ಲಿ ನಿರ್ಮಿಸಿರುವ ಸಾರ್ವಜನಿಕ ಶೌಚಾಲಯದ ಉದ್ಘಾಟನೆ ನಡೆಯಲಿದೆ. ಬೆಳಿಗ್ಗೆ 9 ಗಂಟೆಗೆ ಟೌನ್ ಕ್ಯಾಂಟೀನ್ ಸಮೀಪದ ಡಿ.ಸಿ.ಶ್ರೀಕಂಠಪ್ಪ ಸರ್ಕಲ್‌ನಲ್ಲಿ ನಿರ್ಮಿಸಿರುವ ಸಾರ್ವಜನಿಕ ಶೌಚಾಲಯದ ಉದ್ಘಾಟನೆ, ಬೆಳಿಗ್ಗೆ 9.15ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ರಸ್ತೆಯಲ್ಲಿ ನಗರ ಪೊಲೀಸ್ ಠಾಣೆ ಪಕ್ಕದಲ್ಲಿ ಮೇದಾರ ಜನಾಂಗಕ್ಕೆ ಸೇರಿದ ಸಮುದಾಯ ಭವನದ ಜಾಗದಲ್ಲಿ ನಗರೋತ್ಥಾನ ಹಂತ 4 ಕಾಮಗಾರಿಗಳ ಗುದ್ದಲಿಪಜೆ ನಡೆಯಲಿದೆ. ಬೆಳಿಗ್ಗೆ 10 ಗಂಟೆಗೆ ಹನುಮಂತಪ್ಪ ಸರ್ಕಲ್ ಮತ್ತು ಆಜಾದ್ ಪಾರ್ಕ್‌ನಲ್ಲಿ ನಿರ್ಮಿಸಿರುವ ಪೌರಕಾರ್ಮಿಕರ ವಸತಿಗೃಹಗಳ ಉದ್ಘಾಟನಾ ಸಮಾರಂಭ ನಡೆಯಲಿದೆ ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆರಾ ಯುವ ಭಾರತ್‌ನಿಂದ ವಿಕಸಿತ ಭಾರತ್ ಪಾದಯಾತ್ರೆ

**ಚಿಕ್ಕಮಗಳೂರು:** ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯವು ಮೆರಾ ಯುವ ಭಾರತ್ ಮೈ ಭಾರತ್ ಮೂಲಕ ವಿಕಸಿತ ಭಾರತ್ ಪಾದಯಾತ್ರೆ ಎಂಬ ರಾಷ್ಟ್ರವ್ಯಾಪಿ ಉಪಕ್ರಮವನ್ನು ಆರಂಭಿಸಿದೆ. ಈ ಅಭಿಯಾನವು ಯುವಕರಲ್ಲಿ ರಾಷ್ಟ್ರಾಭಿಮಾನ, ಏಕತೆ ಮತ್ತು ನಾಗರಿಕ ಜವಾಬ್ದಾರಿತನವನ್ನು ಬಲಪಡಿಸುವುದನ್ನು ಉದ್ದೇಶಿಸಿದೆ. 2025ರ ಅಕ್ಟೋಬರ್ 6ರಂದು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಅವರು ಮೈ ಭಾರತ್ ಪೋರ್ಟಲ್‌ನಲ್ಲಿ sardar@150 unity march ಅಭಿಯಾನವನ್ನು ಡಿಜಿಟಲ್ ರೂಪದಲ್ಲಿ ಪ್ರಾರಂಭಿಸಿದರು. ಸರ್ದಾರ್ ವಲ್ಲಭ ಭಾಯಿ ಪಟೇಲ್ ಅವರ 150ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ಪ್ರಾರಂಭವಾದ ಈ ಅಭಿಯಾನವು ಅವರ ಏಕತಾ ಸಂದೇಶವನ್ನು ಪುನರುಜ್ಜೀವನಗೊಳಿಸುವುದರ ಜೊತೆಗೆ ಯುವಕರನ್ನು ಏಕ ಭಾರತ್, ಆತ್ಮನಿರ್ಭರ ಭಾರತ್ ಕನಸಿನತ್ತ ಪ್ರೇರೇಪಿಸುತ್ತದೆ.

ಅಭಿಯಾನವು ಎರಡು ಹಂತಗಳಲ್ಲಿ ನಡೆಯಲಿವೆ. ಮೊದಲ ಹಂತದಲ್ಲಿ, ಅಕ್ಟೋಬರ್ 31 ರಿಂದ ನವೆಂಬರ್ 15 ರವರೆಗೆ ದೇಶದ ಎಲ್ಲ ಜಿಲ್ಲೆಗಳಲ್ಲಿ 8 ರಿಂದ 10 ಕಿ.ಮೀ. ಉದ್ದದ ಪಾದಯಾತ್ರೆಗಳು ನಡೆಯಲಿವೆ. ಈ ವೇಳೆ ಶಾಲೆ ಮತ್ತು ಕಾಲೇಜುಗಳಲ್ಲಿ ಪ್ರಬಂಧ, ವಾದ ವಿವಾದ, ನುಕ್ಕಡ ನಾಟಕಗಳು, ನಶಾ ಮುಕ್ತ ಭಾರತ್ ಹಾಗೂ ಗರ್ವ್ ಸೇ ಸ್ವದೇಶಿ ಶಪಥಗಳು, ಯೋಗ ಶಿಬಿರಗಳು ಮತ್ತು ಸ್ವಚ್ಛತಾ ಅಭಿಯಾನಗಳು ಆಯೋಜಿಸಲ್ಪಡುತ್ತವೆ.

ಎರಡನೇ ಹಂತದಲ್ಲಿ, ನವೆಂಬರ್ 26 ರಿಂದ ಡಿಸೆಂಬರ್ 6 ರವರೆಗೆ ಸರ್ದಾರ್ ಪಟೇಲ್ ಅವರ ಜನ್ಮ ಸ್ಥಳ ಕರಮ್ ಸಾದ್‌ನಿಂದ ಸ್ಟ್ಯಾಚ್ಯು ಆಫ್ ಯೂನಿಟಿ (ಕೇವಾಡಿಯಾ)ವರೆಗೆ 152 ಕಿಲೋಮೀಟರ್ ಉದ್ದದ ರಾಷ್ಟ್ರೀಯ ಪಾದಯಾತ್ರೆ ನಡೆಯಲಿದೆ. ಮಾರ್ಗದ 150 ನಿಲ್ದಾಣಗಳಲ್ಲಿ ಪ್ರದರ್ಶನಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸರ್ದಾರ್ ಗಾಥಾ ಅಧಿವೇಶನಗಳು ನಡೆಯಲಿವೆ.ಈ ಐತಿಹಾಸಿಕ ಅಭಿಯಾನದಲ್ಲಿ ಭಾಗವಹಿಸಲು ಮೈ ಭಾರತ್ (<https://mybharat.gov.in/pages/unity_march>.) ಪೋರ್ಟಲ್‌ನಲ್ಲಿ ಯುವಕರು ನೋಂದಣಿ ಮಾಡಬಹುದು. ಹೆಚ್ಚಿನ ಮಾಹಿತಿಗೆ 08262-235750 ಸಂಖ್ಯೆಯನ್ನು ಸಂಪರ್ಕಿಸಬಹುದು.

## ಪೌರಕಾರ್ಮಿಕರ ದಿನಾಚರಣೆ

**ಚಿಚಿಕ್ಕಮಗಳೂರು:** ನಗರಸಭೆ ವತಿಯಿಂದ ಅಕ್ಟೋಬರ್ 18 ರಂದು ಬೆಳಿಗ್ಗೆ 11.30ಕ್ಕೆ ನಗರಸಭಾ ಕಚೇರಿ ಆವರಣದಲ್ಲಿ ಪೌರಕಾರ್ಮಿಕರ ದಿನಾಚರಣೆಯನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದ ಅಂಗವಾಗಿ ಅಕ್ಟೋಬರ್ 15 ರಂದು ಬೆಳಿಗ್ಗೆ 10 ಗಂಟೆಗೆ ಪೌರಕಾರ್ಮಿಕರುಗಳಿಗೆ ನೇತಾಜಿ ಸುಭಾಷ್ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಆಟೋಟ ಸ್ಪರ್ಧೆಯನ್ನು ನಡೆಸಲಾಗುತ್ತಿದೆ. ಅಕ್ಟೋಬರ್ 18 ರಂದು ಬೆಳಿಗ್ಗೆ 10.30 ಗಂಟೆಗೆ ತಾಲ್ಲೂಕು ಕಚೇರಿಯಿಂದ ನಗರಸಭಾ ಕಚೇರಿಯವರೆಗೆ ಮೆರವಣಿಗೆ ನಡೆಯಲಿದೆ.

## ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ಬೆಂಗಳೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೇವಣಸಿದ್ದೇಶ್ವರ ದೇವಸ್ಥಾನಕಟ್ಟಡ ನಿರ್ಮಾಣಕ್ಕೆದೇಣಿಗೆ ನೀಡಲು ಮನವಿ



**ಚಿಕ್ಕಮಗಳೂರು:** ಕಡೂರುಗುರು ರೇವಣಸಿದ್ದೇಶ್ವರ ಸ್ವಾಮಿದೇವಸ್ಥಾನ ನೂತನಕಟ್ಟಡದಕಾಮಗಾರಿಗೆ ಸಮಾಜ ಬಾಂಧವರು ಸೇರಿದಂತೆಇತರರೂದೇಣಿಗೆ ನೀಡುವ ಮೂಲಕ ಕಾಮಗಾರಿ ಪೂರ್ಣಗೊಳಿಸಲು ಸಹಕರಿಸಬೇಕೆಂದು ಮಾಜಿ ವಿಧಾನ ಪರಿಷತ್ ಸದಸ್ಯೆ ಶ್ರೀಮತಿ ಗಾಯಿತ್ರಿ ಶಾಂತೇಗೌಡ ಮನವಿ ಮಾಡಿದರು.

ಅವರುಇಂದು ಈ ಸಂಬಂಧಇಲ್ಲಿನ ಕನಕ ಭವನದಲ್ಲಿಕರೆಯಲಾಗಿದ್ದ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಶಾಸಕ ಕೆ.ಎಸ್‌ಆನಂದ್ ನೇತೃತ್ವದಲ್ಲಿ ಮುಖಂಡರತಂಡ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿಮಾಡಿಅನುದಾನ ನೀಡುವಂತೆ ಪ್ರಯತ್ನಿಸಲು ಸಲಹೆ ನೀಡಿದರು.

ಸಂಸ್ಥಾನಕ್ಕೆ ಸೇರಿದ ಕುಟುಂಬಗಳಲ್ಲದೆ ಇತರೆ ಸಮಾಜದ ಕುಟುಂಬಗಳು ದೇವಸ್ಥಾನಕ್ಕೆದೇಣಿಗೆ ನೀಡುತ್ತಾರೆ, ಇದಕ್ಕೆ ಮುಖಂಡರುಗಳು ಮನವೊಲಿಸುವ ಮೂಲಕ ದೇವಸ್ಥಾನಕಟ್ಟಡ ಪೂರ್ಣಗೊಳಿಸಲು ಸಹಕರಿಸಬೇಕೆಂದು ಸಲಹೆ ಮಾಡಿದರು.

ಗುಡಕಟ್ಟು, ಸಮಾಜ, ಒಕ್ಕಲರು ಸೇರಿದೇಣಿಗೆ ನೀಡಲು ಸಿದ್ದರಿದ್ದಾರೆ, ಅವರ ಬಳಿಗೆ ಹೋಗಿ ಹಣಕ್ರೂಢೀಕರಿಸಬೇಕಾದಅಗತ್ಯಇದೆಎಂದರು.

ಆಸಂದಿ ಮಠದಗುರು ರೇವಣಸಿದ್ದೇಶ್ವರ ದೇವಸ್ಥಾನದ ನಕ್ಷೆಯನ್ನುದೇಣಿಗೆ ನೀಡುವವರಿಗೆ ತೋರಿಸಿ ರೇವಣಸಿದ್ದೇಶ್ವರ ನಮ್ಮಕುಲದೇವರು ಎಂಬ ಬಗ್ಗೆ ಅರಿವು ಮೂಡಿಸಬೇಕಾಗಿದೆಎಂದು ಹೇಳಿದರು.

ಸಭೆಯನ್ನು ಉದ್ಘಾಟಿಸಿದ ಅಜ್ಜಯ್ಯಒಡೆಯರ್ ಮಾತನಾಡಿ, ಕುರುಬ ಸಮಾಜದಲ್ಲಿ ಜನಿಸಿದ ಗುರು ರೇವಣಸಿದ್ದೇಶ್ವರರು 12ನೇ ಶತಮಾನದಲ್ಲಿ ಸಮಾಜದ ಏಳಿಗೆಗಾಗಿ ಮತ್ತು ಸಕಲ ಜೀವರಾಶಿಗಳಿಗೆ ಪ್ರತಿಯೊಂದುಧರ್ಮಕ್ಕೂ ಸಾಮಾಜಿಕ ನ್ಯಾಯವನ್ನು ನೀಡಿದ ಏಕೈಕ ವ್ಯಕ್ತಿಎಂದು ಬಣ್ಣಿಸಿದರು.ದೇವಸ್ಥಾನ ಸಮಿತಿಯ ಮುಖಂಡರಾಜಪ್ಪ ಪ್ರಾಸ್ಥಾವಿಕವಾಗಿ ಮಾತನಾಡಿದರು, ಹಂಪಾಪುರ ಮಂಜೇಗೌಡ. ರೇಖಾ ಹುಲಿಯಪ್ಪಗೌಡ, ಮಂಜುನಾಥ, ವಕೀಲ ಪುಟ್ಟೇಗೌಡ, ಹೆಚ್.ಎಸ್ ಪುಟ್ಟೇಗೌಡ, ಈಶ್ವರಹಳ್ಳಿ ಮಹೇಶ್, ಕೆ.ಎಸ್ ಪುಷ್ಪರಾಜ್, ಸವಿತಾ, ಮತ್ತಿತರರು ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೇರಾ ಯುವ ಭಾರತ್ ಶಿವಮೊಗ್ಗ ಹಾಗೂ ಎನ್‌ಎಸ್‌ಎಸ್ ಘಟಕಗಳು ಶಿವಮೊಗ್ಗ ಇವರ ಸಹಯೋಗದಲ್ಲಿ ಅ.15 ಬೆಳಿಗ್ಗೆ 10 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ 2025-26 ನೇ ಶಿವಮೊಗ್ಗ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಮುಖ್ಯಮಂತ್ರಿ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಚಿವರಾದ ಸಿದ್ದರಾಮಯ್ಯರವರ ಘನ ಉಪಸ್ಥಿತಿಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಉದ್ಘಾಟನೆ ನೆರವೇರಿಸಲಿದ್ದಾರೆ. ಶಾಸಕ ಎಸ್.ಎನ್.ಚನ್ನಬಸಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಭದ್ರಾವತಿ ಶಾಸಕ ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ದಿ ಶಾಸಕ ಬಿ.ಕೆ.ಸಂಗಮೇಶ್ವ, ಸಾಗರ ಶಾಸಕ ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ಉಪಸ್ಥಿತರಿರುವರು.

ಮುಖ್ಯ ಅತಿಥಿಗಳಾಗಿ ಜಿಲ್ಲೆಯ ಸಂಸದರು, ವಿಧಾನಸಭೆ ಮತ್ತು ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರದ ಅಧ್ಯಕ್ಷರುಗಳು, ಜಿಲ್ಲಾಧಿಕಾರಿ, ಜಿ.ಪಂ ಸಿಇಓ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮಹಾನಗರ ಪಾಲಿಕೆ ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯ ನಿರ್ದೇಶಕರು ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ಜಾನಪದ ಗುಂಪು ನೃತ್ಯ, ಜಾನಪದ ಗೀತೆಗಳು, ಕಥೆ ಬರೆಯುವುದು, ಚಿತ್ರಕಲೆ, ಭಾಷಣೆ ಹಾಗೂ ಕವಿತೆ ಬರೆಯುವ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

# ತೋಟಗಾರಿಕೆ ಬೆಳೆಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆ ಅವಕಾಶಗಳು




**ಶಿವಮೊಗ್ಗ :** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತುತೋಟಗಾರಿಕ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ಕೃಷಿ ಮಹಾವಿದ್ಯಾಲಯ, ಐ.ಸಿ.ಎ.ಆರ್.- ಕೃಷಿ ವಿಜ್ಞಾನಕೇಂದ್ರ, ಶಿವಮೊಗ್ಗ ಮತ್ತುರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಕೃಷಿ ಇಲಾಖೆ, ಕರ್ನಾಟಕ ಸರ್ಕಾರಇವರ ಪ್ರಾಯೋಜಕತ್ವದಲ್ಲಿಆರು ದಿನಗಳ "ತೋಟಗಾರಿಕೆ ಬೆಳೆಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆ ಅವಕಾಶಗಳು" ಕುರಿತುಕೌಶ'ಲ್ಯಧಾರಿತತರಬೇತಿಕಾರ್ಯಕ್ರಮವನ್ನುದಿನಾಂಕ 13-10-2025 ರಿಂದ 19-10-2025ರವೆಗೆ, ಐ.ಸಿ.ಎ.ಆರ್.- ಕೃಷಿ ವಿಜ್ಞಾನಕೇಂದ್ರ, ಶಿವಮೊಗ್ಗದಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ದಿನಾಂಕ 13-10-2025ರಂದುಡಾ.ಆರ್. ಸಿ. ಜಗದೀಶ,ಗೌರವಾನ್ವಿತ ಕುಲಪತಿಗಳು, ಕೆ.ಶಿ.ನಾ.ಕೃ.ತೋ.ವಿ.ವಿ., ಶಿವಮೊಗ್ಗಇವರು ನೆರವೇರಿಸಿ ಶಿಬಿರಾರ್ಥಿಗಳನ್ನು ಕುರಿತು ಮಾತನಾಡುತ್ತ, ಈ ರೀತಿಯ ತರಬೇತಿಗಳು ರೈತರು ಮತ್ತುಗ್ರಾಮೀಣ ಉದ್ಯಮಿಗಳಿಗೆಕೊಯ್ಲೋತ್ತರ ನಿರ್ವಹಣೆ, ಮೌಲ್ಯವರ್ಧನೆ, ಅತಿಕಡಿಮೆ ಬಳಸುವ ತೋಟಗಾರಿಕಾಬೆಳೆಗಳ ಮಾರುಕಟ್ಟೆಯ ಅವಕಾಶಗಳ ಬಗ್ಗೆ ಕೌಶಲ್ಯವನ್ನು ಹೆಚ್ಚಿಸುವಲ್ಲಿ ಈ ರೀತಿಯಾದಂತಹ ತರಬೇತಿಗಳು ಸ್ವ-ಉದ್ಯೋಗವನ್ನು ಕಲ್ಪಿಸಿಕೊಡುವುದರೊಂದಿಗೆ ಬೆಳೆಗಳ ನಷ್ಟವನ್ನುತಡೆಗಟ್ಟುವಲ್ಲಿ ವಿಶೇಷಪಾತ್ರವನ್ನು ವಹಿಸುತ್ತವೆಎಂದುಅಭಿಪ್ರಾಯಿಸುತ್ತಾ, ಈ ತರಬೇತಿಯಲ್ಲಿಕೊಯ್ಲೋತ್ತರ ಸಂಸ್ಕರಣ ತಂತ್ರಜ್ಞಾನಗಳು, ವೈವಿಧ್ಯಮಯಆಹಾರ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮೌಲ್ಯವರ್ಧನೆ ವಿಧಾನಗಳು, ಸ್ಥಳೀಯ ಮತ್ತು ನಗರ ಮಾರುಕಟ್ಟೆಗಳಿಗೆ ಸೂಕ್ತವಾದಪ್ಯಾಕೇಜಿಂಗ್, ಬ್ರ್ಯಾಂಡಿಂಗ್ ಮತ್ತು ಮಾರುಕಟ್ಟೆ ತಂತ್ರಗಳು, ಕೃಷಿ ಆಧಾರಿತ ಉದ್ಯಮಗಳನ್ನು ಬೆಂಬಲಿಸುವ ಉದ್ಯಮಶೀಲತಾ ಅವಕಾಶಗಳು ಮತ್ತು ಸರ್ಕಾರಿ ಯೋಜನೆಗಳಕುರಿತ ಮಾಹಿತಿಯನ್ನು ಈ ತರಬೇತಿಯಲ್ಲಿ ನೀಡಲಾಗುವುದು. ಆದ್ದರಿಂದ ಶಿಬಿರಾರ್ಥಿಗಳು ಈ ತರಬೇತಿಯ ಪ್ರಯೋಜನ ಪಡೆದುಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮಕ್ಕೆಮುಖ್ಯ ಅತಿಥಿಗಳಾಗಿ ಆಗಮಿಸಿದ್ದ, ಡಾ. ಜಿ. ಕೆ. ಗಿರಿಜೇಶ್, ವಿಸ್ತರಣಾ ನಿರ್ದೇಶಕರುಇವರು ಮಾತನಾಡುತ್ತಾ, ಸ್ವಸಹಾಯ ಸಂಘಗಳು, ರೈತಉತ್ಪಾದಕ ಸಂಘಗಳು ತಯಾರಿಸಿದಂತಹ ಮೌಲ್ಯವರ್ಧಿತ ಉತ್ಪನ್ನಗಳ ಮಾರುಕಟ್ಟೆಯ ಅವಕಾಶಕ್ಕಾಗಿ ಐ.ಸಿ.ಎ.ಆರ್.- ಕೃಷಿ ವಿಜ್ಞಾನಕೇಂದ್ರ, ಶಿವಮೊಗ್ಗದ ವತಿಯಿಂದ ನೂತನವಾಗಿಆರಂಭಿಸುವ 'ಸಹ್ಯಾದ್ರಿ ಆಹಾರೋತ್ಪನ್ನಗಳ ಮಾರಾಟ ಮಳಿಗೆ'ಯಲ್ಲಿ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ವಿಶ್ವವಿದ್ಯಾಲಯದ ಪರವಾಗಿ ಅವಕಾಶ ಮಾಡಿಕೊಡಲಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಈ ಕಾರ್ಯಕ್ರಮದಅಧ್ಯಕ್ಷತೆಯನ್ನು, ಡಾ.ತಿಪ್ಪೇಶ, ಡಿ., ಡೀನ್ (ಕೃಷಿ), ನವುಲೆ ಆವರಣದ ಮುಖ್ಯಸ್ಥರು, ಕೃಷಿ ಮಹಾವಿದ್ಯಾಲಯಇವರು ವಹಿಸಿದ್ದರು.ತಮ್ಮಅಧ್ಯಕ್ಷೀಯ ನುಡಿಯಲ್ಲಿ ಶಿಬಿರಾರ್ಥಿಗಳನ್ನು ಕುರಿತು ಮಾತನಾಡುತ್ತಾ, ತೋಟಗಾರಿಕಾ ಬೆಳೆಗಳಲ್ಲಿ ತೇವಾಂಶವು ಹೆಚ್ಚಿರುವಕಾರಣ ಬಹು ಬೇಗ ಕೊಳೆತು ಹೋಗುವುದರಿಂದ ಸಂಸ್ಕರಣೆ ಮತ್ತು ಮೌಲ್ಯವರ್ಧಿತ ತಂತ್ರಜ್ಞಾನಗಳಿಂದ ಸೂಕ್ತವಾದಂತರಾಸಾಯನಿಕ ಮುಕ್ತ ಉಪ ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ಬಹಳ ಬೇಡಿಕೆಇದೆ. ಆದ್ದರಿಂದ ಶಿಬಿರಾರ್ಥಿಗಳು ತೋಟಗಾರಿಕೆ ಬೆಳೆಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆಗೆ ಹೆಚ್ಚಿನಒತ್ತುಕೊಟ್ಟು ಉದ್ಯಮಿಗಳಾಗುವಂತೆ ಕಿವಿಮಾತನ್ನು ಹೇಳಿದರು.

ಡಾ. ಬಿ. ಸಿ. ಹನುಮಂತಸ್ವಾಮಿ, ಸಹ ವಿಸ್ತರಣಾ ನಿರ್ದೇಶಕರು ಮತ್ತುಡಾ. ಸಿ. ಸುನಿಲ್, ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು, ಕೆ.ವಿ.ಕೆ., ಶಿವಮೊಗ್ಗ ಇವರುಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ 'ತರಬೇತಿಯತಾಂತ್ರಿಕಕೈಪಿಡಿ'ಯನ್ನುಕಾರ್ಯಕ್ರಮಕ್ಕೆ ಆಗಮಿಸಿದ್ದ ಗಣ್ಯರಿಂದ ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಶಿವಮೊಗ್ಗ ಜಿಲ್ಲೆಯ ವಿವಿಧ ಗ್ರಾಮಗಳಿಂದ ಒಟ್ಟು 30 ಜನಆಸಕ್ತ ಶಿಬಿರಾರ್ಥಿಗಳು ಭಾಗವಹಿಸಿರುತ್ತಾರೆ.ಈ ತರಬೇತಿಕಾರ್ಯಕ್ರಮದ ಮುಂಬರುವ ದಿನಗಳಲ್ಲಿ ಶಿಬಿರಾರ್ಥಿಗಳನ್ನು ಪ್ರಗತಿಪರ ಉದ್ಯಮಿಗಳ ಮೌಲ್ಯವರ್ಧನೆ ಮತ್ತು ಸಂಸ್ಕರಣಾಘಟಕಕ್ಕೆ ಶೈಕ್ಷಣಿಕ ಪ್ರವಾಸವನ್ನು ಹಮ್ಮಿಕೊಳ್ಳಲಾಗುವುದು. ಅಲ್ಲದೆ, ಈ ತರಬೇತಿಯಲ್ಲಿ ಪುಷ್ಪಗಳ ಮೌಲ್ಯವರ್ಧನೆ, ತೋಟಗಾರಿಕಾ ಬೆಳೆಗಳ ಕೊಯ್ಲೋತ್ತರ ನಿರ್ವಹಣೆ, ತೋಟಗಾರಿಕಾ ಬೆಳೆಗಳ ಬೇಕರಿ ಉತ್ಪನ್ನಗಳ ತಯಾರಿಕೆ, ಗೋಡಂಬಿಯಕೊಯ್ಲೋತ್ತರ ನಿರ್ವಹಣೆ, ಸಂಸ್ಕರಣಾ ವಿಧಾನಗಳು ಹಾಗೂ ಶ್ರೇಣೀಕರಣ, ಮಾರುಕಟ್ಟೆ, ವಿವಿಧ ಹಣ್ಣು ಮತ್ತು ತರಕಾರಿಗಳ ಮೌಲ್ಯವರ್ಧನೆ, ತರಕಾರಿಗಳ ನಿರ್ಜಲೀಕರಣದತಾಂತ್ರಿಕತೆ, ನವ ಉದ್ಯಮದಕುರಿತು ವಿಚಾರ ವಿನಿಮಯ, ಕೋಕೋ ಬೆಳೆಯ ಕೊಯ್ಲೋತ್ತರ ನಿರ್ವಹಣೆ, ಚಾಕೋಲೇಟ್‌ಗಳ ತಯಾರಿಕೆಯನ್ನುಪ್ರಾತ್ಯಕ್ಷಿಕೆಮುಖಾಂತರ ತಿಳಿಸಿಕೊಡಲಾಗುವುದು. ಈ ತರಬೇತಿಯಲ್ಲಿಕಾರ್ಯಕ್ರಮದಆಯೋಜಕರಾದ ಡಾ.ರವಿಶಂಕರ್ ಎಂ. ಪಾಟೀಲ್, ಸಹಾಯಕ ಪ್ರಾಧ್ಯಾಪಕರು, ಕೃಷಿ ಮಹಾವಿದ್ಯಾಲಯ, ನವುಲೆ, ಶಿವಮೊಗ್ಗ ಮತ್ತು ಸಹ ಆಯೋಜಕರಾದ ಕೆ.ವಿ.ಕೆ. ವಿಜ್ಞಾನಿಗಳಾದ ಡಾ. ಎನ್. ಸುಧಾರಾಣಿ, ವಿಜ್ಞಾನಿ (ಗೃಹ ವಿಜ್ಞಾನ) ಮತ್ತುಡಾ. ಮಂಜುನಾಥ ಬಿ.ಕುದರಿ, ವಿಜ್ಞಾನಿ (ಕೃಷಿ ವಿಸ್ತರಣೆ) ಇವರು ಉಪಸ್ಥಿತರಿದ್ದರು.

ಈ ವಿಷಯವನ್ನು ಎಲ್ಲಾ ಪತ್ರಿಕೆಗಳಲ್ಲಿ ಪ್ರಕಟಿಸಬೇಕಾಗಿ ಕೇಳಿಕೊಳ್ಳುತ್ತೇನೆ.

# ಪೋಷಣ ಮಾಸಾಚರಣೆ ಕಾರ್ಯಕ್ರಮದ ಸಮಾರೋಪ ಸಮಾರಂಭ



**ಗದಗ :** ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ, ಗದಗ ಇವರ ಸಂಯುಕ್ತಾಶ್ರಯದಲ್ಲಿ ಗದಗ ತಾಲೂಕಿನ ಬ್ಯಾಂ ಕ ರ್ಸ ಕಾಲೋನಿಯ ಜಾಕಿರಹುಸೇನ ಸಮುದಾಯ ಭವನದಲ್ಲಿ ಶುಕ್ರವಾರ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪೋಷಣ ಮಾಸಾಚರಣೆ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಪೌಷ್ಠಿಕ ಆಹಾರವನ್ನು ಮಕ್ಕಳು, ಗರ್ಭಿಣಿ, ಬಾಣಂತಿಯರು ಸರಿಯಾಗಿ ಸೇವಿಸಬೇಕು ಹಾಗೂ ಅದರ ಮಹತ್ವದ ಬಗ್ಗೆ ವಿವರವಾಗಿ ಮಾತನಾಡಿದರು. ನಮ್ಮ ಹಾಗೂ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿರಿಸಿಕೊಳ್ಳಬೇಕು.

ಇದರಿಂದ ರೋಗ ರುಜಿನೆಗಳನ್ನು ತಡೆಗಟ್ಟಿ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ., ಮಾತನಾಡಿ ಸೆಪ್ಟೆಂಬರ ಮಾಹೆಯಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಬೊಜ್ಜುತನ ನಿವಾರಣೆ, ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವುದು, ಪೋಷಣ ಭಿ ಪಢಾಯಿ ಭಿ, ಶಿಶು & ಚಿಕ್ಕ ಮಕ್ಕಳ ಆಹಾರ ಅಭ್ಯಾಸಗಳು, ಪುರುಷರ ಸಹಭಾಗಿತ್ವದ ಹಾಗೂ ಇಲಾಖೆಯ ವಿವಿಧ ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಶ್ರೀಮತಿ ಫಾತಿಮಾ ಚುಳ್ಕಿ ಸ್ವಾಗತಿಸಿದರು, ಶ್ರೀಮತಿ ರುಕ್ಮಿಣಿ ದೇವಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಹಮ್ಮಿಕೊಂಡ ಕಾರ್ಯಕ್ರಮಗಳು :-ಪೌಷ್ಠಿಕ ಆಹಾರಗಳ ಪ್ರಾತ್ಯಕ್ಷಿಕೆ. 6 ತಿಂಗಳ ಮೇಲ್ಪಟ್ಟ

ಮಕ್ಕಳಿಗೆ ಅನ್ನಪ್ರಾಶನ ಕಾರ್ಯಕ್ರಮ, ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ, ಕಾರ್ಯಕರ್ತೆ ಹಾಗೂ 0 ರಿಂದ 6 ವರ್ಷದ ಮಕ್ಕಳಿಂದ ವಯಸ್ಸಿಗೆ ತಕ್ಕಂತೆ ಮಗುವಿನ ಚಟುವಟಿಕೆಗಳ ಕುರಿತಾದ ಪಾತ್ಯಕ್ಷಿಕೆ. ಅಂಗನವಾಡಿ ಕಾರ್ಯಕರ್ತೆ ಹಾಗೂ ಮುದ್ದು ಮಕ್ಕಳಿಂದ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳು.

## ದೆಹಲಿ ಪೊಲೀಸ್ ನೇಮಕಾತಿಗೆ ಅರ್ಜಿ ಆಹ್ವಾನ

**ಚಿತ್ರದುರ್ಗ:** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗವು ದೆಹಲಿ ಪೊಲೀಸ್ ಎಕ್ಸಾಮಿನೇಷನ್-2025 ಮೂಲಕ ಹೆಡ್ ಕಾನ್ಸಟೇಬಲ್ (ಅಸಿಸ್ಟೆಂಟ್ ವೈರ್‌ಲೆಸ್ ಆಪರೇಟರ್) (ಟೆಲಿ ಪ್ರಿಂಟರ್ ಆಪರೇಟರ್) ಕಾನ್ಸಟೇಬಲ್ (ಎಕ್ಸಿಟಿವ್)(ಡ್ರೈವರ್) ಹುದ್ದೆಗಳ ನೇಮಕಾತಿಗೆ ಕಂಪ್ಯೂಟರ್ ಆಧಾರಿತ ಪರೀಕ್ಷೆ ನಡೆಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು 12ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಹುದ್ದೆಗಳಿಗೆ ಅನುಗುಣವಾಗಿ ಪಿಯುಸಿಯಲ್ಲಿ ವಿಜ್ಞಾನ ಹಾಗೂ ಗಣಿತ ಅಭ್ಯಾಸ ಮಾಡಿರಬೇಕು. ಡ್ರೈವಿಂಗ್ ಲೈಸೆನ್ಸ್ ಹೊಂದಿರಬೇಕು.

18 ರಿಂದ 25 ವರ್ಷಗಳ ಒಳಗಿರಬೇಕು. ಎಸ್.ಸಿ. ಎಸ್.ಟಿ. ಓ.ಬಿ.ಸಿ. ಹಾಗೂ ಈ.ಡಬ್ಲೂಎಂ ವರ್ಗಗಳಿಗೆ ವಯೋಮಿತಿ ಸಡಿಲಿಕೆ ಇದೆ. ಡಿಸೆಂಬರ್-2025 ಅಥವಾ ಜನವರಿ-2026ರಲ್ಲಿ ಪರೀಕ್ಷೆ ನಡೆಯಲಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 21 ಕಡೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ www.ssckkr.kar.nic.in/https://ssc.nic.in ವೆಬ್‌ಸೈಟ್‌ಗೆ ಭೇಟಿ ನೀಡಬಹುದು. ದೂರವಾಣಿ ಸಂಖ್ಯೆ 080-25502520 ಕರೆ ಮಾಡಬಹುದು. ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಂಖ್ಯೆಗಳಾದ 9945587060, 7019755147 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ.17 ರಂದು ಮೈಸೂರಿನಲ್ಲಿ ಉದ್ಯೋಗ ಮೇಳ

**ಹಾಸನ :** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು ವತಿಯಿಂದ ಅ.17ರಂದು ಮಹಾರಾಜ ಕಾಲೇಜು ಮೈದಾನ, ಮೈಸೂರು ಇಲ್ಲಿ ಕೌಶಲ್ಯದಿಂದ ಉದ್ಯೋಗದ ಕಡೆಗೆ ಯುವ ಸಮೃದ್ಧಿ ಸಮ್ಮೇಳನ ಮೈಸೂರು ಉದ್ಯೋಗ ಮೇಳವನ್ನು ಬೆಳಿಗ್ಗೆ 09 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಆಯೋಜಿಸಿದ್ದು, ಸದರಿ ಉದ್ಯೋಗ ಮೇಳದಲ್ಲಿ ಎಲ್ಲಾ ವಿದ್ಯಾರ್ಹತೆಯ ಉದ್ಯೋಗಾಕಾಂಕ್ಷಿಗಳು ಭಾಗವಹಿಸಬಹುದಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಜಾಲತಾಣ https://udyogamela.ksdckarnataka.com,ಸಹಾಯವಾಣಿ ಸಂಖ್ಯೆ: 9606494308/906494301 ಮತ್ತು ಜಿಲ್ಲಾ ಕೌಶಲ್ಯಾಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08172-295340 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ.

# ಇಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರದ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಅ.15ರ ಬುಧವಾರ ಬೆಳಿಗ್ಗೆ 10.30ಕ್ಕೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಚಿವರಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಘನ ಉಪಸ್ಥಿತಿ ವಹಿಸುವರು.ಸಾರಿಗೆ, ಮುಜರಾಯಿ ಇಲಾಖೆ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಮನಗರ

ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು.ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್,

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ. ಸುಧಾಕರ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಮತ್ತು ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ್, ನೆಲಮಂಗಲ ವಿಧಾನಸಭಾ ಕ್ಷೇತ್ರದ ಶಾಸಕರಾದ ಎನ್. ಶ್ರೀನಿವಾಸ್, ವಿಧಾನ ಪರಿಷತ್ ಶಾಸಕರಾದ ಪುಟ್ಟಣ್ಣ, ಎಸ್. ರವಿ, ಸುಧಾಮ್ ದಾಸ್,

ರಾಮೋಜಿ ಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಚ್.ಎಂ. ರೇವಣ್ಣ, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ

ಯೋಜನೆ ಅನುಷ್ಠಾನ ಸಮಿತಿ, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಎ.ಬಿ. ಹಾಗೂ ರಾಮನಗರ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ) ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿಗಮಕ್ಕೆ ಸರ್ಕಾರದಿಂದ 32 ಕೋಟಿ ರೂ.: ಪದ್ಮಾವತಿ

**ಚಿಕ್ಕಮಗಳೂರು, ಅ.14:** ರಾಜ್ಯ ಸರ್ಕಾರ ಈ ಬಾರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿಗಮಕ್ಕೆ 32 ಕೋಟಿ ರೂ. ಅನುದಾನವನ್ನು ಒದಗಿಸಿದ್ದು, ಇದರಲ್ಲಿ 15 ಕೋಟಿ ಅನುದಾನ ಉದ್ಯೋಗಕ್ಕಾಗಿ ಮೀಸಲಿಡಲಾಗಿದೆ ಎಂದು ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ತಿಳಿಸಿದರು.

ಇಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾಜಿ ದೇವದಾಸಿಯರಿಗೆ 2000 ರೂ. ಮಾಸಾಶನ ನೀಡಲಾಗುತ್ತಿದೆ. ಲಿಂಗತ್ವ ಅಲ್ಪಸಂಖ್ಯಾತರಿಗೆ 30 ಸಾವಿರ ಸಹಾಯ ಧನ, ಆ್ಯಸಿಡ್ ದಾಳಿಗೆ ತುತ್ತಾದವರಿಗೆ ಜೀವನಾಧಾರಕ್ಕೆ 10 ಸಾವಿರ ರೂ.ಗಳನ್ನು ಮಾಸಾಶನ ಹಾಗೂ ನಿಗಮದಿಂದ 5 ಲಕ್ಷ ರೂ. ಸಹಾಯಧನ ನೀಡಲಾಗುತ್ತಿದೆ ಎಂದು ಹೇಳಿದರು.

ಐದು ಯೋಜನೆ ಹೊಂದಿರುವ ಈ ಪುಟ್ಟ ನಿಗಮವು ಇದುವರೆವಿಗೂ ಸಾಕಷ್ಟು ಸಾಧನೆಗಳನ್ನು ಮಾಡಿಕೊಂಡು ಬರುತ್ತಿದೆ. ಕೆಳ ವರ್ಗ ಮತ್ತು ಮಧ್ಯಮ ವರ್ಗದ ಜನರಿಗೆ ಸಂಬಂಧಿಸಿದ ಉದ್ಯೋಗಿನಿ ಯೋಜನೆಯು ನಗರ ವ್ಯಾಪ್ತಿಯಲ್ಲಿ ಶೇ.25 ಕೂಡ ಗುರಿ ತಲುಪಲು ಸಾಧ್ಯವಾಗುತ್ತಿಲ್ಲ. ಕೆಲವೊಂದು ತೊಡಕುಗಳಿದ್ದು, ಕಾರಣಾಂತರಗಳಿಂದ ಲೀಡ್ ಬ್ಯಾಂಕ್‌ಗಳಿಂದ ಸಹಕಾರ ದೊರಕುತ್ತಿಲ್ಲ. ಆದರೂ ಜಿಲ್ಲೆಯಲ್ಲಿ ಶೇ.75 ರಷ್ಟು ಗುರಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಸರ್ಕಾರಿ ಕೆಲಸ ನಮಗೆ ಉಸಿರಿರುವರೆಗೂ ಅನ್ನ ನೀಡುವ ಕೆಲಸವಾಗಿರುವುದರಿಂದ ಅಧಿಕಾರಿಗಳು ಸೇವಾ ಮನೋಭಾವದಿಂದ ಕಾರ್ಯ ನಿರ್ವಹಿಸಬೇಕು. ಇಚ್ಛಾಶಕ್ತಿಯಿಂದ ಸ್ಪಂದಿಸಿ ಸಹಕರಿಸಿ ಜನರು ಜೀವನ ರೂಪಿಸಿಕೊಳ್ಳುವಂತಹ ಅವಕಾಶ ಕಲ್ಪಿಸಿಕೊಡಬೇಕು. ಸಾರ್ವಜನಿಕರು ಇಲಾಖೆಯ ಕಚೇರಿಗೆ ಬಂದಾಗ ಸರ್ಕಾರದ ಸವಲತ್ತುಗಳನ್ನು ಅವರಿಗೆ ತಲುಪಿಸುವ ಕಾರ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ಜನರಿಗೆ ಸರ್ಕಾರದ ಯೋಜನೆಗಳ ಬಗ್ಗೆ ಅರಿವಿರುವುದಿಲ್ಲ. ಅಂಥವರಿಗೆ ಅರಿವು ಮೂಡಿಸಿ ಸೌಲಭ್ಯ ಪಡೆದುಕೊಳ್ಳುವಂತೆ ಮಾಡಬೇಕಾಗಿರುವುದು ಅಧಿಕಾರಿಗಳ ಕರ್ತವ್ಯ. ಈ ನಿಟ್ಟಿನಲ್ಲಿ ಅಧಿಕಾರಿಗಳು ಸರ್ಕಾರ ಮತ್ತು ಸಾರ್ವಜನಿಕರ ಸೇತುವೆಯಾಗಿ ಕಾರ್ಯ ನಿರ್ವಹಿಸುವಂತೆ ಸಲಹೆ ನೀಡಿದರು.

ರಾಜ್ಯದಲ್ಲಿ ಎಷ್ಟು ಮಂದಿ ಲಿಂಗತ್ವ ಅಲ್ಪಸಂಖ್ಯಾತರಿದ್ದಾರೆ ಎಂಬುದನ್ನು ಅರಿಯಲು ಮೊದಲ ಬಾರಿಗೆ ಈ ಸಮೀಕ್ಷೆಯನ್ನು ನಡೆಸಲು ಕ್ರಮ ಕೈಗೊಳ್ಳಲಾಗಿದ್ದು, ಶೈಕ್ಷಣಿಕವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಪ್ರಯತ್ನ ಈ ಸಮೀಕ್ಷೆಯ ಉದ್ದೇಶವಾಗಿದೆ. ಪ್ರತಿ ಜಿಲ್ಲೆಯಲ್ಲಿ ಸಮೀಕ್ಷೆ ಯಾವ ಹಂತಕ್ಕೆ ತಲುಪಿದೆ ಎಂಬುದನ್ನು ತಿಳಿಯಲು ಖುದ್ದಾಗಿ ಜಿಲ್ಲೆಗಳಿಗೆ ತೆರಳಿ ಪರಿಶೀಲನೆ ಮಾಡುತ್ತಿರುವುದಾಗಿ ತಿಳಿಸಿದರು.



ಜಿಲ್ಲೆಯಲ್ಲಿ 136 ತೃತೀಯ ಲಿಂಗಿಗಳಿದ್ದಾರೆ. ಸಮೀಕ್ಷೆಗೆ ಒಳಪಟ್ಟಲ್ಲಿ ಮನೆಯವರ ವಿಶ್ವಾಸ ಕಳೆದುಕೊಂಡು ಮನೆಯಿಂದ ದೂರ ಉಳಿಯಬೇಕಾಗುತ್ತದೆ ಎಂಬ ಕಾರಣದಿಂದ ಮಿಕ್ಕ 22 ಜನರು ಸಮೀಕ್ಷೆಗೆ ಸಹಕರಿಸುತ್ತಿಲ್ಲ. ಅಂಥವರ ಮನವೊಲಿಸಿ ಸಮೀಕ್ಷೆಗೆ ಒಳಪಡಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಿಗಮದ ಜಂಟಿ ನಿರ್ದೇಶಕಿ ಅಕ್ಕಮಹಾದೇವಿ ಮಾತನಾಡಿ, ಲಿಂಗತ್ವ ಅಲ್ಪಸಂಖ್ಯಾತರಿಗೆ ನಿವೇಶನ ಸಹಿತ ವಸತಿ ಕಲ್ಪಿಸಲು ಪ್ರಸ್ತುತ ಸಾಲಿನಲ್ಲಿ ವಿಶೇಷ ವರ್ಗದ ವಸತಿ ಯೋಜನೆಯಡಿಯಲ್ಲಿ ನಗರಾಭಿವೃದ್ಧಿ ಕೋಶ, ಪುರಸಭೆ, ನಗರಸಭೆಗಳಿಗೆ ಒಟ್ಟು 23 ಅರ್ಜಿಗಳನ್ನು ಕಳುಹಿಸಿ ಮಂಜೂರಾತಿಗೆ ಕ್ರಮ ವಹಿಸಲಾಗಿದೆ. ಎರಡು ಅರ್ಜಿಗಳು ಮಂಜೂರಾತಿ ಹಂತದಲ್ಲಿವೆ. 6 ಜನರಿಗೆ ನಗರಸಭೆಯ ಜಿ+2 ಮನೆಗಳು ಮಂಜೂರಾತಿ ಹಂತದಲ್ಲಿವೆ. ಜಿಲ್ಲೆಯಲ್ಲಿ ಈಗಾಗಲೇ 28 ಲಿಂಗತ್ವ ಅಲ್ಪಸಂಖ್ಯಾತರು ಟಿ.ಜಿ. ಕಾರ್ಡ್ ಹೊಂದಿದ್ದಾರೆ. 24 ಜನ ಲಿಂಗತ್ವ ಅಲ್ಪಸಂಖ್ಯಾತರು ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ಪಡೆದಿದ್ದಾರೆ. ಜಿಲ್ಲೆಯಲ್ಲಿನ 7 ಆ್ಯಸಿಡ್ ದಾಳಿ ಪ್ರಕರಣಗಳಲ್ಲಿ ನಾಲ್ವರು ಫಲಾನುಭವಿಗಳಿಗೆ ನಿಗಮದ ಗೆಳತಿ ಯೋಜನೆಯಡಿ ತಲಾ 5 ಲಕ್ಷ ರೂ. ಸಾಲ ಮತ್ತು ಸಹಾಯಧನ ಮಂಜೂರಾಗಿದೆ. ಮೂವರಿಗೆ ದಾಖಲಾತಿಗಳು ಲಭ್ಯವಿಲ್ಲದ ಕಾರಣ ಮಂಜೂರಾಗಿಲ್ಲ ಎಂದರು.

ಉದ್ಯೋಗಿನಿ ಯೋಜನೆಯಡಿ ಶಾಸಕರ ಆಯ್ಕೆ ಸಮಿತಿಯ ಭೌತಿಕ ಗುರಿ 18. ಜಿಲ್ಲಾಧಿಕಾರಿಗಳ ಆಯ್ಕೆ ಸಮಿತಿ ಭೌತಿಕ ಗುರಿ 9. ಗುರಿಯನುಸಾರ ಆಯ್ಕೆಯಾದ ಅರ್ಜಿಗಳನ್ನು ಸಂಬಂಧಿಸಿದ ಬ್ಯಾಂಕುಗಳಿಗೆ ಕಳುಹಿಸಿದ್ದು ಒಟ್ಟು 20 ಅರ್ಜಿಗಳಿಗೆ ಇದುವರೆಗೆ ಸಾಲ ಮಂಜೂರಾತಿ ದೊರಕಿದೆ. ಸಹಾಯಧನ ಬಿಡುಗಡೆ ಸಲುವಾಗಿ 17 ಅರ್ಜಿಗಳನ್ನು ನಿಗಮಕ್ಕೆ ಸಲ್ಲಿಸಲಾಗಿದೆ. ಉಳಿದ 7 ಅರ್ಜಿಗಳಿಗೆ ಸಾಲ ಮಂಜೂರಾತಿಗೆ ಕ್ರಮ ವಹಿಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಶ್ರೀನಿವಾಸ್ ವೈ.ಆಲದಾರ್ತಿ, ಜಿಲ್ಲಾ ನಿರೂಪಣಾಧಿಕಾರಿ ಡಿ.ಸಂತೋಷ್. ಎಲ್ಲಾ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮುಂತಾದವರು ಭಾಗವಹಿಸಿದ್ದರು.

## ಕಾಂಗ್ರೆಸ್ ನೊಂದಿಗೆ ಶಾಮೀಲಾಗಿಲ್ಲವಾದರೆ ಆಣೆ ಮಾಡಿ; ಕೃಷ್ಣಮೂರ್ತಿ ಪವಾರ್

ದಾವಣಗೆರೆ: ಪಕ್ಷದ ಮುತ್ಸದ್ದಿ ನಾಯಕರುಗಳು ಲೋಕಸಭಾ, ವಿಧಾನಸಭಾ ಚುನಾವಣೆಗಳಲ್ಲಿ ಕಾಂಗ್ರೆಸ್ ಜೊತೆ ಶಾಮೀಲಾಗಿ ಬಿಜೆಪಿ ಸೋಲಿಗೆ ಪ್ರತ್ಯಕ್ಷ ಸಾಕ್ಷಿಯಾಗಿದ್ದು, ಈಗ ಕಾಂಗ್ರೆಸ್‌ನವರೊಂದಿಗೆ ಶಾಮೀಲಾಗಿಲ್ಲ ಎಂದು ಕಾರ್ಯಕರ್ತರನ್ನು ನಂಬಿಸುತ್ತಿರುವ ನಾಯಕರುಗಳು ಭಾಜಪ ಕಾರ್ಯಾಲಯಕ್ಕೆ ಬಂದು ಧರ್ಮಸ್ಥಳದ ಮಂಜುನಾಥ ಸ್ವಾಮಿಯ ಮೇಲೆ ಆಣೆ ಮಾಡಿ ಕಾರ್ಯಕರ್ತರ ನಂಬಿಕೆಯನ್ನು ಉಳಿಸಿಕೊಳ್ಳಿರಿ ಎಂದು ಅಟಲ್ ಬಿಹಾರಿ ವಾಜಪೇಯಿ ಅಭಿಮಾನಿ ಬಳಗವು ಆಹ್ವಾನ ನೀಡಿದೆ.

ಪಕ್ಷದ ಕಚೇರಿಗೆ ಬಂದು ಯಾವಾಗ ಆಣೆ ಮಾಡುತ್ತೀರಿ ಎಂಬುದನ್ನು ನೀವೇ ದಿನಾಂಕ ನಿಗದಿಪಡಿಸಿರಿ. ಹೊನ್ನಾಳಿಯ ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಿ ಹೀನಾಯವಾಗಿ ಸೋತು ಈಗ ಮಾನ ಮರ್ಯಾದೆ ಇಲ್ಲದೆ ಜಿಲ್ಲಾ ಮುಖಂಡವತ್ವವನ್ನು ವಹಿಸಿಕೊಳ್ಳಲು ಹವಣಿಸುತ್ತಿರುವ ನಾಯಕರುಗಳೇ ಮೊದಲು ನಿಮ್ಮ ಕ್ಷೇತ್ರವನ್ನು ಗಟ್ಟಿ ಮಾಡಿಕೊಳ್ಳಿ ಎಂದು ಪರೋಕ್ಷವಾಗಿ ಮಾಜಿ ಸಚಿವ .ಪಿ. ರೇಣುಕಾಚಾರ್ಯಗೆ ಬಳಗದ ಅಧ್ಯಕ್ಷರಾದ ಕೃಷ್ಣಮೂರ್ತಿ ಪವಾರ್ ಪತ್ರಿಕಾ ಪ್ರಕಟಣೆಯಲ್ಲಿ ಟಾಂಗ್ ಕೊಟ್ಟಿದ್ದಾರೆ.

ಪಕ್ಷಕ್ಕಾಗಿ, ಪಕ್ಷದ ಪುರೋಭಿವೃದ್ಧಿಗಾಗಿ ಹಗಲಿರುಳು ಮನೆ–ಮಠ ವ್ಯವಹಾರಗಳನ್ನು ತೊರೆದು ನಿಷ್ಠೆಯಿಂದ ಪ್ರಾಮಾಣಿಕವಾಗಿ ದುಡಿದ ಕಾರ್ಯಕರ್ತರುಗಳಿಗೆ ನಮ್ಮ ಜಿಲ್ಲೆಯ ಗುಂಪುಗಾರಿಕೆಯಿಂದಾಗಿ ಪಕ್ಷದ ವರ್ಚಸ್ಸಿಗೆ ಸಾಕಷ್ಟು ಹಾನಿಯಾಗಿದೆ. ಅದಲ್ಲದೆ ಇವರ ಗುಂಪುಗಾರಿಕೆಯಿಂದ ಪಕ್ಷದ ನಾಯಕರಾಗಿ ಹೊರಹೊಮ್ಮಬೇಕಾಗಿದ್ದ ಅನೇಕ ಕಾರ್ಯಕರ್ತರನ್ನು ಮೂಲೆಗುಂಪು ಮಾಡಿರುವುದು ವಿಷಾದನೀಯ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ದಾವಣಗೆರೆಗೆ ಬಂದು ಗುಂಪುಗಾರಿಕೆ ಮಾಡುವುದನ್ನು ಬಿಟ್ಟು ಪಕ್ಷದ ನಿಷ್ಠಾವಂತ ಕಾರ್ಯಕರ್ತರುಗಳನ್ನು ಒಳಗೊಂಡು ಎಲ್ಲರನ್ನೂ ಒಗ್ಗೂಡಿಸುವ ಕೆಲಸ ಮಾಡಿ, ಮುತ್ಸದ್ದಿ ರಾಜಕಾರಣಿ ಮಾಜಿ ಮುಖ್ಯ ಸಚೇತಕರು ಹಾಗೂ ಜಿಲ್ಲಾಧ್ಯಕ್ಷರು ಎರಡೂ ಗುಂಪುಗಳನ್ನು ಒಂದು ಮಾಡುವ ಜವಾಬ್ದಾರಿ ಇದ್ದರೂ ಈ ಕೆಲಸವನ್ನು ಯಾ–ಕೆ ಮಾಡುತ್ತಿಲ್ಲ. ಮೊದಲು ಈ ಕೆಲಸವನ್ನು ಮಾಡಿರಿ ಎಂದು ಸಲಹೆ ನೀಡಿದ್ದಾರೆ. ಜಿಲ್ಲಾಧ್ಯಕ್ಷರು ಎರಡು ಗುಂಪುಗಳನ್ನು ಒಂದು ಮಾಡುವ ಪ್ರಯತ್ನ ಮಾಡಿ. ನಾವು ಯಾವುದೇ ಗುಂಪಿನ ಅಭಿಮಾನಿಗಳಲ್ಲ, ನಾವು ಎಲ್ಲರೂ ಪಕ್ಷ ನಿಷ್ಠರು. ಹಾಗೂ ಮಾಡಿರುವ ತಪ್ಪಿಗೆ ಸಾರ್ವಜನಿಕವಾಗಿ ಕ್ಷಮೆ ಯಾಚಿಸಿ. ಶಿಸ್ತು ಬದ್ಧ ಪಕ್ಷಕ್ಕೆ ಶಿಸ್ತನ್ನು ಮರಳಿ ತರುವ ಪ್ರಯತ್ನ ಮಾಡಿ ಎಂದು ಕೋರಿದ್ದಾರೆ.

# ರಸ್ತೆಗುಂಡಿ ನಿರ್ಲಕ್ಷ್ಯ: ಸರ್ಕಾರದ ವಿರುದ್ಧ ಕಿರಣ್ ಆಕ್ರೋಶ

**ಬೆಂಗಳೂರು:** ಹಲವು ಆದೇಶ, ಎಚ್ಚರಿಕೆ ಹಾಗೂ ಗಡುವಿನ ಹೊರತಾಗಿಯೂ ರಾಜಧಾನಿ ಬೆಂಗಳೂರಲ್ಲಿ ರಸ್ತೆ ಗುಂಡಿಗಳು ಇನ್ನೂ ಬಾಯಿ ತೆರೆದುಕೊಂಡಿದ್ದು, ವಾಹನ ಸವಾರರು ಪ್ರತಿನಿತ್ಯ ಇವುಗಳಿಂದ ಸಂಕಷ್ಟ ಅನುಭವಿಸುತ್ತಲೇ ಇದ್ದಾರೆ.

ರಸ್ತೆ ಗುಂಡಿಗಳಿಂದ ಬೇಸೆತ್ತ ಉದ್ಯಮಿಗಳೂ ಈ ಬಗ್ಗೆ ಹಲವು ಭಾರಿ ಧ್ವನಿ ಎತ್ತಿದ್ದಲ್ಲದೆ, ಬೆಂಗಳೂರು ತೊರೆಯುವ ಎಚ್ಚರಿಕೆಯನ್ನೂ ಕೊಟ್ಟಿದ್ದಾರೆ. ಆ ಬೆನ್ನಲ್ಲೇ ಸ್ವತಃ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಅಖಾಡಕ್ಕಿಳಿದು ಅಧಿಕಾರಿಗಳ ಚಳಿ ಬಿಡಿಸಿದ್ದರು.

ಗುಂಡಿ ಮುಚ್ಚಲು ಗಡುವು ಸಹ ನೀಡಿದ್ದರು. ಇಷ್ಟೆಲ್ಲ ಆದರೂ ನಗರದ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಗುಂಡಿಗಳು ರಾರಾಜಿಸುತ್ತಿದ್ದು, ಈ ಬಗ್ಗೆ ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ಮಾಡಿರುವ ಪೋಸ್ಟ್ ಈಗ ವೈರಲ್ ಆಗಿದೆ. ಸರ್ಕಾರದ ನಿರ್ಲಕ್ಷ್ಯಕ್ಕೆ ಅವರು ಆಕ್ರೋಶ ಹೊರಹಾಕಿದ್ದಾರೆ.

ಬಯೋಕಾನ್ ಪಾರ್ಕ್‌ಗೆ ಚೀನಾದಿಂದ ಬಂದಿದ್ದ ಉದ್ಯಮಿಯೊಬ್ಬರು ಯಾಕೆ ಬೆಂಗಳೂರು ನಗರದ ರಸ್ತೆಗಳು ಹಾಳಾಗಿವೆ





ಕಂಡ ಕಂಡಲ್ಲಿ ಕಸದ ರಾಶಿ ಯಾಕಿದೆ? ಇಲ್ಲಿನ ಸರ್ಕಾರ ಹೂಡಿಕೆದಾರರಿಗೆ ಬೆಂಬಲ ನೀಡುತ್ತಿಲ್ಲವೇ ಎಂದು ನನ್ನನ್ನು ಪ್ರಶ್ನಿಸಿದ್ದಾರೆ ಎಂದು ಕಿರಣ್ ಮಜುಂದಾರ್ ಶಾ ತಮ್ಮ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. ಅಲ್ಲದೆ ಈ ಪೋಸ್ಟ್ ಅನ್ನು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಟ್ಯಾಗ್ ಮಾಡಿದ್ದಾರೆ. ರಸ್ತೆ ಗುಂಡಿಗಳ ಕುರಿತು ಪೋಸ್ಟ್ ಮಾಡಿದ ಮಜುಂದಾರ್

ರಸ್ತೆ ಗುಂಡಿಗಳ ಬಗ್ಗೆ ಕಿರಣ್ ಮಜುಂದಾರ್ ಅವರ ಈ ಪೋಸ್ಟ್ ಕುರಿತು ಐಟಿ ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿದ್ದು, ಬೆಂಗಳೂರಿಗೆ ಉದ್ಯಮಿಗಳದ್ದು ಅವರದ್ದೇ ಆದ ಕೊಡುಗೆ ಇದೆ. ಸಮಸ್ಯೆಗಳ ಬಗ್ಗೆ ಅವರು ಕರೆ ಮಾಡಿ ನಮ್ಮ ಜೊತೆ ಮಾತನಾಡಬಹುದು. ಎಲ್ಲರೂ ಅವರವರ ಪಾತ್ರ ನಿರ್ವಹಿಸಿದ್ರೆ ರಾಜ್ಯಕ್ಕೆ ಒಳ್ಳೇದು.

ಕಸ ಹಾಕೋರು ಯಾರು ಮೇಲಿಂದ ಬಂದು ಬೀಳುತ್ತಾ ಹೀಗಾಗಿ ನಾಗರಿಕರು ತಮ್ಮ ಜವಾಬ್ದಾರಿ ಅರಿತುಕೊಂಡು ಸಹಾಕಾರ ನೀಡಬೇಕು ಎಂದಿದ್ದಾರೆ. ಅನ್ಯ ರಾಜ್ಯದವರು ಉದ್ಯಮಿಗಳಿಗೆ ಆಹ್ವಾನ ಕೊಡೋದು ಸಹಜ. ಆಂಧ್ರ ಐಟಿ ಮಿನಿಸ್ಟರ್ ಅಂತೂ ರಣಹದ್ದಿನಂತೆ ಕಾಯುತ್ತಿರುತ್ತಾರೆ. ಅಭಿವೃದ್ಧಿ ಬಗ್ಗೆ ಪ್ರತಿಪಕ್ಷ ಸಲಹೆ ಕೊಡಲ್ಲ, ಆ ನಿರೀಕ್ಷೆಯೂ ನಮಗಿಲ್ಲ ಎಂದು ಹೇಳಿದ್ದಾರೆ.

ಇದೇ ವಿಚಾರವಾಗಿ ಪ್ರತಿಕ್ರಿಯಿಸಿರುವ ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್, ಬೆಂಗಳೂರಿಗೆ ಕಿರಣ್ ಮಜುಂದಾರ್ ಅವರ ಕೊಡುಗೆ ಇದೆ. ಹಾಗೆಯೇ ಬೆಂಗಳೂರು ಕೂಡ ಕಿರಣ್ ಮಜುಂದಾರ್ಗೆ ಎಲ್ಲವೂ ಕೊಟ್ಟಿದೆ. ಮಳೆ ಆದ ಮೇಲೆ ಎಲ್ಲಾ ಕಡೆ ಹಾನಿಯಾಗಿ ಇಡೀ ರಾಜ್ಯದಲ್ಲಿ ಸಮಸ್ಯೆ ಆಗಿದೆ. ಮಳೆ ಬರುವಾಗ ರಸ್ತೆ ಗುಂಡಿ ಮುಚ್ಚುವುದಕ್ಕೆ ಆಗಲ್ಲ. ಹೀಗಿದ್ದರೂ ಗುಂಡಿಗಳನ್ನು ಮುಚ್ಚುತ್ತಿದ್ದೇವೆ. ಬೆಂಗಳೂರಿಗೆ ಬರುವವರ ಸಂಖ್ಯೆ ಹೆಚ್ಚಾಗಿದೆಯೇ ವಿನಃ ಬೆಂಗಳೂರಿನಿಂದ ಹೋಗುವವರ ಸಂಖ್ಯೆ ಕಡಿಮೆ ಇದೆ ಎಂದು ಅವರು ಹೇಳಿದ್ದಾರೆ.

## ತಾಲ್ಲೂಕು ಮಟ್ಟದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ಚಿಕ್ಕಮಗಳೂರು, ಅ.13:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್, ಸಂಭಾವನೆ, ಕಮೀಷನ್ ಪಡೆದಿರುವ ದಾಖಲೆ) ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟ್‌ಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

## ಅ.15 ರಂದು ಇನ್‌ಕ್ಯೂಬೇಶನ್ ಅವೇರ್‌ನೆಸ್ ಪ್ರೋಗ್ರಾಮ್ ಉದ್ಘಾಟನೆ

**ಚಿಕ್ಕಮಗಳೂರು, ಅ.13:** ಜಿಲ್ಲಾ ಕೈಗಾರಿಕಾ ಕೇಂದ್ರ, ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಹಾಗೂ ಡಿಎಸಿಜಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಇನ್‌ಕ್ಯೂಬೇಶನ್ ಒನ್ ಡೇ ಅವೇರ್‌ನೆಸ್ ಪ್ರೋಗ್ರಾಮ್ಸ್ ಅಂಡರ್ ಆರ್.ಎ.ಎಂ.ಪಿ. ಕಾರ್ಯಾಗಾರವನ್ನು ಅಕ್ಟೋಬರ್ 15 ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ.

ಆದಿಚುಂಚನಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ಡಿಪಾರ್ಟ್‌ಮೆಂಟ್‌ನ ಸೆಮಿನಾರ್ ಹಾಲ್‌ನಲ್ಲಿ ನಡೆಯುವ ಈ ಕಾರ್ಯಕ್ರಮವನ್ನು ಚಿಕ್ಕಮಗಳೂರು ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶಾಂತಾರಾಮ್ ಹೆಗಡೆ ಉದ್ಘಾಟಿಸುವರು. ಎಐಟಿ ಕಾಲೇಜಿನ ಪ್ರಾಂಶುಪಾಲ ಡಾ.ಸಿ.ಟಿ.ಜಯದೇವ್ ಅಧ್ಯಕ್ಷತೆ ವಹಿಸಲಿದ್ದು, ಚಿಕ್ಕಮಗಳೂರು ಸಣ್ಣ ಕೈಗಾರಿಕೆಗಳ ಒಕ್ಕೂಟದ ಅಧ್ಯಕ್ಷ ಸೈಯ್ಯದ್ ಮುನೀರ್ ಅಹಮ್ಮದ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸಿ.ಎಂ.ಮಹೇಶ್ ಕುಮಾರ್, ಎಐಟಿ ಕಾಲೇಜಿನ ಎಂಬಿಎ ವಿಭಾಗ ಮುಖ್ಯಸ್ಥ ಡಾ.ಕೆ. ಎಸ್.ಪ್ರಕಾಶ್‌ರಾವ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಹೆಚ್.ಎನ್.ಮಹೇಶ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಶಾಂತ್ ಭಾಗವಹಿಸುವರು.

# ಕಲಬೆರಕೆ ಕೆಮ್ಮಿನ ಸಿರಪ್ ಬಗ್ಗೆ ಎಚ್ಚರವಹಿಸಿ: ಡಬ್ಲ್ಯುಎಚ್‌ಓ ಸೂಚನೆ

**ನವದೆಹಲಿ:** ಕಲಬೆರಕೆ ಕೆಮ್ಮಿನ ಸಿರಪ್ ಸೇವಿಸಿದ ನಂತರ ಮಧ್ಯಪ್ರದೇಶದಲ್ಲಿ ಹಲವಾರು ಮಕ್ಕಳು ಸಾವನ್ನಪ್ಪಿದ ವಾರಗಳ ನಂತರ, ವಿಶ್ವ ಆರೋಗ್ಯ ಸಂಸ್ಥೆ, ಭಾರತದಲ್ಲಿ ಮೂರು ಕಲಬೆರಿಕೆ ಸಿರಪ್‌ಗಳನ್ನು ಗುರುತಿಸಿದ್ದು ಮಕ್ಕಳಿಗೆ ಶಿಫಾರಸ್ಸು ಮಾಡುವಾಗ ಎಚ್ಚರಿಕೆ ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ತಮಿಳುನಾಡು ಮೂಲದ ಸ್ರೆಸನ್ ಫಾರ್ಮಾಸ್ಯುಟಿಕಲ್ಸ್‌ನ ಕೋಲ್ಡ್ರಿಫ್, ರೆಡ್ನೆಕ್ಸ್ ಫಾರ್ಮಾಸ್ಯುಟಿಕಲ್ಸ್‌ನ ರೆಸ್ಪಿಫ್ರೆಶ್ ಟಿಆರ್ ಮತ್ತು ಶೇಪ್ ಫಾರ್ಮಾದ ರೆಲೈಫ್‌ನ ನಿರ್ದಿಷ್ಟ ಬ್ಯಾಚ್‌ಗಳನ್ನು ಬಾಧಿತ ಔಷಧಿಗಳೆಂದು ಗುರುತಿಸಿದೆ, ಈ ಸಿರಪ್ ಅನ್ನು ಯಾವುದೇ ಕಾರಣಕ್ಕೂ ಮಕ್ಕಳಿಗೆ ನೀಡದಂತೆ ತಾಕೀತು ಮಾಡಿದೆ. ಮಕ್ಕಳ ಸಾವಿನ ನಂತರ ಇತ್ತೀಚೆಗೆ ಭಾರಿ ಪ್ರತಿಕ್ರಿಯೆಗೆ ಕಾರಣವಾದ ಕೋಲ್ಡ್ರಿಫ್ ಸಿರಪ್ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆ ಎಚ್ಚರಿಕೆ ವಹಿಸಿದ್ದು ಕೋಲ್ಡ್ರಿಫ್ ಸೇರಿದಂತೆ ಇನ್ನಿತರೆ ಎರಡು ಸಿರಪ್‌ಗಳನ್ನು ಮಕ್ಕಳಿಗೆ ನೀಡದಂತೆ ಸೂಚನೆ ನೀಡಿದೆ. ಕೋಲ್ಡ್ರಿಫ್ ನಂತಹ ಕಳಪೆ ಮತ್ತು ವಿಷಕಾರಿ ಔಷಧಿ ಮತ್ತು ಸಿರಪ್ ಕಂಡುಬಂದರೆ ಸಂಬಂಧಿಸಿದ ದೇಶಗಳು ಈ ಸಂಬಂಧ ವಿಶ್ವ ಆರೋಗ್ಯ ಸಂಸ್ಥೆಗೆ ಮಾಹಿತಿ ನೀಡುವಂತೆ ಮತ್ತು ಸಂಬಂಧಿಸಿದ ವರದಿಯನ್ನು ನೀಡುವಂತೆ ಸೂಚಿಸಿದೆ.



ಸ್ರೆಸನ್ ಫಾರ್ಮಾಸ್ಯುಟಿಕಲ್ಸ್ ತಮಿಳುನಾಡು ಮೂಲದ ಸಂಸ್ಥೆಯಾಗಿದ್ದು, ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಮೇಲಿನ ಕೋಲಾಹಲದ ನಂತರ ಇತ್ತೀಚೆಗೆ ಉತ್ಪಾದನಾ ಪರವಾನಗಿ ಸಂಪೂರ್ಣವಾಗಿ ರದ್ದುಗೊಳಿಸಲಾಗಿದೆ.

ಮಧ್ಯಪ್ರದೇಶದಲ್ಲಿ ಕನಿಷ್ಠ 22 ಮಕ್ಕಳ ಸಾವಿಗೆ ಕಾರಣವಾದ ಡೈಥಿಲೀನ್ ಗ್ಲೈಕೋಲ್ ಎಂಬ ರಾಸಾಯನಿಕ ಪ್ರಯೋಗಾಲಯ ಪರೀಕ್ಷೆಗಳು ಕಂಡುಹಿಡಿದಿದ್ದು, ಸಿರಪ್‌ನಲ್ಲಿ ಸಾಮೂಹಿಕ ವಿಷಪ್ರಾಶನ ಘಟನೆಗಳಿಗೆ ಕಾರಣವಾಗುವ ರಾಸಾಯನಿಕವಿದೆ. ಈ ಸಿರಪ್ ಹೆಚ್ಚಾಗಿ ಚಿಂದ್ವಾರಾದ ಪರಾಸಿಯಾ ಗ್ರಾಮದ ನಿವಾಸಿಗಳಾಗಿದ್ದು, ಮಧ್ಯಪ್ರದೇಶದಲ್ಲಿ ಕನಿಷ್ಠ 22 ಮಕ್ಕಳ ಸಾವಿಗೆ ಕಾರಣವಾಗಿತ್ತು.

ಭಾರತದಲ್ಲಿ ಗುರುತಿಸಲಾದ ಸಿರಪ್‌ಗಳು ಗಮನಾರ್ಹ ಅಪಾಯವನ್ನುಂಟುಮಾಡುತ್ತವೆ ಮತ್ತು ಗಂಭೀರ, ಮಾರಣಾಂತಿಕ ಕಾಯಿಲೆಗೆ ಕಾರಣವಾಗಬಹುದು ಎಂದು ವಿಶ್ವ ಆರೋಗ್ಯ ಸಂಸ್ಥೆ ಹೇಳಿದೆ.

# ಪೊಲೀಸ್ ಕಾನ್‌ಸ್ಟೇಬಲ್ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥ ಸಂಚಲನ ಇಂದು

**ಚಿಕ್ಕಮಗಳೂರು: ಅ. 14:** ಕಡೂರಿನ ಪೊಲೀಸ್ ತರಬೇತಿ ಶಾಲೆ ವತಿಯಿಂದ 5ನೇ ತಂಡದ ಸಶಸ್ತ್ರ ಪೊಲೀಸ್ ಕಾನ್‌ಸ್ಟೇಬಲ್ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥ ಸಂಚಲನವನ್ನು ಅಕ್ಟೋಬರ್ 15 ರಂದು ಬೆಳಿಗ್ಗೆ 9 ಗಂಟೆಗೆ ಕಡೂರಿನ ಪೊಲೀಸ್ ತರಬೇತಿ ಶಾಲೆಯ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯ ಅತಿಥಿಗಳಾಗಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ (ತರಬೇತಿ) ಅಲೋಕ್ ಕುಮಾರ್ ಪಥ ಸಂಚಲನ ಪರಿವೀಕ್ಷಣೆ ಮತ್ತು ಬಹುಮಾನ ವಿತರಣೆ ಮಾಡುವರು, ಪಶ್ಚಿಮ ವಲಯ ಪೊಲೀಸ್ ಮಹಾನಿರೀಕ್ಷಕರಾದ ಅಮಿತ್ ಸಿಂಗ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ವಿಕ್ರಮ್ ಅಮಟೆ ಭಾಗವಹಿಸುವರು.

ಅ.17: ತರೀಕೆರೆಯಲ್ಲಿ ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿ

ಚಿಕ್ಕಮಗಳೂರು: ಅ. 14: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ತರೀಕೆರೆಯ ತಾಲ್ಲೂಕು ಆಡಳಿತ, ತರೀಕೆರೆ, ಅಜ್ಜಂಪುರ ತಾಲ್ಲೂಕು ಪಂಚಾಯಿತಿ, ತರೀಕೆರೆ ಪುರಸಭೆ, ಅಜ್ಜಂಪುರ ಪಟ್ಟಣ ಪಂಚಾಯಿತಿ ಇವುಗಳ ಸಂಯುಕ್ತ ಆಶ್ರಯದಲ್ಲಿ 14 ಮತ್ತು 17 ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ಹೊನಲು ಬೆಳಕಿನ ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭವು ಅಕ್ಟೋಬರ್ 17 ರಂದು ಮಧ್ಯಾಹ್ನ 2 ಗಂಟೆಗೆ ತರೀಕೆರೆಯ ಬಾಲಕರ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ನಡೆಯಲಿದೆ.

ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಹಾಗೂ ಮಾನ್ಯ ಉಪಮುಖ್ಯಮಂತ್ರಿ ಶ್ರೀ ಡಿ.ಕೆ.ಶಿವಕುಮಾರ್ ಅವರ ಘನ ಉಪಸ್ಥಿತಿಯಲ್ಲಿ ಮಾನ್ಯ ಇಂಧನ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಕೆ.ಜೆ.ಜಾರ್ಜ್ ಕ್ರೀಡಾಕೂಟ ಉದ್ಘಾಟಿಸುವರು. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಶ್ರೀ ಮಧು ಬಂಗಾರಪ್ಪ ಕ್ರೀಡಾ ಧ್ವಜಾರೋಹಣ ನೆರವೇರಿಸಲಿದ್ದು, ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಶ್ರೀ ಎಂ.ಕೆ.ಪ್ರಾಣೇಶ್ ಕ್ರೀಡಾ ಜ್ಯೋತಿ ಸ್ವೀಕಾರ ಮಾಡುವರು. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ ಪ್ರತಿಜ್ಞಾ ವಿಧಿ ಬೋಧನೆ ಮಾಡುವರು. ವಿಧಾನ ಪರಿಷತ್ ಸದಸ್ಯರು ಹಾಗೂ ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ ಹಾಗೂ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ತಂಡಗಳ ಪರಿಚಯ ಮಾಡುವರು.

ಶಾಸಕರಾದ ಜಿ.ಹೆಚ್.ಶ್ರೀನಿವಾಸ್ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್. ಎಲ್.ಭೋಜೇಗೌಡ, ಶಾಸಕರುಗಳಾದ ಕೆ.ಎಸ್. ಆನಂದ್, ಹೆಚ್.ಡಿ.ತಮ್ಮಯ್ಯ, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ತರೀಕೆರೆ ಪುರಸಭೆ ಅಧ್ಯಕ್ಷರಾದ ವಸಂತಕುಮಾರ್ ಭಾಗವಹಿಸುವರು.

ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಠಾರಿಯಾ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರಾದ ಸುರೋಳ್ಕರ್ ವಿಕಾಸ ಕಿಶೋರ್, ಸಮಗ್ರ ಶಿಕ್ಷಣ ಕರ್ನಾಟಕ ರಾಜ್ಯ ಯೋಜನಾ ನಿರ್ದೇಶಕರಾದ ಡಾ.ಕೆ.ವಿದ್ಯಾಕುಮಾರಿ, ಜಿಲ್ಲಾಧಿಕಾರಿ ಹಾಗೂ ರಾಜ್ಯಮಟ್ಟದ ವಾಲಿಬಾಲ್ ಪಂದ್ಯಾವಳಿ ಸಮಿತಿಯ ಅಧ್ಯಕ್ಷರಾದ ಸಿ.ಎನ್.ಮೀನಾ ನಾಗರಾಜ್, ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್. ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಮತ್ತಿತರರು ಭಾಗವಹಿಸುವರು.

# ನ್ಯಾಯಮೂರ್ತಿಗಳ ಮೇಲೆ ಪಾದರಕ್ಷೆ ಎಸೆತ : ಕ್ರಮಕ್ಕೆ ದಸಂಸ ಮನವಿ

**ಚಿಕ್ಕಮಗಳೂರು :** ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳ ಮೇಲೆ ಪಾದರಕ್ಷೆ ಎಸೆದಿರುವ ವಕೀಲರ ವಿರುದ್ಧ ದೇಶದ್ರೋಹ ಪ್ರಕರಣ ದಾಖಲಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ದಲಿತ ಸಂಘರ್ಷ ಸಮಿತಿ ಮುಖಂಡರುಗಳು ಮಂಗಳವಾರ ಜಿಲ್ಲಾಧಿಕಾರಿ ಮೂಲಕ ರಾಷ್ಟ್ರಪತಿಗಳಿಗೆ ಮನ ವಿ ಸಲ್ಲಿಸಿದರು.



ಈ ಕುರಿತು ಮಾತನಾಡಿದ ದಸಂಸ ರಾಜ್ಯ ಸಂಚಾಲಕ ಎನ್. ವೆಂಕಟೇಶ್ ದೇಶದ ಸರ್ವೋಚ್ಚ ನ್ಯಾ ಯಾಲಯ ಮತ್ತು ನ್ಯಾಯಾಧೀಶರಿಗೆ ದೇಶದ ಪ್ರತಿಯೊಬ್ಬ ನಾಗರೀಕರು ಗೌರವಿಸಬೇಕು. ಆದರೆ ನ್ಯಾಯ ಪೀಠ ಗವಾಯಿಯವರು ಕಲಾಪದಲ್ಲಿ ನಡೆಸುತ್ತಿರುವಾಗ ವಿಕೃತಿ ಮನಸ್ಸಿನ ಮನುವಾದಿ ವಕೀಲ ಪಾದರಕ್ಷೆ ಎಸೆದು ಸಂವಿಧಾನಕ್ಕೆ ಅಗೌರವ ಸಲ್ಲಿಸಿದ್ದಾರೆ ಎಂದರು.

ಇಂತಹ ದುಷ್ಕೃತ್ಯವೆಸಗಿರುವ ಯಾವುದೇ ವ್ಯಕ್ತಿಯಾಗಿರಲೀ ಆತ ದೇಶದ್ರೋಹಿಯಾಗಿದ್ದಾನೆ. ಆದ್ದರಿಂ ಆರೋಪಿ ವಕೀಲನ್ನು ದೇಶದ್ರೋಹಿ ಎಂದು ಪರಿಗಣಿಸಿ ಕೂಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎನ್‌ಸಿಪಿ ಪಕ್ಷದ ಜಿಲ್ಲಾಧ್ಯಕ್ಷ ವಿನೋದ್ ಕುಮಾರ್, ಜಿಲ್ಲಾ ಸಫಾಯಿ ಕರ್ಮಚಾ ರಿ ಅಧ್ಯಕ್ಷ ಡಿ.ರಾಜು, ದಸಂಸ ಮುಖಂಡರುಗಳಾದ ಕಮಲಮ್ಮ, ರಾಘವೇಂದ್ರ, ಪ್ರಸಾದ್, ಚಂಚಲಯ್ಯ ಮತ್ತಿತರರು ಉಪಸ್ಥಿತರಿದ್ದರು.

# ಆರ್ಥಿಕ ಸಂಪತ್ತಿಕ್ಕಿಂತ, ಆರೋಗ್ಯ ಸಂಪತ್ತು ಮುಖ್ಯ : ನಟರಾಜ್

**ಚಿಕ್ಕಮಗಳೂರು :** ಮನುಷ್ಯನಿಗೆ ಆರ್ಥಿಕ ಸಂಪತ್ತಿಕ್ಕಿಂತ, ಆರೋಗ್ಯ ಸಂಪತ್ತು ಅತಿ ಮುಖ್ಯ. ಆರೋಗ್ಯದಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಮನೆಮದ್ದಿನಿಂದಲೇ ಸರಿಪಡಿಸಿಕೊಂಡು ಶಾರೀರಿಕವಾಗಿ ಸದೃಢರಾಗಬಹುದು ಎಂದು ಹಿರಿಯ ವಕೀಲ ನಟರಾಜ್ ಹೇಳಿದರು.

ನಗರದ ಜೀವನಸಂಧ್ಯಾ ವೃದ್ಧಾಶ್ರಮದಲ್ಲಿ ಸ್ಪರ್ಶ ಆಸ್ಪತ್ರೆ ಹಾಗೂ ಆರೋಗ್ಯ ಭಾಗ್ಯ ಕನ್ನಡ ಚಾನಲ್‌ನಿಂ ದ ಮಂಗಳವಾರ ಆಯೋಜಿಸಿದ್ದ ಆರೋಗ್ಯ ತಪಾಸಣೆ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಹದಲ್ಲಾಗುವ ಸಣ್ಣಪುಟ್ಟ ಅನಾರೋಗ್ಯ ವ್ಯತ್ಯಾಸಗಳಿಗೆ ಮಾನವರು ಮನೆಮದ್ದಿನಿಂದಲೇ ಚಿಕಿತ್ಸೆ ಪ ಡೆದುಕೊಳ್ಳಬಹುದೆಂಬ ನಿಟ್ಟಿನಲ್ಲಿ ಆರೋಗ್ಯ ಭಾಗ್ಯ ಕನ್ನಡ ಚಾನಲ್ ಹಲವಾರು ವರ್ಷಗಳಿಂದ ಸೇವೆ ಒದಗಿ ಸುತ್ತಿದ್ದು ಇದರ ಸದ್ಬಳಕೆಯನ್ನು ಸಾರ್ವಜನಿಕರು ಪಡೆದುಕೊಂಡು ಯಶಸ್ವಿಗೊಳಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.



ಮುಪ್ಪಿನ ವಯಸ್ಸಿನಲ್ಲಿ ಹಿರಿಯರು ಹೆಚ್ಚು ಆರೋಗ್ಯದ ಕಡೆ ಗಮನಹರಿಸಬೇಕು. ಜೀರ್ಣಕ್ರಿಯೆಗೆ ಅನು ಕೂಲವಾಗುವ ಆಹಾರ ಪದಾರ್ಥಗಳನ್ನು ಸೇವಿಸಬೇಕು. ಜೊತೆಗೆ ಹಣ್ಣು–ಹಂಪಲು, ತರಕಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಿದರೆ ಇನ್ನಷ್ಟು ದಿನಗಳು ಆರೋಗ್ಯದಿಂದ ಜೀವಿಸಲು ಸಾಧ್ಯವಾಗಲಿದೆ ಎಂದು ಹೇಳಿದರು.

ಸ್ಪರ್ಶ ಆಸ್ಪತ್ರೆ ಮುಖ್ಯಸ್ಥ ಡಾ॥ ಚಂದ್ರಶೇಖರ್ ಸರ್ಜಾ ಪ್ರಾಸ್ತಾವಿಕವಾಗಿ ಮಾತನಾಡಿ ಕಳೆದ ಹನ್ನೆರ ಡು ವರ್ಷಗಳಿಂದ ನಿರಂತರವಾಗಿ ಆರೋಗ್ಯ ಭಾಗ್ಯ ಕನ್ನಡ ಚಾನಲ್ ಸಾಮಾಜಿಕ ಜಾಲತಾಣದಲ್ಲಿ ಸಾ ರ್ವಜನಿಕರಿಗೆ ಮಾಹಿತಿ ನೀಡುತ್ತಿದ್ದು ಇದರಿಂದ ಸುಮಾರು 5 ಲಕ್ಷ ಚಂದಾದಾರರು ಚಾನಲ್ ಸದಸ್ಯರಾಗಿ ದ್ದಾರೆ ಎಂದು ತಿಳಿಸಿದರು. ಸಾರ್ವಜನಿಕರು ಮನೆಮದ್ದಿನಲ್ಲಿ ಆರೋಗ್ಯ ಹುಡುಕಾಲು ಚಾನಲ್‌ಗೆ ಸಂಪರ್ಕಿಸಿದರೆ ಗಿಡಮೂಲಿಕೆಯ ಹಾಗೂ ವೈಜ್ಞಾನಿಕ ಔಷಧೋಪಚಾರ ಮಾಹಿತಿ ನೀಡಲಾಗುತ್ತಿದೆ. ಅಲ್ಲದೆ ಕಾಲಕ್ಕೆ ತಕ್ಕಂತೆ ತಂತ್ರಜ್ಞಾನ ವನ್ನು ಬಳಸಿಕೊಂಡು ಉತ್ತಮ ಸಂದೇಶವನ್ನು ಶಿವರಾಜ್ ನೇತೃತ್ವದಲ್ಲಿ ಪಡೆದುಕೊಳ್ಳಬಹುದು ಎಂದರು.

ಈ ಸಂದರ್ಭದಲ್ಲಿ ಪ್ರೆಸ್ ಕ್ಲಬ್ ಉಪಾಧ್ಯಕ್ಷ ಎ.ಎನ್.ಮೂರ್ತಿ, ವಕೀಲ ವಿ.ಕೆ.ರಘು, ಆರೋಗ್ಯ ಭಾಗ್ಯ ಕನ್ನಡ ಚಾನಲ್‌ನ ಮುಖ್ಯಸ್ಥ ಶಿವರಾಜ್, ವೃದ್ಧಾಶ್ರಮದ ಮುಖ್ಯ ವ್ಯವಸ್ಥಾಪಕ ಹರಿಸಿಂಗ್ ಹಾಗೂ ಹಿರಿಯ ರು, ಸ್ಪರ್ಶ ಆಸ್ಪತ್ರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**